23 January 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ನಮ್ಮ ಆಲೋಚನೆಗಳೇ ನಮ್ಮ ಭವಿಷ್ಯವನ್ನು ರೂಪಿಸುತ್ತವೆ! ಆದ್ದರಿಂದ ಸದಾ ಸಾಕಾರಾತ್ಮಕ ಆಲೋಚನೆಗಳನ್ನೇ ಮಾಡ ಬೇಕು!

-ಸ್ನೇಹಾ ಆನಂದ್

info.varthaman@gmail.com

**ಒಂದೊಳ್ಳೆ ಮಾತು**

ನಮ್ಮ ಮಾತಿನಲ್ಲಿ ಇಷ್ಟ ಹಾಗೂ ನಮ್ಮ ದೃಷ್ಟಿಯಲ್ಲಿ ಕಷ್ಟವನ್ನು ಅರಿತವರೇ ನಮ್ಮ ನಿಜವಾದ ಆತ್ಮೀಯರು

ಮೈಲಾರ ಸಾವಿತ್ರಿಬಾಯಿ

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 81 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

## ಎರಡು ಸಾಲಷ್ಟೇ ಭಾಷಣ ಓದಿ ಸದನದಿಂದ ಹೊರನಡೆದ ರಾಜ್ಯಪಾಲರು

# ತಾರಕಕ್ಕೇರಿದ ಸರ್ಕಾರ–ಗವರ್ನರ್ ಸಂಘರ್ಷ

### ರಾಜ್ಯಪಾಲರ ನಡೆಗೆ ಆಡಳಿತ ಪಕ್ಷದ ಸದಸ್ಯರ ಆಕ್ರೋಶ । ವಿಪಕ್ಷಗಳ ಬೆಂಬಲ

**ಬೆಂಗಳೂರು:** ವಿಧಾನಸಭಾ ಜಂಟಿ ಅಧಿವೇಶನದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಆರಂಭಿಕ ಎರಡು ಸಾಲನ್ನು ಮಾತ್ರ ಓದಿ ಸದನದಿಂದ ನಿರ್ಗಮಿಸಿದ್ದಾರೆ.

ಸದನದಿಂದ ರಾಜ್ಯಪಾಲರು ಹೊರನಡೆಯುತ್ತಿದ್ದಂತೆ ಆಡಳಿತ ಪಕ್ಷದ ಶಾಸಕರು ಭಾರೀ ವಿರೋಧ ವ್ಯಕ್ತಪಡಿಸಿ ಧಿಕ್ಕಾರ ಕೂಗಿದರು. ಆಡಳಿತ ಪಕ್ಷದ ಸದಸ್ಯರ ವಿರೋಧದ ನಡುವೆಯೂ ರಾಜ್ಯಪಾಲರು ವಿಧಾನಸೌಧದಿಂದ ಹೊರನಡೆದರು.

ರಾಜ್ಯದ ಅಧಿವೇಶನ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ರಾಜ್ಯಪಾಲರು ಭಾಷಣ ಓದದೇ ತೆರಳಿದ್ದಾರೆ. ವಿಧಾನಸೌಧದಲ್ಲಿ ಭಾಷಣ ಮಾಡಿದ ರಾಜ್ಯಪಾಲರು, ನನ್ನ ಸರ್ಕಾರವು ರಾಜ್ಯದ ಆರ್ಥಿಕ, ಸಾಮಾಜಿಕ, ಭೌತಿಕ ಅಭಿವೃದ್ಧಿಯನ್ನು ದ್ವಿಗುಣ ಮಾಡಲು ಬದ್ಧವಾಗಿದೆ. ಜೈ ಹಿಂದ್, ಜೈ ಕರ್ನಾಟಕ ಎಂದಷ್ಟೇ ಹೇಳಿ, ಭಾಷಣ ಮುಗಿಸಿದರು.

ರಾಜ್ಯಪಾಲರು ಭಾಷಣ ಪೀಠದಿಂದ ಕೆಳಗಿಳಿದು ಬಂದಾಗ, ವಿಧಾನ ಪರಿಷತ್ ಸದಸ್ಯ ಬಿ.ಕೆ ಹರಿಪ್ರಸಾದ್ ನೇತೃತ್ವದಲ್ಲಿ ಕಾಂಗ್ರೆಸ್ ಶಾಸಕರು ರಾಜ್ಯಪಾಲರಿಗೆ ಧಿಕ್ಕಾರ ಕೂಗಿ, ಆಕ್ರೋಶ ವ್ಯಕ್ತಪಡಿಸಿದರು. ಅವರನ್ನು ಅಡ್ಡಗಟ್ಟಿ ಭಾಷಣ ಓದುವಂತೆ ಕೇಳಿಕೊಂಡರು. ಬಿ.ಕೆ.ಹರಿಪ್ರಸಾದ್ ಅವರನ್ನು ಮಾರ್ಷಲ್‌ಗಳು ಪಕ್ಕಕ್ಕೆ ಎಳೆದರು. ಸದನದಲ್ಲಿ ಇದು ಆಡಳಿತ ಮತ್ತು ವಿಪಕ್ಷಗಳ ನಡುವೆ ಭಾರೀ ಹೈಡ್ರಾಮಾಕ್ಕೆ ಕಾರಣವಾಯಿತು.

ಪುಟ 2ಕ್ಕೆ



### ರಾಜ್ಯಪಾಲರ ತಡೆಯಲು ಕಾಂಗ್ರೆಸ್ ಶಾಸಕರ ಯತ್ನ

**ಬೆಂಗಳೂರು:** ರಾಜ್ಯಪಾಲ ಥಾವರಚಂದ್ ಗೆಹಲೋತ್ ಅವರು ವಿಧಾನ ಮಂಡಲದ ಜಂಟಿ ಅಧಿವೇಶನಕ್ಕೆ ಆಗಮಿಸಿ ಕೇವಲ ಒಂದು ಸಾಲು ಭಾಷಣ ಓದಿ ನಿರ್ಗಮಿಸುತ್ತಿದ್ದಂತೆಯೇ ವಿಧಾನ ಪರಿಷತ್ ಕಾಂಗ್ರೆಸ್ ಸದಸ್ಯರಾದ ಬಿ.ಕೆ.ಹರಿಪ್ರಸಾದ್, ಎಸ್.ರವಿ ಸೇರಿದಂತೆ ಕೆಲವು ಕಾಂಗ್ರೆಸ್ ಶಾಸಕರು ತಡೆಯಲು ಮುಂದಾದರು. ಆದರೆ ಮಾರ್ಷಲ್‌ಗಳು ಹರಿಪ್ರಸಾದ್ ಸೇರಿದಂತೆ ತಡೆಯಲು ಮುಂದಾದ ಶಾಸಕರನ್ನು ಎಳೆದು ಹೊರಹಾಕಿದರು. ಈ ಸಂದರ್ಭ ನೂಕಾಟದಲ್ಲಿ ಹರಿಪ್ರಸಾದ್ ಅವರ ಬಟ್ಟೆ ಹರಿದುಹೋಯಿತು. ರಾಜ್ಯಪಾಲರು ಕಾರು ಹತ್ತಿದ ಕೂಡಲೇ, ಸಂವಿಧಾನ ಧಿಕ್ಕರಿಸಿದ ರಾಜ್ಯಪಾಲರಿಗೆ ಎಂದು ವಿಧಾನಪರಿಷತ್ ಸದಸ್ಯ ಐವಾನ್ ಡಿಸೋಜಾ ಸೇರಿ ಇತರರು ಘೋಷಣೆ ಕೂಗಿದರು.

ನಂತರ ಮಾತನಾಡಿದ ಬಿ.ಕೆ.ಹರಿಪ್ರಸಾದ್, ರಾಷ್ಟ್ರೀಯ ಸ್ವಯಂಸೇವಕ ಸಂಘ ಹಾಗೂ ಪ್ರಧಾನಿ ನರೇಂದ್ರ ಮೋದಿಯವರ ನಿರ್ದೇಶನದಂತೆ ರಾಜ್ಯಪಾಲರು ನಡೆದಕೊಂಡಿದ್ದಾರೆ ಎಂದು ಟೀಕಿಸಿದರು.

### ಭಾಷಣ ಮಂಡಿಸಿದ ಸಿಎಂ

**ಬೆಂಗಳೂರು:** ಜಂಟಿ ಅಧಿವೇಶನದಲ್ಲಿ ರಾಜ್ಯಪಾಲರು ಓದಲು ಸರ್ಕಾರ ಸಿದ್ಧಪಡಿಸಿದ್ದ 28 ಪುಟಗಳ ಭಾಷಣವನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ಗುರುವಾರ ಸದನದಲ್ಲಿ ಮಂಡಿಸಿದ ನಂತರ ಎಲ್ಲಾ ಶಾಸಕರಿಗೆ ವಿತರಿಸಿದರು.

ಜಂಟಿ ಅಧಿವೇಶನ ಉದ್ದೇಶಿಸಿ ಸರ್ಕಾರ ಸಿದ್ಧಪಡಿಸಿದ್ದ ಭಾಷಣವನ್ನು ಓದದೆ, ತಾವೇ ಸಿದ್ಧಪಡಿಸಿಕೊಂಡು ಬಂದಿದ್ದ

ಪುಟ 2ಕ್ಕೆ

### ಚರ್ಚಿಸಿ ಕಾನೂನು ಹೋರಾಟ

ರಾಜ್ಯಪಾಲ ಥಾವರಚಂದ್ ಗೆಹಲೋತ್ ನಡೆಯನ್ನು ವಿರೋಧಿಸಿ ಕೋರ್ಟ್‌ನಲ್ಲಿ ದಾವೆ ಹೂಡುವ ಬಗ್ಗೆ ಕಾನೂನು ತಜ್ಞರೊಂದಿಗೆ ಚರ್ಚಿಸಿ ನಿರ್ಧರಿಸಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು. ನರೇಗಾ ಪುನಸ್ಥಾಪನೆ ಮಾಡುವವರೆಗೆ ನಿರಂತರ ಹೋರಾಟ ನಡೆಯಲಿದೆ. ರೈತ ವಿರೋಧಿ ಕಾಯ್ದೆಗಳನ್ನ ವಾಪಪ್

ಪುಟ 2ಕ್ಕೆ

## 5 ವರ್ಷ ವಯೋಮಿತಿ ಸಡಿಲಿಕೆ

### ಉದ್ಯೋಗಾಂಕ್ಷಿಗಳಿಗೆ ಸಿಹಿ ಸುದ್ದಿ: ಸಂಪುಟ ಸಭೆಯಲ್ಲಿ ನಿರ್ಣಯ

**ಬೆಂಗಳೂರು:** ಕರ್ನಾಟಕ ಸಿವಿಲ್ ಸೇವಾ ಹುದ್ದೆಗಳ ನೇಮಕಾತಿಯಲ್ಲಿ ಎಲ್ಲ ವರ್ಗದ ಅಭ್ಯರ್ಥಿಗಳಿಗೆ 5 ವರ್ಷ ವಯೋಮಿತಿ ಸಡಿಲಿಕೆ ಮಾಡಲು ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ನೀಡಲಾಗಿದೆ.



ವಿಧಾನಸೌಧದಲ್ಲಿ ಗುರುವಾರ ಸಿಎಂ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ರಾಜ್ಯದ ಸರ್ಕಾರಿ ಉದ್ಯೋಗಾಂಕ್ಷಿಗಳಿಗೆ ಮತ್ತು ಅಲೆಮಾರಿ ಸಮುದಾಯಕ್ಕೆ ಸಿಹಿ ಸುದ್ದಿ ನೀಡಲಾಗಿದೆ.

ಈವರೆಗೂ ಸಾಮಾನ್ಯ ವರ್ಗಕ್ಕೆ 35 ವರ್ಷ ವಯೋಮಿತಿ ಇದ್ದರೆ, ಎಸ್.ಸಿ/ಎಸ್.ಟಿ ಅಭ್ಯರ್ಥಿಗಳಿಗೆ 38 ವರ್ಷ ನಿಗದಿಪಡಿಸಲಾಗಿತ್ತು. ಈಗ ಎಲ್ಲ ವರ್ಗದ ಅಭ್ಯರ್ಥಿಗಳಿಗೆ 5 ವರ್ಷ ವಯೋಮಿತಿ ಸಡಿಲಿಕೆ ನೀಡಲಾಗಿದೆ. ಇದು 2027ರ ಡಿ.31ರ ವರೆಗೆ ಹೊರಡಿಸಲಾಗಿರುವ ಎಲ್ಲ ಅಧಿಸೂಚನೆಗಳಿಗೆ ಅನ್ವಯ ಆಗಲಿದೆ ಎಂದು ನಿರ್ಣಯ ಮಾಡಲಾಗಿದೆ.

ಕರ್ನಾಟಕ ಸಿವಿಲ್ ಸೇವಾ ಹುದ್ದೆಗಳಿಗೆ ವಯೋಮಿತಿ ಸಡಿಲಿಕೆಗೆ ಕ್ಯಾಬಿನೆಟ್ ಒಪ್ಪಿದೆ. ಅಲೆಮಾರಿ ಮತ್ತು ಅರೆ ಅಲೆಮಾರಿ ಸಮಾಜದ ಜನರಿಗೆ ಮನೆ ನಿರ್ಮಾಣಕ್ಕೆ ಸಹಾಯ ಹಸ್ತ ನೀಡಲು ರಾಜ್ಯ ಸರ್ಕಾರ ನಿರ್ಧರಿಸಿದೆ. 100 ಕೋಟಿ ಮೊತ್ತದಲ್ಲಿ, 1200 ಚದರ ಅಡಿ ವಿಸ್ತೀರ್ಣದ ನಿವೇಶನದಲ್ಲಿ 600 ಚದರ ಅಡಿಗಳ ವಿಸ್ತೀರ್ಣದ ಮನೆಗಳ ನಿರ್ಮಾಣಕ್ಕೆ ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ಪುಟ 2ಕ್ಕೆ

## ಮುಡಾ ಹಗರಣ: 460ಕೋಟಿ ಮೌಲ್ಯದ ಆಸ್ತಿ ಮುಟ್ಟುಗೋಲು ಹಾಕಿದ ಇಡಿ

ಮೈಸೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಇತರರ ಮುಡಾ ಹಗರಣ ಪ್ರಕ ರಣದಲ್ಲಿ 2002ರ ಹಣ ಅಕ್ರಮ ವರ್ಗಾ ವಣೆ ತಡೆ ಕಾಯ್ದೆ (ಪಿಎಂಎಲ್‌ಎ) ನಿಬಂಧನೆಗಳ ಅಡಿಯಲ್ಲಿ ಬೆಂಗಳೂರು ವಲಯ ಕಚೇರಿಯ ಜಾರಿ ನಿರ್ದೇಶನಾಲಯ (ಇಡಿ) ಜ.21ರಂದು 10 ಸ್ಥಿರ ಆಸ್ತಿಗಳನ್ನು ಅಂದರೆ 6 ಅಕ್ರಮವಾಗಿ ಮಂಜೂರು ಮಾಡಲಾದ ಮುಡಾ ನಿವೇಶನಗಳು, 3 ಸ್ಥಿರ ಆಸ್ತಿಗಳು ಮತ್ತು 20.85 ಕೋಟಿ ರೂ. ಮಾರುಕಟ್ಟೆ ಮೌಲ್ಯದ ಒಂದು ವಾಣಿಜ್ಯ ಕಟ್ಟಡವನ್ನು ಸೇರಿ 460 ಕೋಟಿ ರೂ. ಮೌಲ್ಯವನ್ನು ತಾತ್ಕಾಲಿಕವಾಗಿ ಮುಟ್ಟುಗೋಲು ಹಾಕಿಕೊಂಡಿದೆ.



ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಿಂದ ಅಕ್ರಮ ನಿವೇಶನ

ಪುಟ 2ಕ್ಕೆ

## ಅಧಿವೇಶನ ದುರುಪಯೋಗ: ಎಚ್.ಡಿ.ಕುಮಾರಸ್ವಾಮಿ ಟೀಕೆ

**ಬೆಂಗಳೂರು:** ಸರ್ಕಾರ ಸಿದ್ಧಪಡಿಸಿದ ಭಾಷಣ ಓದದೇ ತಾವೇ ಸಿದ್ಧಪಡಿಸಿದ ಭಾಷಣ ಓದಿ ಸದನದಿಂದ ಹೊರನಡೆದ ರಾಜ್ಯಪಾಲ ಗೆಹಲೋತ್ ಅವರ ನಡೆಯನ್ನು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಸಮರ್ಥಿಸಿಕೊಂಡಿದ್ದಾರೆ.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತನ್ನ ವೈಫಲ್ಯಗಳನ್ನು ಜನರಿಂದ ಮರೆಮಾಚುವ ಉದ್ದೇಶದಿಂದ ರಾಜ್ಯ ಸರ್ಕಾರ ಜಂಟಿ ಅಧಿವೇಶನವನ್ನು ದುರುಪಯೋಗಪಡಿಸಿಕೊಂಡಿದೆ. ಈ ಸರ್ಕಾರದ ಸಣ್ಣತನದ ನಡವಳಿಕೆಯಿಂದ ಇಂತಹ ಪ್ರಕರಣ ಕರ್ನಾಟಕದಲ್ಲಿ ಮೊದಲ ಬಾರಿಗೆ ನಡೆದಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಬೀದಿಯಲ್ಲಿ ಚರ್ಚೆ ಮಾಡುವಂತಹ ವಿಷಯಗಳನ್ನು ಈ ಸರ್ಕಾರ ಮತ್ತು ಅದರ ಮಂತ್ರಿಗಳು ರಾಜ್ಯಪಾಲರ ಮುಖಾಂತರ ವಿಧಾನಸಭೆಯಲ್ಲಿ ಹೇಳಿಸಬೇಕು ಎಂದು ಬಯಸಿದ್ದರು. ಹೀಗಾಗಿ ಇವತ್ತಿನ ಘಟನೆ ನಡೆದಿದೆ. ಒಟ್ಟಾರೆ ಈ ಸರ್ಕಾರ ತನ್ನ ತಪ್ಪುಗಳನ್ನು ಮರೆಮಾಚಲು ಜಂಟಿ ಅಧಿವೇಶನ ದುರುಪಯೋಗಪಡಿಸಿಕೊಂಡಿದೆ ಎಂದು ಟೀಕಿಸಿದರು.

## ನಮ್ಮ ನಾಯಕರು ನನಗೆ ನಿರಾಸೆ ಮಾಡಲ್ಲ!

### ವಿದೇಶದಲ್ಲಿ ಪ್ರತಿಧ್ವನಿಸಿದ ರಾಜ್ಯ ರಾಜಕೀಯ । ಎನ್‌ಡಿಟಿವಿಗೆ ಡಿಕೆಶಿ ಸಂದರ್ಶನ



**ದಾವೋಸ್:** ನಮ್ಮ ನಾಯಕರು ನನ್ನನ್ನು ನಿರಾಸೆಗೊಳಿಸುವುದಿಲ್ಲ ಎಂಬ ಭರವಸೆಯಲ್ಲಿ ಇರುವುದಾಗಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿದೇಶದಲ್ಲಿಯೂ ಸಿಎಂ ಕುರ್ಚಿ ಸಿಗುವ ಬಗ್ಗೆ ಭರವಸೆ ವ್ಯಕ್ತಪಡಿಸಿದ್ದಾರೆ.

ಸ್ವಿಟ್ಜರ್‌ಲೆಂಡ್‌ನ ದಾವೋಸ್‌ನಲ್ಲಿ ನಡೆಯುತ್ತಿರುವ ವಿಶ್ವ ಆರ್ಥಿಕ ಶೃಂಗಸಭೆಯಲ್ಲಿ ಭಾಗವಹಿಸಿರುವ ಡಿ.ಕೆ.ಶಿವಕುಮಾರ್ ಅವರು, ಎನ್‌ಡಿಟಿವಿ ಪ್ರಧಾನ ಸಂಪಾದಕ ರಾಹುಲ್ ಕನ್ವಾಲ್ ಅವರಿಗೆ ವಿಶೇಷ ಸಂದರ್ಶನ ನೀಡಿದ್ದಾರೆ. ಮುಖ್ಯಮಂತ್ರಿ ಹುದ್ದೆಗಾಗಿ ನಡೆಯುತ್ತಿರುವ ಜಗಳದ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿರುವ ಅವರು, ನಮ್ಮ ನಾಯಕರು ಈ ಬಗ್ಗೆ ಸೂಕ್ತ ನಿರ್ಧಾರ ತೆಗೆದುಕೊಳ್ಳುತ್ತಾರೆ ಎಂದು ತಿಳಿಸಿದ್ದಾರೆ.

ವಿದೇಶದಲ್ಲಿ ರಾಜ್ಯ ರಾಜಕೀಯದ ಕುರಿತು ಮಾತನಾಡಿರುವ ಅವರು, ಇದು ಮಾಧ್ಯಮಗಳೊಂದಿಗೆ ಚರ್ಚಿಸುವ ವಿಷಯವಲ್ಲ. ಇದು ತೆರೆಮರೆಯಲ್ಲಿ ನಡೆಯಬೇಕಾದ ಚರ್ಚೆ. ನಾನು ಯಾವಾಗಲೂ ಧನಾತ್ಮಕವಾಗಿ ಚಿಂತಿಸುತ್ತೇನೆ. ನಾನು ಭರವಸೆಯ ಮೇಲೆ ಬದುಕುತ್ತೇನೆ. ಕಠಿಣ ಪರಿಶ್ರಮ ಯಾವಾಗಲೂ ಫಲ ನೀಡುತ್ತದೆ. ನಾನು ಅದನ್ನು ಸಂಪೂರ್ಣವಾಗಿ ನಂಬುತ್ತೇನೆ. ನನ್ನ ನಾಯಕ ಖಂಡಿತವಾಗಿಯೂ ನನ್ನನ್ನು ನಿರಾಸೆಗೊಳಿಸುವುದಿಲ್ಲ ಎಂದು ನಾನು ಭಾವಿಸುತ್ತೇನೆ ಎಂದರು.

ಡಿ.ಕೆ.ಶಿವಕುಮಾರ್ ಪಾಳಯದಲ್ಲಿ ಸಾಕಷ್ಟು ಶಾಸಕರಿಲ್ಲವೇ ಎಂಬ ಬಗ್ಗೆ ಪ್ರಶ್ನಿಸಿದ್ದಕ್ಕೆ, ಯಾರು ಹೇಳಿದ್ದು? ನನಗೆ 140 ಶಾಸಕರ ಬೆಂಬಲ ಇದೆ. ನಾನು ಪಕ್ಷದ ರಾಜ್ಯಾಧ್ಯಕ್ಷನಾಗಿದ್ದೇನೆ. ಸಂಖ್ಯಾಬಲದ ಮೇಲೆ ತೀರ್ಮಾನವಾಗುವುದಿಲ್ಲ. ನಾವೆಲ್ಲರೂ ಒಂದು ತಂಡವಾಗಿ ಕೆಲಸ ಮಾಡುತ್ತೇವೆ. ಸಿದ್ದರಾಮಯ್ಯನವರಿಗೂ 140, ನನಗೆ 140 ಶಾಸಕರ ಬೆಂಬಲವಿದೆ. ನಾವಿಬ್ಬರೂ ಕುಳಿತು ಚರ್ಚಿಸಿದ್ದೇವೆ. ಅದನ್ನು ಕೇಂದ್ರ ನಾಯಕತ್ವಕ್ಕೆ ಬಿಟ್ಟಿದ್ದೇವೆ ಮತ್ತು ಅದರಂತೆ ನಡೆದುಕೊಳ್ಳುತ್ತೇವೆ ಎಂದು ಹೇಳಿದರು. ರಾಜಸ್ಥಾನ ಮುಖ್ಯಮಂತ್ರಿ ಅಶೋಕ್ ಗೆಹ್ಲೋಟ್ ಅವರ ಅಧಿಕಾರಾವಧಿಯಲ್ಲಿ ರಾಜಸ್ಥಾನ ಕಾಂಗ್ರೆಸ್ ಬಿಕ್ಕಟ್ಟಿಗೆ ಹೋಲಿಸಿದ ಪ್ರಶ್ನೆಗೆ ಉತ್ತರಿಸಿದ ಅವರು, ನಾನು ಇತರ ರಾಜ್ಯಗಳು, ಇತರ ವಿಷಯಗಳ ಬಗ್ಗೆ ಪ್ರತಿಕ್ರಿಯಿಸಲು ಬಯಸುವುದಿಲ್ಲ. ಪಕ್ಷದ ನಾಯಕತ್ವ ಏನು ನಿರ್ಧರಿಸುತ್ತದೆಯೋ ಅದಕ್ಕೆ ನಾವು ಬದ್ಧ ಎಂದು ತಿಳಿಸಿದರು.

## ರಾಜ್ಯಪಾಲರು ಕೇಂದ್ರ ಸರ್ಕಾರದ ಕೈಗೊಂಬೆ

### ಭಾಷಣ ಓದದೇ ಸಂವಿಧಾನಿಕ ವಿಧಿ ಉಲ್ಲಂಘನೆ: ಸಿಎಂ ಸಿದ್ದರಾಮಯ್ಯ ಕಿಡಿ

**ಬೆಂಗಳೂರು:** ಕೇಂದ್ರ ಸರ್ಕಾರದ ಕೈಗೊಂಬೆಯಂತೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ವರ್ತಿಸಿದ್ದಾರೆ. ರಾಜ್ಯ ಸಚಿವ ಸಂಪುಟ ಸಿದ್ಧಪಡಿಸಿದ ಭಾಷಣ ಓದದೇ ಸಂವಿಧಾನದ ವಿಧಿಯನ್ನ ಉಲ್ಲಂಘನೆ ಮಾಡಿದ್ದಾರೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು.

ಹೊಸ ವರ್ಷದ ಮೊದಲ ಅಧಿವೇಶನದ ಮೊದಲ ದಿನ ಗುರುವಾರ ವಿಧಾನಸಭೆಯಲ್ಲಿ ಭಾರೀ ಹೈಡ್ರಾಮ ನಡೆಯಿತು. ರಾಜ್ಯಪಾಲರು ಅಧಿವೇಶನ ಆರಂಭಿಸಿ ಆರಂಭಿಕ ಸಾಲನ್ನು ಹೇಳಿ ಸದನ, ದಿಂದ ಹೊರ ನಡೆದರು. ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಮುಖ್ಯಮಂತ್ರಿಗಳು ರಾಜ್ಯಪಾಲರ ನಡೆಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಯಾವುದೇ ಸರ್ಕಾರ ಬಂದಾಗ ಜಂಟಿ ಅಧಿವೇಶನ ಉದ್ದೇಶಿಸಿ ಭಾಷಣ ಮಾಡುವುದು ರಾಜ್ಯಪಾಲರ ಸಾಂವಿಧಾನಿಕ ಕರ್ತವ್ಯ. ಆರ್ಟಿಕಲ್ 176(1), 163ರ ಉಲ್ಲಂಘನೆ ಬಹಳ ಸ್ಪಷ್ಟವಾಗಿದೆ. ಈ ವಿಧಿಗಳ ಅನ್ವಯ ರಾಜ್ಯಪಾಲರು ತಾವು ತಯಾರು ಮಾಡಿದ ಭಾಷಣ ಓದುವಂತಿಲ್ಲ. ರಾಜ್ಯ ಸರ್ಕಾದ ಸಂಪುಟ ಸಿದ್ಧಪಡಿಸಿದ ಭಾಷಣವನ್ನೇ ಓದಲೇಬೇಕು ಎಂದು ಹೇಳಿದರು.

ಇದು ವರ್ಷದ ಮೊದಲ ಜಂಟಿ ಅಧಿವೇಶನ, ಜೊತೆಗೆ ವಿಶೇಷ ಅಧಿವೇಶನವೂ ಹೌದು. ಕೇಂದ್ರ ಸರ್ಕಾರ ನರೇಗಾ ರದ್ದು ಮಾಡಿ ವಿಬಿ ಜಿರಾಮ್ ಜಿ ಕಾಯ್ದೆಯನ್ನ ಹೊಸದಾಗಿ ಜಾರಿ ಮಾಡಿದೆ. ಇದಕ್ಕೆ ನಮ್ಮ ಸರ್ಕಾರದಿಂದ ತೀವ್ರ ವಿರೋಧ ಇದೆ. ಮಹಾತ್ಮ ಗಾಂಧಿ ಹೆಸರು ತೆಗೆದಿರೋದಕ್ಕೆ ನಮ್ಮ ವಿರೋಧ ಇದೆ. 2005ರಲ್ಲಿ ದಿ.ಮನಮೋಹನ್ ಸಿಂಗ್ ಪ್ರಧಾನಿಯಾಗಿದ್ದಾಗ ಸಂವಿಧಾನ ನಿರ್ದೇಶನಗಳಲ್ಲಿ ಇರುವಂತೆ ರೈಟ್ ಟು ವರ್ಕ್, ರೈಟ್ ಟು ಫುಡ್, ರೈಟ್ ಟು ಎಜುಕೇಶನ್, ಆರ್‌ಟಿಐ ಕಾಯ್ದೆಗಳನ್ನ ಜಾರಿಗೆ ತಂದರು. ಈ ಕಾಯ್ದೆಗಳನ್ನು ರದ್ದು ಮಾಡುವುದು ಕೇಂದ್ರ ಸರ್ಕಾರದ ಜನವಿರೋಧಿ ನೀತಿ ಎಂದು ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.




ನರೇಗಾ ಯೋಜನೆಯಿಂದ ಮಹಿಳೆಯರು, ಸಣ್ಣ ರೈತರಿಗೆ ಅನುಕೂಲವಾಗುತ್ತಿತ್ತು. ಶೇ.53 ಮಹಿಳೆಯರು ಮತ್ತು ಶೇ.28ರಷ್ಟು ದಲಿತರಿದ್ದಾರೆ. ಇವರಿಗೆ 365 ದಿನಗಳಲ್ಲಿ ಯಾವಾಗ ಕೆಲಸ ಕೇಳಿದರೂ ಕೆಲಸ ಕೊಡಬಹುದಿತ್ತು. ಆದರೆ ವಿಬಿಜಿರಾಮ್‌ಜಿ ಕಾಯ್ದೆ ಅನ್ವಯ ಕೇಂದ್ರ ಸರ್ಕಾರ ಎಲ್ಲಿ ಹೇಳುತ್ತದೋ ಅಲ್ಲಿ ಕೆಲಸ ಮಾಡಬೇಕು ಎಂದು ಕಿಡಿಕಾರಿದರು. ನಾವು ಅದನ್ನ ವಿರೋಧ ಮಾಡಿದ್ದೇವೆ ಅಂತ ಭಾಷಣದಲ್ಲಿ ಸೇರಿಸಲಾಗಿತ್ತು. ಆದರೆ ರಾಜ್ಯಪಾಲರು ಜನಪ್ರತಿನಿಧಿಗಳ ಸಭೆಗೆ ಅವಮಾನ ಮಾಡಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ರಾಜ್ಯಪಾಲರು ಕ್ಯಾಬಿನೆಟ್ ತಯಾರು ಮಾಡಿದ ಭಾಷಣ ಓದದೇ ಅವರೇ ಮಾಡಿದ ಒಂದು ಪ್ಯಾರ ಭಾಷಣ ಓದಿ, ಸಂವಿಧಾನದ ವಿಧಿಗಳನ್ನ ಉಲ್ಲಂಘನೆ ಮಾಡಿದ್ದಾರೆ. ಇದು ಜನಪ್ರತಿನಿಧಿಗಳ ಸಭೆಗೆ ಮಾಡಿದ ಅವಮಾನ. ಸಂವಿಧಾನ ಬಂದಾಗಿನಿಂದ ನಡೆದು ಬಂದ ಪರಂಪರೆಯನ್ನು ಉಲ್ಲಂಘಿಸಿದ್ದಾರೆ. ಕೇಂದ್ರ ಸರ್ಕಾರ ತನ್ನ ತಪ್ಪುಗಳನ್ನ ಮುಚ್ಚಿಟ್ಟುಕೊಳ್ಳಲು ತಾನು ತಯಾರು ಮಾಡಿದ ಭಾಷಣವನ್ನ ಓದಿಸಿದೆ. ಇದು ಸಂವಿಧಾನದ ಉಲ್ಲಂಘನೆ ಎಂದು ಕಿಡಿಕಾರಿದರು.

## ಬಿಜೆಪಿಗರು ನನ್ನ ಬಟ್ಟೆ ಹರಿದರು: ಹರಿಪ್ರಸಾದ್

**ಬೆಂಗಳೂರು:** ರಾಜ್ಯಪಾಲರು ಸ್ವೇಚ್ಛಾಚಾರವಾಗಿ ನಡೆದುಕೊಳ್ಳವಂತಿಲ್ಲ ಎಂದು ತಮಿಳುನಾಡು ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ಹೇಳಿದೆ.



ಆದರೆ ರಾಜ್ಯಪಾಲರ ವಿರುದ್ಧ ಪ್ರತಿಭಟನೆ ಮಾಡಿದ ಸಂದರ್ಭದಲ್ಲಿ ಹಿಂದಿನಿಂದ ಬಂದು ಬಿಜೆಪಿಗರು ನನ್ನ ಬಟ್ಟೆ ಹರಿದಿದ್ದಾರೆ. ಅವರಿಗೆ ಮುಂದಿನಿಂದ ಬರುವ ಶಕ್ತಿ ಇಲ್ಲ. ಹಿಂದಿನಿಂದ ಬಂದು ಹರಿದಿದ್ದಾರೆ ರಣಹೇಡಿಗಳು. ಬ್ರಿಟೀಷರ ಬೂಟ್ ನೆಕ್ಕಿದವರು. ಕರ್ನಾಟಕದ ಹೆಸರಿಗೆ ಮಸಿ ಬಳಿಯುವ ಕೆಲಸ ಮಾಡುತ್ತಿದ್ದಾರೆ ಎಂದು ಬಿಜೆಪಿ ನಾಯಕರ ವಿರುದ್ಧ ಬಿ.ಕೆ.ಹರಿಪ್ರಸಾದ್ ವಾಗ್ದಾಳಿ ನಡೆಸಿದ್ದಾರೆ.

## ಜ.28ರಂದು ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ

**ಬೆಂಗಳೂರು:** ರಾಜ್ಯ ವಿಧಾನಮಂಡಲ ವಿಶೇಷ ಅಧಿವೇಶನದ ಹಿನ್ನೆಲೆಯಲ್ಲಿ ರಾಜ್ಯಪಾಲರು ಮಾಡಿದ ಭಾಷಣ ಮತ್ತು ವಿರೋಧ ಪಕ್ಷಗಳು ಸದನದಲ್ಲಿ ಚರ್ಚಿಸಬಹುದಾದ ವಿಷಯಗಳಿಗೆ ಸಂಬಂಧಿಸಿದಂತೆ ಚರ್ಚಿಸಲು ಜನವರಿ 28ರಂದು ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಕರೆದಿದೆ.



ಅರಮನೆ ರಸ್ತೆಯ ಹೋಟೆಲ್ ರ್‍ಯಾಡಿಸನ್ ಬ್ಲೂ ನಲ್ಲಿ ಜ.28ರಂದು ಬುಧವಾರ ಸಂಜೆ 6.30 ಗಂಟೆಗೆ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯಲಿದೆ. ಮುಖ್ಯಮಂತ್ರಿ ಸಿದ್ದ ರಾಮಯ್ಯ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ.

# ಸ್ಪೀಕರ್‌ಗೆ ವಿಪಕ್ಷ ನಾಯಕರ ದೂರು

### ರಾಜ್ಯಪಾಲರಿಗೆ ಅಡ್ಡಿಪಡಿಸಿದವರ ವಿರುದ್ಧ ಕ್ರಮಕ್ಕೆ ಆರ್.ಅಶೋಕ್ ಆಗ್ರಹ

**ಬೆಂಗಳೂರು:** ಜಂಟಿ ಅಧಿವೇಶನದಲ್ಲಿ ರಾಜ್ಯಪಾಲರನ್ನು ಹೊರಗೆ ಹೋಗದಂತೆ ಅಡ್ಡಿಪಡಿಸಿದ ಕಾಂಗ್ರೆಸ್ ಶಾಸಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ವಿಪಕ್ಷ ನಾಯಕ ಆರ್.ಅಶೋಕ್ ಅವರು, ವಿಧಾನಸಭಾ ಸ್ಪೀಕರ್ ಯು.ಟಿ.ಖಾದರ್ ಅವರಿಗೆ ದೂರು ಸಲ್ಲಿಸಿದ್ದಾರೆ.

ರಾಜ್ಯಪಾಲರಿಗೆ ಅಡ್ಡಿಪಡಿಸಿದ ಬಗ್ಗೆ ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮ–27ನ್ನು ಉಲ್ಲೇಖಿಸಿ ದೂರು ನೀಡಿದ್ದಾರೆ. ಸಂವಿಧಾನದ 175 ಅಥವಾ 176ನೇ ಅನುಚ್ಛೇದದಡಿ ರಾಜ್ಯಪಾಲರು ಭಾಷಣ ಮಾಡುವಾಗ ಅಥವಾ ನಿರ್ಗಮಿಸುವಾಗ ಯಾವುದೇ ಸದಸ್ಯರು ಅಡ್ಡಿ ಅಥವಾ ವಿಘ್ನ ಉಂಟು ಮಾಡುವುದು ಸದನದ ಆದೇಶದ ತೀವ್ರ ಉಲ್ಲಂಘನೆಯಾಗುತ್ತದೆ. ರಾಜ್ಯಪಾಲರು ನಿರ್ಗಮಿಸುವಾಗ ಅವರನ್ನು ಅಡ್ಡಗಟ್ಟಿ, ತಳ್ಳಾಡಿ ಅಗೌರವ ತೋರಿದ ಸದಸ್ಯರ ವಿರುದ್ಧ ಕೂಡಲೇ ಶಿಸ್ತು ಕ್ರಮ ಜರುಗಿಸಬೇಕು ಎಂದು ದೂರಿನಲ್ಲಿ ಒತ್ತಾಯಿಸಲಾಗಿದೆ.

ಸದನದಲ್ಲಿ ಅಗೌರವ ತೋರಿದವರನ್ನು ಹೊರಹಾಕಬೇಕು ಎಂದು ಒತ್ತಾಯಿಸಿದರು. ಇದೇ ರಾಜ್ಯಪಾಲರು ಸರ್ಕಾರದ ಅನೇಕ ಬಿಲ್‌ಗಳಿಗೆ ಸಹಿ ಹಾಕಿದ್ದಾರೆ. ಆಗ ರಾಜ್ಯಪಾಲರು ಸರಿಯಾಗಿದ್ದರೆಯೇ ಎಂದು



ಅಶೋಕ್ ಸರ್ಕಾರವನ್ನು ಪ್ರಶ್ನಿಸಿದರು.

ರಾಜ್ಯಪಾಲರಿಗೆ ಅಡ್ಡಗಟ್ಟಿರುವುದನ್ನು ಖಂಡಿಸಿರುವ ವಿಪಕ್ಷ ನಾಯಕ ಆರ್.ಅಶೋಕ್, ಇದೊಂದು ಕರಾಳ ದಿನ ಎಂದು ಕರೆದಿದ್ದಾರೆ. ಸಂವಿಧಾನ ಪ್ರಕಾರ ರಾಜ್ಯಪಾಲರು ತಮ್ಮ ಕರ್ತವ್ಯ ನಿರ್ವಹಿಸಿ ಧನ್ಯವಾದ ಹೇಳಿ ಹೊರಟಿದ್ದಾರೆ. ಇದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿದರು.

ರಾಜ್ಯಪಾಲರು ಸಂವಿಧಾನದ ಅಡಿಯಲ್ಲಿ ಕಾರ್ಯನಿರ್ವಹಿಸಿದ್ದು, ಅವರ ಭಾಷಣವನ್ನು ಓದದೇ ಹೊರಡುವುದಕ್ಕೂ ಅವರಿಗೆ ಅಧಿಕಾರವಿದೆ. ಆದರೆ ಕಾಂಗ್ರೆಸ್ ಪಕ್ಷದವರು ರಾಜ್ಯಪಾಲರನ್ನು ಅಡ್ಡಗಟ್ಟಿ ಅಗೌರವ ತೋರಿಸಿದ್ದು ಗೂಂಡಾಗಿರಿ ಎಂದು ಕಿಡಿಕಾರಿದರು. ಅಧಿವೇಶನವನ್ನು ಕಾಂಗ್ರೆಸ್ ಕರಾಳ ರೀತಿಯಲ್ಲಿ ನಡೆಸಿದೆ ಎಂದು ಆರೋಪಿಸಿದರು.

ಲೋಕಭವನವನ್ನು ಕಾಂಗ್ರೆಸ್ ಭವನ ವನ್ನಾಗಿಸಲು ಸರ್ಕಾರ ಹೊರಟಿದೆ. ಹೈಕಮಾಂಡ್ ನಾಯಕರಾದ ರಾಹುಲ್ ಗಾಂಧಿ ಮತ್ತು ಸೋನಿಯಾ ಗಾಂಧಿ ಅವರನ್ನು ಮೆಚ್ಚಿಸುವ ಕುತಂತ್ರ ಇದಾಗಿದೆ ಎಂದು ಅಶೋಕ್ ವಾಗ್ದಾಳಿ ಅಶೋಕ್ ನಡೆಸಿದರು.

### ಪ್ರಜಾಪ್ರಭುತ್ವ ಕಗ್ಗೊಲೆ

ಕಾಂಗ್ರೆಸ್ ಸರ್ಕಾರ ಪ್ರಜಾಪ್ರಭುತ್ವದ ಕಗ್ಗೊಲೆ ಮಾಡಿದೆ ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ ವಿಜಯೇಂದ್ರ ವಾಗ್ದಾಳಿ ನಡೆಸಿದರು. ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಅವರು, ತನ್ನ ವೈಫಲ್ಯಗಳನ್ನು ಮುಚ್ಚಿಹಾಕಲು ಹಾಗೂ ದ್ವೇಷ ರಾಜಕಾರಣ ಮಾಡಲು ಸದನವನ್ನು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ಟೀಕಿಸಿದರು.

## ನಾಗೇಂದ್ರಗೆ ಸಿಬಿಐ ಶಾಕ್: ಜಾಮೀನು ರದ್ದತಿಗೆ ಅರ್ಜಿ

**ಬೆಂಗಳೂರು:** ವಾಲ್ಮೀಕಿ ನಿಗಮದ ಹಗರಣದಲ್ಲಿ ಮಾಜಿ ಸಚಿವ ಬಿ.ನಾಗೇಂದ್ರ ಅವರಿಗೆ ಮತ್ತೆ ಸಂಕಷ್ಟ ಎದುರಾಗಿದೆ. ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ನೀಡಿದ್ದ ಜಾಮೀನು ರದ್ದು ಕೋರಿ ಸಿಬಿಐ ಹೈಕೋರ್ಟ್ಗೆ ಅರ್ಜಿ ಸಲ್ಲಿಸಿದೆ.



ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಮಾಜಿ ಸಚಿವ ಬಿ.ನಾಗೇಂದ್ರಗೆ ಒಂದು ವಾರದ ಹಿಂದೆಯಷ್ಟೇ ನಿರೀಕ್ಷಣಾ ಜಾಮೀನು ಮಂಜೂರು ಮಾಡಿತ್ತು. ಈಗ ಸಿಬಿಐ ಅಧಿಕಾರಿಗಳು ಜಾಮೀನು ರದ್ಧತಿ ಕೋರಿ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದಾರೆ. ಇದಕ್ಕೂ ಮುನ್ನ ವಾಲ್ಮೀಕಿ ಹಗರಣ ಪ್ರಕರಣದಲ್ಲಿ ಸಿಬಿಐ ವಿಚಾರಣೆಗೆ ಹಾಜರಾಗುವಂತೆ ಬಿ.ನಾಗೇಂದ್ರಗೆ ಸಮನ್ಸ್ ನೀಡಿದ್ದರು. ಬಳಿಕ ಬಂಧನ ಭೀತಿಯಲ್ಲಿದ್ದ ನಾಗೇಂದ್ರ ನಿರೀಕ್ಷಣಾ ಜಾಮೀನು ಕೋರಿ ಕೋರ್ಟ್ಗೆ ಅರ್ಜಿ ಸಲ್ಲಿಸಿದ್ದರು. ಜ.14ರಂದು ನಿರೀಕ್ಷಣಾ ಜಾಮೀನು ಮಂಜೂರು ಮಾಡಿತ್ತು.

## ಟ್ರಂಪ್‌ರ 'ಶಾಂತಿ ಮಂಡಳಿ' ಸೇರಲು ಭಾರತ ನಕಾರ; ಪಾಕಿಸ್ತಾನ ಸಹಿ!

**ದಾವೋಸ್:** ಗಾಜಾದಲ್ಲಿ ಶಾಶ್ವತ ಶಾಂತಿ ತರುವ ಹಾಗೂ ಸಂಭಾವ್ಯ ಜಾಗತಿಕ ಬಿಕ್ಕಟ್ಟು ಪರಿಹರಿಸುವ ನಿಟ್ಟಿನಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಗುರುವಾರ 'ಶಾಂತಿ ಮಂಡಳಿ'ಯನ್ನು ಅನಾವರಣಗೊಳಿಸಿದ್ದು, ಈ ಮಂಡಳಿ ಸೇರಲು ಸಹಿ ಹಾಕುವ ಕಾರ್ಯಕ್ರಮದಿಂದ ದೂರ ಉಳಿದ ರಾಷ್ಟ್ರಗಳಲ್ಲಿ ಭಾರತವೂ ಒಂದಾಗಿದೆ.

ಪುಟ 2ಕ್ಕೆ

# ಅಯೋಧ್ಯೆ ದೇಶದ ಐಕ್ಯತೆ ಸಂಕೇತ



ಚಾಮರಾಜನಗರ, ಅಯೋಧ್ಯೆ ರಾಮಮಂದಿರದ 2ನೇ ವರ್ಷದ ವಾರ್ಷಿಕೋತ್ಸವ ಅಂಗವಾಗಿ ಶ್ರೀವಾಲ್ಮೀಕಿ ಆಟೋ ಚಾಲಕರು, ಮಾಲೀಕರ ಸಂಘ ವತಿಯಿಂದ ಶ್ರೀರಾಮನ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪಾನಕ, ಮಜ್ಜಿಗೆ ವಿತರಿಸಲಾಯಿತು.

ನಗರದ ಎಲ್ಐಸಿ ಕಚೇರಿಯ ಸಮೀಪವಿರುವ ಶ್ರೀ ವಾಲ್ಮೀಕಿ ಆಟೋ ನಿಲ್ದಾಣದಲ್ಲಿ ಶ್ರೀವಾಲ್ಮೀಕಿ ಆಟೋ ಚಾಲಕರು, ಮಾಲೀಕರ ಸಂಘ

ವತಿಯಿಂದ ಶ್ರೀರಾಮನ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಜೈ ಶ್ರೀರಾಮು ಘೋಷಣೆ ಕೂಗಿ ಪಾನಕ ಮಜ್ಜಿಗೆ ವಿತರಿಸಲಾಯಿತು. ಈ ಸಂದರ್ಭದಲ್ಲಿ ಬಿಜೆಪಿ ಎಸ್ ಟಿ ಮೋರ್ಚಾದ ಜಿಲ್ಲಾ ಉಪಾಧ್ಯಕ್ಷ ಬುಲೆಟ್ ಚಂದ್ರು ಮಾತನಾಡಿ, ಅಯೋಧ್ಯೆಯಲ್ಲಿ ಶ್ರೀರಾಮಮಂದಿರ ನಿರ್ಮಾಣ ಶತಮಾನದ ಹೋರಾಟ ಪ್ರತೀಕ ವಾಗಿದೆ. ಭಾರತದ ಆಧ್ಯಾತ್ಮಿಕತೆ, ಐಕ್ಯತೆ ಸಂಕೇತ ವಾಗಿದೆ.ಮರ್ಯಾದಾ ಪುರುಷೋತ್ತಮ ಶ್ರೀರಾಮ ಹಿಂದು ಧರ್ಮದ ಆರಾಧ್ಯದೈವವಾಗಿದ್ದು ಅವರನ್ನು ಆರಾಧಿಸುವ ನಮ್ಮೆಲ್ಲರ ಕರ್ತವ್ಯ ವಾಗಿದೆ ಎಂದರು. ಆಟೋ ಸಂಘದ ಮಂಜುನಾಥ್ .ಮಹೇಶ. ಬಿಜೆಪಿ ಮುಖಂಡರು ಕಿರಣ. ಭಾಗ್ಯ ಹೋಟೆಲ್ ಮಾಲೀಕ ವಿಜಯ, ಸುಬ್ಬಣ್ಣ. ಸಿದ್ದು.ರಘು.ರಂಗ. ಕಾವಲುಪಡೆ ಪರಶಿವಮೂರ್ತಿ.ರಾಘವೇಂದ್ರ.ಹೇಮಂತ. ಚಿಕ್ಕ. ಕುಮಾರ. ಕೃಷ್ಣ. ಕಿರಣ್.ಶಿವು. ಸೋಮ ಇದ್ದರು.

# ಅಕ್ರಮ ರೆಸಾರ್ಟ್ ತೆರವಿಗೆ ಆಗ್ರಹಿಸಿ ಪ್ರತಿಭಟನೆ

ಮೈಸೂರು: ಕಬಿನಿ ನಾಗರಹೊಳೆ ಬಂಡೀಪುರ ಕಾಡಿನಲ್ಲಿ– ಅಕ್ರಮ ಹಾಗೂ ಕಾನೂನು ಬಾಹಿರವಾಗಿ ನಿರ್ಮಾಣಗೊಂಡಿರುವ ರೆಸಾರ್ಟ್ ಬಾರ್ ಹೋಟೆಲ್ ಗಳ ತೆರವಿಗೆ ಒತ್ತಾಯಿಸಿ ಕಬಿನಿ ರೈತ ಹಿತ ರಕ್ಷಣಾ ಸಮಿತಿಯ ಅಧ್ಯಕ್ಷ ಹಳ್ಳಿ ಕೆರೆಹುಂಡಿ ಭಾಗ್ಯರಾಜ್ ನೇತೃತ್ವದಲ್ಲಿ ನಗರದ ಪ್ರಾದೇಶಿಕ ಆಯುಕ್ತರ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

ಕಬಿನಿ ನಾಗರಹೊಳೆ ಬಂಡೀಪುರ ಕಾಡಿನಲ್ಲಿ ಅಕ್ರಮ ಹಾಗೂ ಕಾನೂನು ಬಾಹಿರವಾಗಿ ನಿರ್ಮಾಣಗೊಂಡಿರುವ ರೆಸಾರ್ಟ್ ಬಾರ್ ಹೋಟೆಲ್ ಗಳ ತೆರವಿಗೆ ಒತ್ತಾಯಿಸಿದರು.

ಅಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಮಾತನಾಡಿ, ಕಬಿನಿ ಹಿನ್ನೀರು ಪ್ರದೇಶದಲ್ಲಿ ನಾಗರಹೊಳೆ, ಬಂಡಿಪುರ, ಅರಣ್ಯ ವ್ಯಾಪ್ತಿ, ಎಲಿಫ್ಯಾಂಟ್ ಕಾರ್ಡರ್, ಟೈಗರ್ ಕಾಯ್ದಿರಿಸಿದ ಸ್ಥಳ, ಅರಣ್ಯ ಬಫರ್ ಜೋನ್, ಪರಿಸರ ಸಂವೇದಿ ವಲಯ ಅರಣ್ಯ ಕಾಯ್ದೆ, ವನ್ಯಜೀವಿ ಸಂರಕ್ಷಣಾ ಕಾಯ್ದೆ, ನೀರಾವರಿ ಕಾನೂನುಗಳು ಉಲ್ಲಂಘನೆ ಮಾಡಿ. ಅಕ್ರಮವಾಗಿ ನಿರ್ಮಾಣಗೊಂಡಿರುವ. ಕಾನೂನುಬಾಹಿರ ನಿರ್ಮಾಣ ಆಗಿರುವ ಹೋಟೆಲ್ ಕ್ಲಬ್ ಬಾರ್ ರೆಸ್ಟೋರೆಂಟ್ ರೆಸಾರ್ಟ್, ವಾಣಿಜ್ಯ ಕಟ್ಟಡಗಳನ್ನು ತೆರವುಗೊ ಳಿಸಬೇಕೆಂದರು. ತಕ್ಷಣ ಜಿಲ್ಲಾ ಉಸ್ತುವಾರಿ ಸಚಿವರು ಅರಣ್ಯ ಸಚಿವರು ಕಂದಾಯ ಸಚಿವರು ಮತ್ತು ಪ್ರವಾಸೋದ್ಯಮ




ಸಚಿವರ ನೇತೃತ್ವದಲ್ಲಿ ಉನ್ನತ ಮಟ್ಟದ ಸಭೆಯನ್ನು ನಡೆಸಿ ರೈತರ ಅಭಿಪ್ರಾಯವನ್ನು ಪಡೆದು ಹಾಲಿ ನ್ಯಾಯಾಧೀಶರ ನೇತೃತ್ವದಲ್ಲಿ ಒಂದು ಸಮಿತಿಯನ್ನು ರಚಿಸಿ ಅಕ್ರಮ ಹಾಗೂ ಸಕ್ರಮದ ಬಗ್ಗೆ ವರದಿಯನ್ನು ತಯಾರಿಸಿ ಈ ಭಾಗದ ರೈತರು ಮತ್ತು ಕಾಡಂಚಿನ ಪ್ರದೇಶದ ರಕ್ಷಣೆಗೆ ಮುಂದಾಗಬೇಕು ಹಾಗೂ ಯಾವ ಯಾವ ಸಚಿವರು ಮತ್ತು ಶಾಸಕರು ಅವಧಿಯಲ್ಲಿ ಎಷ್ಟೆಷ್ಟು ಅಕ್ರಮಗಳಾಗಿವೆ ಎಂಬುದನ್ನು ಬಹಿರಂಗಪಡಿಸಬೇಕು. ಇಲ್ಲದಿದ್ದರೆ ಉಗ್ರ ಹೋರಾಟ ನಡೆಸಬೇಕಾಗಿರುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆಯಲ್ಲಿ ರಾಜ್ಯ ಖಜಾಂಚಿ ಕೆರೆಹುಂಡಿ ರಾಜಣ್ಣ, ರಾಜ್ಯ ಸಂಚಾಲಕ ಡಾ.ಅನುಮಯ್ಯ, ಜಿಲ್ಲಾಧ್ಯಕ್ಷ ವಳಗೆರೆ ಗಣೇಶ್, ಜಿಲ್ಲಾ ಕಾರ್ಯದರ್ಶಿ ಮಲಿಯೂರು, ಜಿಲ್ಲಾ ಉಪಾಧ್ಯಕ್ಷ ದೇವನೂರು ನಾಗೇಂದ್ರ, ಮಹೇಂದ್ರ, ಮುದ್ದಳ್ಳಿ ಮಧುಸೂದನ್, ಎಚ್.ಗುಂಡ್ಲಾ ಚಿದಂಬರ, ಪಿ.ಮರಳಿ ಶಿವಣ್ಣ, ಅಂಡುವಿನಹಳ್ಳಿ ಮಹೇಶ್, ದೇವಿರಮ್ಮನಹಳ್ಳಿ ಸಿದ್ದಬಸಪ್ಪ, ಪ್ರಭುಸ್ವಾಮಿ, ಪುಟ್ಟಸ್ವಾಮಿ, ಗುರುವಿನಪುರ ಚಂದ್ರ ಮೋಹನ್, ಊರ್ಗಳ್ಳಿ ರಾಮಣ್ಣ, ಸಾನಂಡಳ್ಳಿ ಬಸವರಾಜು, ನಾಗರಾಜಪ್ಪ, ದೇವಿರಮ್ಮನಹಳ್ಳಿ ಹುಂಡಿ ಕೆಂಪನವೀನ್ ಮುಕಡಹಳ್ಳಿ ರಾಜು ಕಿಲಿಪುರ ಶ್ರೀಕಂಠ ಮರಿಯಾಲ ಮಾದಪ್ಪ ಮುಂತಾದವರು ಹಾಜರಿದ್ದರು.

## ಮೊದಲ ಪುಟದಿಂದ

### ಭಾಷಣ ಮಂಡಿಸಿದ ಸಿಎಂ

ಭಾಷಣವನ್ನು ಓದಿ ರಾಜ್ಯಪಾಲ ಥಾವರಚಂದ್ ಗೆಹಲೋತ್ ನಿರ್ಗಮಿಸಿದ್ದರು. ರಾಜ್ಯಪಾಲರ ಈ ನಡೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಖಂಡಿಸಿದರು. ರಾಜ್ಯಪಾಲರು ಸಚಿವ ಸಂಪುಟ ತಯಾರಿಸಿದ ಭಾಷಣ ಓದದೆ, ಅವರೇ ತಯಾರು ಮಾಡಿದ ಒಂದು ಪ್ಯಾರಾ ಭಾಷಣ ಓದಿ, ಸಂವಿಧಾನಕ್ಕೆ ವಿರುದ್ಧವಾಗಿ ನಡೆದುಕೊಂಡಿದ್ದಾರೆ. ಅವರು ಸಂವಿಧಾನವನ್ನು ಉಲ್ಲಂಘಿಸಿದ್ದಾರೆ. ಎಂದು ಅವರು ತಿಳಿಸಿದರು.

### ಚರ್ಚಿಸಿ ಕಾನೂನು ಹೋರಾಟ

**ಪಡೆಯುವವರೆಗೆ ಮಾಡಿದ ರೀತಿ ಹೋರಾಟ ಮುಂದುವರಿಸುತ್ತೇವೆ. ನಮ್ಮ ಸರ್ಕಾರ ಸಚಿವರು, ಶಾಸಕರ ಹಾದಿಯಾಗಿ ಪ್ರತಿಯೊಬ್ಬರೂ ಪ್ರತಿಭಟಿಸಲಿದ್ದಾರೆ ಎಂದು ಸಿಎಂ ಹೇಳಿದರು.**

### ತಾರಕಕ್ಕೇರಿದ ಸಂಘರ್ಷ

ವಿಧಾನಸಭಾ ಸ್ಪೀಕರ್ ಯು.ಟಿ.ಖಾದರ್ ಮತ್ತು ವಿಧಾನ ಪರಿಷತ್ ಸಭಾಧ್ಯಕ್ಷ ಬಸವರಾಜ ಹೊರಟ್ಟಿ, ಸಿಎಂ ಸಿದ್ದರಾಮಯ್ಯ, ಕಾನೂನು ಸಚಿವ ಎಚ್.ಕೆ.ಪಾಟೀಲ್ ಅವರು ಪ್ರೋಟೋಕಾಲ್ ಅನುಸರಿಸಿ ರಾಜ್ಯಪಾಲರನ್ನು ಸದನದಿಂದ ಬೀಳ್ಕೊಟ್ಟರು. ಕರ್ನಾಟಕ ವಿಧಾನಸಭೆ ಜಂಟಿ ಅಧಿವೇಶನ ಉದ್ದೇಶಿಸಿ ಭಾಷಣ ಮಾಡಲು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ನಿರಾಕರಿಸಿದ್ದರು. ಈ ಬಗ್ಗೆ ಸರ್ಕಾರದ ಸಚಿವರು ಕಿಡಿಕಾರಿದ್ದರು. ಸರ್ಕಾರ ಬರೆದುಕೊಟ್ಟ ಭಾಷಣ ಬದಲು ಇಂದು ಅವರೇ ಭಾಷಣ ಬರೆದುಕೊಂಡು ಬಂದು ಓದುತ್ತಾರೆ ಎಂದು ಹೇಳಲಾಗಿತ್ತು. ಆದರೆ ಅದನ್ನು ಓದದೆ ರಾಜ್ಯಪಾಲರು ನಿರ್ಗಮಿಸಿದ್ದಾರೆ.

### ಭಾರತ ನಕಾರ; ಪಾಕಿಸ್ತಾನ ಸಹಿ!

ಆದರೆ ಪಾಕಿಸ್ತಾನ ಶಾಂತಿ ಮಂಡಳಿಯ ನಿಯಮಗಳಿಗೆ ಸಹಿ ಹಾಕಿದೆ. ಗಾಜಾ ಪಟ್ಟಿಯಲ್ಲಿ ಇಸ್ರೇಲ್ ಮತ್ತು ಹಮಾಸ್ ನಡುವಿನ ಕದನ ವಿರಾಮ ಒಪ್ಪಂದದ ಎರಡನೇ ಹಂತದಡಿ ಘೋಷಿಸಲಾದ ಮಂಡಳಿ ಸೇರಲು ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಹಲವು ಜಾಗತಿಕ ನಾಯಕರನ್ನು ಅಮೆರಿಕ ಅಧ್ಯಕ್ಷರು ಆಹ್ವಾನಿಸಿದ್ದರು.

ಫ್ರಾನ್ಸ್, ಯುನೈಟೆಡ್ ಕಿಂಗ್‌ಡಮ್, ಚೀನಾ, ಜರ್ಮನಿ ಮತ್ತಿತರ ಹಲವು ಪ್ರಮುಖ ರಾಷ್ಟ್ರಗಳು ಟ್ರಂಪ್ ಅವರ ಶಾಂತಿ ಮಂಡಳಿ ಸೇರಲು ಸಹಿ ಮಾಡುವ ಸಮಾರಂಭವನ್ನು ಬಹಿಷ್ಕರಿಸಿವೆ.

### ವಯೋಮಿತಿ ಸಡಿಲಿಕೆ

ರಾಜ್ಯದ 22 ಹಿಂದುಳಿದ, ದಲಿತ ಮಠಗಳಿಗೆ ಜಾಗ ಮಂಜೂರಿಗೂ ಸಭೆಯಲ್ಲಿ ಒಪ್ಪಿಗೆ ಸಿಕ್ಕಿದೆ. ಬೆಂಗಳೂರು ಉತ್ತರ ತಾಲೂಕಿನ ದಾಸನಪುರ ಹೋಬಳಿಯಲ್ಲಿ ಮಠಗಳಿಗೆ ಜಾಗ ಮಂಜೂರಿಗೆ ನಿರ್ಧರಿಸಲಾಗಿದೆ.

### ಆಸ್ತಿ ಮುಟ್ಟುಗೋಲು ಹಾಕಿದ ಇಡಿ

ಹಂಚಿಕೆಯಲ್ಲಿ ನಡೆದ ದೊಡ್ಡ ಪ್ರಮಾಣದ ಹಗರಣದ ಪ್ರಕರಣದಲ್ಲಿ ಲೋಕಾಯುಕ್ತ ಪೊಲೀಸರು ಮೈಸೂರಿನಲ್ಲಿ ದಾಖಲಿಸಿದ ಎಫ್ಐಆರ್ ಆಧಾರದ ಮೇಲೆ ಇಡಿ ತನಿಖೆ ಆರಂಭಿಸಿತು. ಪ್ರಕರಣದ ಶೋಧ ಕಾರ್ಯವನ್ನು 2024ರ ಅ.18 ಮತ್ತು 2024 ಅ.28 ರಂದು ಇಡಿ ನಡೆಸಿತು. 2023 ಮಾ.14 ರ ಪತ್ರ, 2023 ಅ.27 ರ ಜಿಒ, ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳು (ಸ್ವಾಧೀನಪಡಿಸಿಕೊಂಡ ಭೂಮಿಗೆ ಪರಿಹಾರದ ಬದಲಾಗಿ ನಿವೇಶನಗಳ ಹಂಚಿಕೆ) ನಿಯಮಗಳು, 2009, 2015 ರಲ್ಲಿ ತಿದ್ದುಪಡಿ ಮಾಡಿದಂತೆ ಮತ್ತು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರ (ಸ್ವಯಂಪ್ರೇರಿತ ಭೂಮಿ ಶರಣಾಗತಿಗಾಗಿ ಪ್ರೋತ್ಸಾಹಕ ಯೋಜನೆ) ನಿಯಮಗಳು, 1991ರ ನಿಯಮಗಳನ್ನು ಸಂಪೂರ್ಣವಾಗಿ ಉಲ್ಲಂಘಿಸಿ ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ಎಂದು ಶೋಧ ಕಾರ್ಯಾಚರಣೆಯು ಬಹಿರಂಗಪಡಿಸಿದೆ. ಇದಲ್ಲದೆ, ಶೋಧ ಕಾರ್ಯಾಚರಣೆಯು ಮುಡಾ ಅಧಿಕಾರಿಗಳು/ಅಧಿಕಾರಿಗಳು ಮತ್ತು ರಿಯಲ್ ಎಸ್ಟೇಟ್ ಉದ್ಯಮಿಗಳ ನಡುವಿನ ಆಳವಾದ ಸಂಬಂಧವನ್ನು ಸಹ ಬಹಿರಂಗಪಡಿಸಿದೆ. ಪರಿಹಾರ ಮತ್ತು ವಿನ್ಯಾಸಗಳ ಅನುಮೋದನೆಯಾಗಿ ನಿವೇಶನಗಳ ಹಂಚಿಕೆಗೆ ನಗದು ಪಾವತಿಯನ್ನು ಪುರಾವೆಗಳು ಬಹಿರಂಗಪಡಿಸಿವೆ. ಈ ಹಿಂದೆ, ಈ ಪ್ರಕರಣದಲ್ಲಿ, ಜಾರಿ ನಿರ್ದೇಶನಾಲಯವು ಒಟ್ಟು 283 ಅಕ್ರಮವಾಗಿ ಮಂಜೂರು ಮಾಡಲಾದ ಮುಡಾ ಸೈಟ್ಗಳು ಮತ್ತು 3 ವೈಯಕ್ತಿಕ ಆಸ್ತಿಗಳನ್ನು ತಾತ್ಕಾಲಿಕವಾಗಿ ಮುಟ್ಟುಗೋಲು ಹಾಕಿಕೊಂಡಿತ್ತು. ಇದಲ್ಲದೆ, ಮುಡಾ ಸೈಟ್ಗಳನ್ನು ದೊಡ್ಡ ಪ್ರಮಾಣದಲ್ಲಿ ಅಕ್ರಮವಾಗಿ ಹಂಚಿಕೆ ಮಾಡಿದ್ದ ಮುಡಾದ ಮಾಜಿ ಆಯುಕ್ತ ಜಿ.ಟಿ. ದಿನೇಶ್ ಕುಮಾರ್ ರನ್ನು 2002 ರ ಪಿಎಂಎಲ್ಎ ನಿಬಂಧನೆಗಳ ಅಡಿಯಲ್ಲಿ 2025 ರ ಸೆ.16ರಂದು ಬಂಧಿಸಲಾಯಿತು. ಪ್ರಸ್ತುತ, ಜಿ.ಟಿ. ದಿನೇಶ್ ಕುಮಾರ್ ಪಿಎಂಎಲ್ಎ, 2002 ರ ಅಡಿಯಲ್ಲಿ ನ್ಯಾಯಾಂಗ ಬಂಧನದಲ್ಲಿದ್ದಾರೆ.

ಇದಲ್ಲದೆ, 2002 ರ ಪಿಎಂಎಲ್ಎ ಅಡಿಯಲ್ಲಿ ನಡೆದ ತನಿಖೆಯಲ್ಲಿ ಜಿಟಿ ದಿನೇಶ್ ಕುಮಾರ್ ಪಡೆದ ಅನುಚಿತ ಲಾಭದ ರೂಟಿಂಗ್ ಮತ್ತು ಪದರ ಪದರವಾಗಿಸಿರುವುದು ಬೆಳಕಿಗೆ ಬಂದಿದೆ. ಅಪರಾಧದ ಆದಾಯವನ್ನು ಜಿಟಿ ದಿನೇಶ್ ಕುಮಾರ್ ಅವರ ಸಂಬಂಧಿಕರು/ಸಹಚರರ ಹೆಸರಿನಲ್ಲಿ ಸ್ಥಿರ ಆಸ್ತಿಗಳನ್ನು ಖರೀದಿಸಲು ಮತ್ತು ವಾಣಿಜ್ಯ ಕಟ್ಟಡ ನಿರ್ಮಾಣಕ್ಕೆ ಬಳಸಲಾಗಿದೆ. ಹೆಚ್ಚಿನ ತನಿಖೆಯಲ್ಲಿ ಮುಡಾದ ಮಾಜಿ ಅಧ್ಯಕ್ಷ ಎಸ್.ಕೆ.ಮರಿಗೌಡ ಅವರು ಮುಡಾ ಸೈಟ್ಗಳ ರೂಪದಲ್ಲಿ ಅಕ್ರಮ ನಿವೇಶನ ಹಂಚಿಕೆಗಾಗಿ ಪರಿಹಾರವನ್ನು ಪಡೆದಿದ್ದಾರೆ ಎಂದು ತಿಳಿದುಬಂದಿದೆ. 2002ರ ಪಿಎಂಎಲ್ಎ ನಿಬಂಧನೆಗಳ ಅಡಿಯಲ್ಲಿ ಪ್ರಕರಣದಲ್ಲಿ ಇಲ್ಲಿಯವರೆಗೆ 460 ಕೋಟಿ (ಅಂದಾಜು) ಮಾರುಕಟ್ಟೆ ಮೌಲ್ಯದ ಅಪರಾಧದ ಆದಾಯವನ್ನು ಜಪ್ತಿ ಮಾಡಲಾಗಿದೆ ಎಂದು ಇಡಿ ಪ್ರಕಟಣೆ ಮೂಲಕ ತಿಳಿಸಿದೆ.

ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ನನ್ನ ಯಾವುದೇ ಆಸ್ತಿ ಮುಟ್ಟುಗೋಲು ಹಾಕಿಕೊಂಡಿಲ್ಲ ಎಂದು ಮುಡಾ ಮಾಜಿ ಅಧ್ಯಕ್ಷ ಕೆ. ಮರಿಗೌಡ ಸ್ಪಷ್ಟಪಡಿಸಿದರು. ಇಡೀ ಪತ್ರಿಕಾ ಹೇಳಿಕೆ ಕುರಿತು ಪ್ರತಿಕ್ರಯಿಸಿದ ಅವರು, ವರ್ಷದ ಹಿಂದೆಯೇ ಎಲ್ಲಾ ರೀತಿಯ ನನ್ನ ಪೂರ್ಣ ತೆರಿಗೆ ಮಾಹಿತಿಯನ್ನು ಇಡಿ ಅಧಿಕಾರಿಗಳಿಗೆ ನೀಡಿದ್ದೇನೆ. ಸ್ವತಃ ಪ್ರಾಧಿಕಾರದಲ್ಲಿ ನೀಡುತ್ತಿದ್ದ ಅನುಮೋದನೆಗಳನ್ನು ನೋಡಿ ಶಾಕ್ ಆಗಿದ್ದೆನು. ಅಲ್ಲದೆ ಎಲ್ಲವನ್ನೂ ಪ್ರಾಧಿಕಾರದ ಸಭೆಯಲ್ಲಿಟ್ಟು ಅನುಮೋದನೆ ನೀಡುವಂತೆ ತಾಕೀತು ಮಾಡಿದ್ದೇನೆ. ನಾನು ಒಂದು ನಿವೇಶನ ಸಹ ಪಡೆದಿಲ್ಲ. ಯಾವುದೇ ಅಕ್ರಮ ಸಹ ಮಾಡಿಲ್ಲ. ಈಗ ಮತ್ತೆ ನನ್ನ ಹೆಸರು ಬಂದರೆ ನಾನು ಎಲ್ಲವನ್ನೂ ಕಾನೂನು ಮೂಲಕವೇ ಉತ್ತರಿಸುತ್ತೇನೆ. ನನ್ನ ಯಾವುದೇ ಆಸ್ತಿ ಮುಟ್ಟುಗೋಲು ಹಾಕಿಕೊಂಡಿಲ್ಲ. ನಡೆದ ಅಕ್ರಮಗಳ ಬಗ್ಗೆ ಕಾನೂನು ಚೌಕಟ್ಟಿನಲ್ಲಿ ಈಗಾಗಲೇ ಉತ್ತರ ನೀಡಿದ್ದೇನೆಂದು ಹೇಳಿದರು.

# 3 ಸಾವಿರ ಮಂದಿಗೆ ಉಪಯೋಗ

## ಟೆಲಿಮನಸ್ ಸಹಾಯವಾಣಿ | ಡಾ.ಕುಮಾರ್ ಮಾಹಿತಿ

ರಾಮನಗರ: ನಿಮ್ಹಾನ್ಸ್ ಸುರಕ್ಷಾ ಯೋಜನೆಯಡಿ ಸ್ಥಾಪಿಸಿರುವ ಸಹಾಯವಾಣಿಯಿಂದ ಜಿಲ್ಲೆಯ ಸುಮಾರು ಮೂರು ಸಾವಿರಕ್ಕೂ ಹೆಚ್ಚು ಮಂದಿ ಉಪಯೋಗ ಪಡೆದುಕೊಂಡಿದ್ದಾರೆ ಎಂದು ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮಾಧಿಕಾರಿ ಡಾ.ಕುಮಾರ್ ತಿಳಿಸಿದರು.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಿಮ್ಹಾನ್ಸ್‌ನ ಸುರಕ್ಷಾ ಯೋಜನೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗದ ಸಹಯೋಗದಲ್ಲಿ ಮಾಧ್ಯಮದವರಿಗಾಗಿ ಮಂಗಳವಾರ ಹಮ್ಮಿಕೊಂಡಿದ್ದ 'ಮಾನಸಿಕ ಆರೋಗ್ಯ ಮತ್ತು ಆತ್ಮಹತ್ಯೆ ತಡೆಗಟ್ಟುವಲ್ಲಿ ಮಾಧ್ಯಮಗಳ ಪಾತ್ರ ಹಾಗೂ ವರದಿಗಾರಿಕೆಯಲ್ಲಿ ಪಾಲಿಸಬೇಕಾದ ಮಾರ್ಗಸೂಚಿಗಳು' ಕುರಿತ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ರಾಜ್ಯ ಸರ್ಕಾರ ಟೆಲಿ ಮನಸ್ ಎಂಬ ಉಚಿತ ಸಹಾಯವಾಣಿ ಆರಂಭಿಸಿದೆ. ಇದರ ಸಂಖ್ಯೆ 14416. ಮಾನಸಿಕವಾಗಿ ನೊಂದವರು ಈ ಸಂಖ್ಯೆಗೆ ಕರೆ ಮಾಡಿ ಸಮಾಲೋಚನೆ ನಡೆಸಬಹುದು ಎಂದರು.

ಜಿಲ್ಲಾಸ್ಪತ್ರೆಯ ಮನೋವೈದ್ಯಕೀಯ ಸಾಮಾಜಿಕ ಕಾರ್ಯಕರ್ತೆ ಪದ್ಮರೇಖಾ

**▸▸ ಮಾನಸಿಕವಾಗಿ ನೊಂದಿದ್ದರೆ 14416ಕ್ಕೆ ಕರೆ ಮಾಡಲು ಸಲಹೆ**

**▸▸ ಆತ್ಮಹತ್ಯೆ ವರದಿ ಮಾಡುವಾಗ ಮಾಧ್ಯಮಗಳು ಸಂಯಮ ವಹಿಸಬೇಕು**



### ಸಂಯಮ ಇರಲಿ

**ವಿವಿಧ ಕಾರಣಗಳಿಗಾಗಿ ತಮ್ಮ ಬದುಕನ್ನು ತಮ್ಮ ಕೈಯಾರೆ ಕಳೆದುಕೊಂಡ ಘಟನೆಗಳ ವರದಿ ಮಾಡುವಾಗ ಮಾಧ್ಯಮಗಳು ಸಂಯಮ ತೋರಬೇಕು. ಆತ್ಮಹತ್ಯೆ ಎಂಬುದು ಅತ್ಯಂತ ಸೂಕ್ಷ್ಮ ವಿಷಯ ಎಂದು ನಗರದ ಆತ್ಮಹತ್ಯೆ ಕುರಿತು ಮುದ್ರಣ ಮತ್ತು ದೃಶ್ಯ ಮಾಧ್ಯಮಗಳಲ್ಲಿ ಬರುವ ಕೆಲ ಸುದ್ದಿಗಳು ಸಮಾಜದ ಮೇಲೆ ನಕಾರಾತ್ಮಕ ಪರಿಣಾಮ ಬೀರುವ ಸಾಧ್ಯತೆ ಇರುತ್ತದೆ. ಹಾಗಾಗಿ, ಸುದ್ದಿ ಮಾಡುವುದಕ್ಕೆ ಮುಂಚೆ ಅದರಿಂದ ಸಂತ್ರಸ್ತರ ಕುಟುಂಬದವರು ಮತ್ತು ಸಮಾಜದ ಮೇಲಾಗುವ ಪರಿಣಾಮದ ಬಗ್ಗೆಯೂ ಚಿಂತನೆ ನಡೆಸಬೇಕು ಎಂದರು. ವಿಭಕ್ತ ಕುಟುಂಬ ದವರಲ್ಲೇ ಆತ್ಮಹತ್ಯೆ ಹೆಚ್ಚು. ಇತ್ತೀಚೆಗೆ ಮಕ್ಕಳೂ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಸಾಮಾಜಿಕ ಜಾಲತಾಣ ಮತ್ತು ಮಾಧ್ಯಮದ ಪ್ರಭಾವ ಇದಕ್ಕೆ ಕಾರಣ. ವ್ಯಕ್ತಿಯಲ್ಲಾಗುವ ಹಠಾತ್ ಬದಲಾವಣೆಗಳು ಆತ್ಮಹತ್ಯೆಯ ಮುನ್ಸೂಚನೆ ನೀಡುತ್ತವೆ. ಜೊತೆಯಲ್ಲಿರುವವರು ಅದನ್ನು ಗುರುತಿಸಿದರೆ ಮುಂದಾಗುವ ಅನಾಹುತ ತಡೆಯಬಹುದು ಎಂದು ಹೇಳಿದರು.**

ಮಾತನಾಡಿ, ನಿಮ್ಹಾನ್ಸ್ ಸಮೀಕ್ಷೆ ಪ್ರಕಾರ ದೇಶದ ಶೇ 10ರಷ್ಟು ಜನಸಂಖ್ಯೆ ಒಂದಲ್ಲ ಒಂದು ರೀತಿಯ ಮಾನಸಿಕ ಕಾಯಿಲೆಯಿಂದ ಹಾಗೂ ಶೇ 20ರಷ್ಟು ಮಂದಿಗೆ ಖಿನ್ನತೆ ಇದೆ ಎಂದು ಅಧ್ಯಯನಗಳು ಹೇಳಿವೆ. ಆತ್ಮಹತ್ಯೆ ಕುರಿತು ಸಮಾಜದಲ್ಲಿ ಅನೇಕ ತಪ್ಪು ಕಲ್ಪನೆಗಳನ್ನು ಹೋಗಲಾಡಿಸಬೇಕು ಎಂದರು.

ವೇದಿಕೆಯಲ್ಲಿ ಜಿಪಂ ಸಹಕಾರ್ಯದರ್ಶಿ ಲೋಕೇಶ್, ಕೆಯುಡಬ್ಲುಜೆ ಜಿಲ್ಲಾಧ್ಯಕ್ಷ ಶಿವಲಿಂಗಯ್ಯ, ಕಾರ್ಯದರ್ಶಿ ಮಂಜುನಾಥ್, ನಿಮ್ಹಾನ್ಸ್ ಸುರಕ್ಷಾ ಯೋಜನೆಯ ಸಂಯೋಜಕ ಮಹೇಂದ್ರ ಮತ್ತಿತರರು ಉಪಸ್ಥಿತರಿದ್ದರು.

# ಜ.25ರಂದು ಬ್ರಹ್ಮರಥೋತ್ಸವ



ಕೆ.ಆರ್.ನಗರ: ಹಳೆ ಎಡತೊರೆಯ ಶ್ರೀ ಮೀನಾಕ್ಷಿ ಸಮೇತ ಅರ್ಕೇಶ್ವರ ಸ್ವಾಮಿಯ ಬ್ರಹ್ಮ ರಥೋತ್ಸವವು ರಥ ಸಪ್ತಮಿ ದಿನದಂದು ಜ.25ರ ಭಾನುವಾರ ನಡೆಯುವುದರಿಂದ ಶ್ರೀ ಅರ್ಕೇಶ್ವರ ಸ್ವಾಮಿ ದೇವಸ್ಥಾನಕ್ಕೆ ವಿವಿಧ ಬಗೆಯ ವಿದ್ಯುತ್ ದೀಪಗಳನ್ನು ಅಳವಡಿಸಿರುವುದರಿಂದ ದೇವಾಲಯವು ಬಹಳ ಸುಂದರವಾಗಿ ಕಂಗೊಳಿಸುತ್ತಿರುವುದರಿಂದ ನೋಡುಗರನ್ನು ಮೂಕ ವಿಸ್ಮಯವನ್ನಾಗಿ ಮಾಡಿದೆ ಅಲ್ಲದೆ ಈ ಬಾರಿ ಕಾವೇರಿ ಹೊಳೆಯು ತುಂಬಿ ಹರಿಯುವುದರಿಂದ ಪ್ರವಾಸಿಗರನ್ನು ಕೈಬೀಸಿ ಕರೆಯುತ್ತಿದೆ ಜಾತ್ರೆಯಲ್ಲಿ ಕಡ್ಲೆಪುರಿ, ಆಟಿಕೆ ಸಾಮಾನುಗಳ ಅಂಗಡಿ. ಪಾನಿಪುರಿ ಅಂಗಡಿ ಇನ್ನು ಮುಂತಾದ ವ್ಯಾಪಾರ ಮಾಡಲು ವ್ಯಾಪಾರಸ್ಥರು ತಮಗೆ ಇಷ್ಟ ಬಂದ ಜಾಗದಲ್ಲಿ ಚಿಕ್ಕ ಚಿಕ್ಕ ಅಂಗಡಿಗಳನ್ನು ನಿರ್ಮಿಸಿಕೊಳ್ಳುತ್ತಿದ್ದಾರೆ

ತೋಪಮ್ಮ ದೇವಸ್ಥಾನದಿಂದ ಹಿಡಿದು ಶ್ರೀಅರ್ಕೇಶ್ವರ ಸ್ವಾಮಿ ದೇವಸ್ಥಾನದ ವರೆಗೂ ಸಾಗುವ ಮಾರ್ಗದುದ್ದಕ್ಕೂ ಬಗೆ ಬಗೆಯ ವಿದ್ಯುತ್ ದೀಪಗಳನ್ನು ಅಳವಡಿಸುವುದರಿಂದ ಕೆ.ಆರ್.ನಗರ ಪಟ್ಟಣದ ಗರುಡುಗಂಬ ಸರ್ಕಲ್ ಹಾಗೂ ಪುರಸಭೆ ಸರ್ಕಲ್ ವೃತ್ತಗಳು ಬಹಳ ಸುಂದರವಾಗಿ ಮನಮೋಹಕವಾಗಿ ಕಾಣುತ್ತಿದೆ ಬ್ರಹ್ಮ ರಥೋತ್ಸವದ ಪ್ರಯುಕ್ತ ಸನ್ನಿಧಿ ಅರ್ಚಕರಾದ ವೇದಬ್ರಹ್ಮ ಶ್ರೀ ನಾರಾಯಣ ವೆಂಕಟರಮಣ ಭಟ್ಟರ ನೇತೃತ್ವದಲ್ಲಿ ಪ್ರತಿದಿನ ದೇವಸ್ಥಾನದಲ್ಲಿ ಪೂಜೆ ಪುರಸ್ಕಾರಗಳು ನಡೆಯುತ್ತಿದೆ

ಶಾಸಕ ಡಿ .ರವಿಶಂಕರ್ ಅವರ ಸೂಚನೆಯಂತೆ ಧಾರ್ಮಿಕ ದತ್ತಿ ಇಲಾಖೆ ಹಾಗೂ ಕೆ .ಆರ್ .ನಗರ ತಾಲೂಕು ಆಡಳಿತ ವತಿಯಿಂದ ಮತ್ತು ಪೊಲೀಸ್ ಇಲಾಖೆಯೂ ಕೂಡ ಬ್ರಹ್ಮ ರಥೋತ್ಸವ ಯಶಸ್ವಿಯಾಗಿ ನಡೆಯಲು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದ್ದಾರೆ ಈ ಒಂದು ಬ್ರಹ್ಮ ರಥೋತ್ಸವಕ್ಕೆ ರಾಜ್ಯದ ವಿವಿಧ ಜಿಲ್ಲೆಗಳಿಂದ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಳ್ಳುವ ನೀರಿಕ್ಷೆ ಇದೆ



# ವ್ಯಕ್ತಿ ಬಲಿ ಪಡೆದಿದ್ದ ಚಿರತೆ ಮತ್ತೆ ಪ್ರತ್ಯಕ್ಷ

ಚಾಮರಾಜನಗರ: ವ್ಯಕ್ತಿ ಬಲಿ ಪಡೆದಿದ್ದ ಚಿರತೆ ಮತ್ತೆ ಅದೇ ಮಾರ್ಗದಲ್ಲಿ ಪ್ರತ್ಯಕ್ಷವಾಗಿದ್ದು ಕಾರಿನ ಡ್ಯಾಶ್ ಕ್ಯಾಂ ನಲ್ಲಿ ಚಿರತೆ ಕುಳಿತಿರುವ ದೃಶ್ಯ ಸೆರೆಯಾಗಿದೆ.

ಮಲೆಮಹದೇಶ್ವರ ಬೆಟ್ಟಕ್ಕೆ ಸ್ನೇಹಿತರ ಗುಂಪು ಕಾರಿನಲ್ಲಿ ತೆರಳುತ್ತಿದ್ದಾಗ ತಡೆಗೋಡೆ ಮೇಲೆ ಚಿರತೆ ಕುಳಿತಿದ್ದನ್ನು ಕಂಡು ಗಾಬರಿಗೊಳ್ಳುವ ಮಾತುಕತೆಯೂ ವಿಡಿಯೋದಲ್ಲಿದೆ. ತಾಳುಬೆಟ್ಟದಿಂದ ಮಲೆ ಮಹದೇಶ್ವರ ಬೆಟ್ಟಕ್ಕೆ ತೆರಳುವ ಮಾರ್ಗದ ರಸ್ತೆ ತಡೆಗೋಡೆ ಮೇಲೆ ಚಿರತೆ ಕುಳಿತಿದ್ದ ದೃಶ್ಯಗಳು ಈ ಹಿಂದೆಯೂ ಸಾಕಷ್ಟು ವೈರಲ್? ಆಗಿತ್ತು. ಬುಧವಾರ ರಾತ್ರಿ ಕೂಡ ಚಿರತೆ ಹಾಯಾಗಿ ಕುಳಿತಿದ್ದ ದೃಶ್ಯ ಕಾರಿನ ಡ್ಯಾಶ್ ಕ್ಯಾಂ ನಲ್ಲಿ ಸೆರೆಯಾಗಿದ್ದು, ಪ್ರಯಾಣಿಕರು ಭಯಭೀತರಾಗಿದ್ದಾರೆ.

ತಾಳುಬೆಟ್ಟದಿಂದ ಮಲೆಮಹದೇಶ್ವರ ಬೆಟ್ಟಕ್ಕೆ ತೆರಳುತ್ತಿದ್ದ ಮಂಡ್ಯ ಜಿಲ್ಲೆಯ ಪ್ರವೀಣ್(30) ಎಂಬಾತನ ಮೇಲೆ ದಾಳಿ ಮಾಡಿದ್ದ ಚಿರತೆ, ಬಳಿಕ ಆತನನ್ನು ಎಳೆದೊಯ್ದಿತ್ತು. ಈಗ ಮತ್ತೆ ಚಿರತೆ ಅದೇ ಸ್ಥಳದ ಸುತ್ತಮುತ್ತಲಿನ ಪ್ರದೇಶದಲ್ಲಿ ಕಾಣಿಸಿಕೊಂಡಿದೆ.



### ಚಿರತೆ ಸೆರೆಗೆ ಕಾರ್ಯಾಚರಣೆ

ಚಿರತೆ ಸೆರೆ ಹಿಡಿಯಲು ಎರಡು ಬೋನು ಇಡಲಾಗಿದ್ದು, 50ಕ್ಕೂ ಹೆಚ್ಚು ಸಿಬ್ಬಂದಿಗಳನ್ನು ನೇಮಕ ಮಾಡಿಕೊ ಳ್ಳಲಾಗಿದೆ. ಬೋನಿನಲ್ಲಿ ಚಿರತೆ ಸೆರೆ ಹಿಡಿಯಲು ಎರಡು ನಾಯಿಗಳನ್ನು ಕಟ್ಟಿ ಹಾಕಲಾಗಿದೆ. ಇದಲ್ಲದೆ ಚಾಮರಾಜನಗರ ಜಿಲ್ಲಾ ಕೇಂದ್ರದಿಂದ ಡ್ರೋನ್ ತಂಡ ಹಾಗೂ ಮೈಸೂರಿನಿಂದ ಚಿರತೆ ಕಾರ್ಯಾ ಚರಣೆ ಪಡೆ ಹಾಗೂ ತಜ್ಞ ವೈದ್ಯಾಧಿಕಾರಿಗಳಾದ ಡಾ. ಆದರ್ಶ್ ಅವರು ಘಟನಾ ಸ್ಥಳಕ್ಕೆ ಆಗಮಿಸಿದ್ದಾರೆ.

# ಅಪ್ಪು ಯುವಸೇನಾದಿಂದ ಅನ್ನಸಂತರ್ಪಣೆ



ಚಾಮರಾಜನಗರ, ಅಯೋಧ್ಯೆ ರಾಮಮಂದಿರದ 2ನೇ ವರ್ಷದ ವಾರ್ಷಿಕೋತ್ಸವ ಅಂಗವಾಗಿ ರಾಜರತ್ನ ಅಪ್ಪು ಯುವಸೇನಾ ಸಮಿತಿ ವತಿಯಿಂದ ಅನ್ನಸಂತರ್ಪಣೆ ನಡೆಯಿತು.

ನಗರದ ಶ್ರೀಮಾರಿಗುಡಿ ಮುಂಭಾಗದ ಕಾಮಧೇನು ಮಿಲ್ಕ್ ಪಾರ್ಲರ್ ಮುಂಭಾಗದಲ್ಲಿ ಶ್ರೀರಾಮನ ಭಾವಚಿತ್ರಕ್ಕೆ ಶ್ರದ್ಧಾ, ಭಕ್ತಿಯಿಂದ ಪೂಜೆ ಸಲ್ಲಿಸಿ, ಜೈಶ್ರೀರಾಮ್ ಘೋಷಣೆ ಕೂಗಿ ಅಪ್ಪು ಯುವಸೇನಾ ಸಮಿತಿ ಪದಾಧಿಕಾರಿಗಳು ಸಂಭ್ರಮಿಸಿದರು. ನಂತರ ಸಾರ್ವಜನಿಕರಿಗೆ ಅನ್ನಸಂತರ್ಪಣೆ ನಡೆಯಿತು. ಅಪ್ಪು ಯುವಸೇನಾ ಸಮಿತಿ ಅಧ್ಯಕ್ಷ ಮಂಜು ಮಾತನಾಡಿ, ಅಯೋಧ್ಯೆ ರಾಮಮಂದಿರದ 2ನೇ ವರ್ಷದ ವಾರ್ಷಿಕೋತ್ಸವ ಅಂಗವಾಗಿ ರಾಜರತ್ನ ಅಪ್ಪು ಯುವಸೇನಾ ಸಮಿತಿ ವತಿಯಿಂದ ಶ್ರೀರಾಮನ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅನ್ನಸಂತರ್ಪಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.ಈ ಸಂದರ್ಭದಲ್ಲಿ ರಾಜರತ್ನ ಅಪ್ಪು ಯುವಸೇನಾ ಸಮಿತಿಯ ಮಂಜುಮಿಲನ, ಕಾರ್ತಿಕ್ ಪವರ್, ಶಿವು,ರಮೇಶ್, ಬಂಗಾರನಾಯಕ, ಸುಬ್ಬಣ್ಣ, ನಗರಸಭಾ ಮಾಜಿ ಸದಸ್ಯ ಬಸವಣ್ಣ, ಚಂದ್ರು, ಮಣಿ, ಶಿವು, ಮದನ್, ಕಾರ್ತಿಕ್ ಡ್ರೈವರ್ ಇತರರು ಹಾಜರಿದ್ದರು.

## ಅನಾವರಣ ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ

# ರಾಜ್ಯ ಪತ್ರಕರ್ತರ ಸಮ್ಮೇಳನದ ಲಾಂಛನ ಬಿಡುಗಡೆ

ಬೆಂಗಳೂರು: ಬೀದರ್ ಜಿಲ್ಲೆಯಲ್ಲಿ ಮಾರ್ಚ್‌ನಲ್ಲಿ ನಡೆಯಲಿರುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು ಸಂಘಟಿಸುವ 40ನೇ ರಾಜ್ಯ ಸಮ್ಮೇ ಳನದ ಲಾಂಛನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸೌಧದಲ್ಲಿ ಗುರುವಾರ ಅನಾವರಣ ಮಾಡಿದರು.

ಈ ಸಂದರ್ಭದಲ್ಲಿ ಅರಣ್ಯ ಸಚಿವ ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಮತ್ತು ಸಮ್ಮೇಳನ ಸ್ವಾಗತ ಸಮಿತಿ ಅಧ್ಯಕ್ಷರಾದ ಈಶ್ವರ ಬಿ ಖಂಡ್ರೆ ಅವರು ಮತ್ತು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲೂ?ಜೆ) ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು ಸಮ್ಮೇಳನಕ್ಕೆ ಮುಖ್ಯಮಂತ್ರಿಗಳನ್ನು ಆಹ್ವಾನಿಸಿದರು.

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್, ರಾಜ್ಯ ಪತ್ರಕರ್ತರ ಸಂಘದ ಉಪಾಧ್ಯಕ್ಷ ಎಚ್.ಬಿ.ಮದನಗೌಡ, ಪ್ರಧಾನ ಕಾರ್ಯದರ್ಶಿ ಲೋಕೇಶ್, ಕಾರ್ಯದರ್ಶಿ ಸೋಮಶೇಖರ ಕೆರಗೋಡು, ಬೀದರ್ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಆನಂದ್ ದೇವಪ್ಪ, ಬಾಬುವಾಲಿ, ಶಿವಕುಮಾರಸ್ವಾಮಿ, ಪೃಥ್ವಿ ಮತ್ತಿತರರು ಪಾಲ್ಗೊಂಡಿದ್ದರು



ಈ ಸಂದರ್ಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲೂಜೆ) ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು, ಪ್ರಧಾನ ಕಾರ್ಯದರ್ಶಿ ಲೋಕೇಶ್, ಕಾರ್ಯದರ್ಶಿ ಸೋಮಶೇಖರ ಕೆರಗೋಡು, ಬೀದರ್ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಆನಂದ್ ದೇವಪ್ಪ, ಬಾಬುವಾಲಿ, ಶಿವಕುಮಾರಸ್ವಾಮಿ, ದೀಪಕ್ ವಾಲಿ, ಮಾಳಪ್ಪ ಅಡಸಾರೆ, ಸಿದ್ರಾಮಯ್ಯ ಸ್ವಾಮಿ, ಪೃಥ್ವಿರಾಜ್, ಬಸವರಾಜ ಪವಾರ್, ವಿಜಯಕುಮಾರ ಅಷ್ಟುರೆ ಮತ್ತಿತರರು ಪಾಲ್ಗೊಂಡಿದ್ದರು

### ಅರ್ಥಪೂರ್ಣ ಸಮ್ಮೇಳನ ನಡೆಸಲು ಶ್ರಮಿಸಿ

**▸▸ ಈಶ್ವರ ಖಂಡ್ರೆ ಕರೆ**

**ವಿಕಾಸಸೌಧದ ತಮ್ಮ ಕಚೇರಿಯಲ್ಲಿ ನಡೆದ ಸರಳ ಕಾರ್ಯಕ್ರಮದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲೂಜೆ) 40ನೇ ರಾಜ್ಯ ಸಮ್ಮೇಳನದ ಲಾಂಛನವನ್ನು ಸಚಿವ ಈಶ್ವರ ಖಂಡ್ರೆ ಅವರು ಮತ್ತೊಮ್ಮೆ ಬಿಡುಗಡೆ ಮಾಡಿ, ಬೀದರ್ ಜಿಲ್ಲಾ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ, ಸಿದ್ದೂಪಾಟೀಲ್ ಸಮ್ಮುಖದಲ್ಲಿ ರಾಜ್ಯ ಸಂಘಕ್ಕೆ ಹಸ್ತಾಂತರಿಸಿದರು. ಎರಡು ದಶಕಗಳ ಬಳಿಕ ಬೀದರ್ನಲ್ಲಿ ನಡೆಯುತ್ತಿರುವ ರಾಜ್ಯ ಪತ್ರಕರ್ತರ ಸಮ್ಮೇಳನವನ್ನು ಅರ್ಥಪೂರ್ಣ ಸಮ್ಮೇಳನವಾಗಿಸಲು ಶ್ರಮಿಸುವಂತೆ ಸಚಿವರು ಕರೆ ನೀಡಿದರು.**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ಕರುನಾಡಿನಲ್ಲಿ ನೆಮ್ಮದಿಯ

# ಗ್ಯಾರಂಟಿ

## ಹಸಿವು ಮುಕ್ತ-ಪೌಷ್ಟಿಕಯುಕ್ತ
## ಕರ್ನಾಟಕದ ನಿರ್ಮಾಣ



ಅನ್ನಭಾಗ್ಯ
ಹಸಿವು ಮುಕ್ತ ಕರ್ನಾಟಕ



- ಹಸಿವು ಮುಕ್ತ ಕರ್ನಾಟಕ ನಿರ್ಮಾಣಕ್ಕಾಗಿ ಅನ್ನಭಾಗ್ಯ ಯೋಜನೆ ಜಾರಿ
- ಅರ್ಹ ಫಲಾನುಭವಿಗಳಿಗೆ 5 ಕೆಜಿ ಅಕ್ಕಿಯ ಜೊತೆಗೆ ಇಂದಿರಾ ಕಿಟ್ ವಿತರಣೆ (ಜನವರಿ 1 ರಿಂದ)
- ಇಂದಿರಾ ಕಿಟ್ – (ಐದು ಕೆಜಿ ಅಕ್ಕಿಯ ಬದಲಾಗಿ ತೊಗರಿ ಬೇಳೆ, ಸೂರ್ಯಕಾಂತಿ ಎಣ್ಣೆ, ಸಕ್ಕರೆ, ಉಪ್ಪು ನೀಡಲಾಗುವುದು)



ಕರ್ನಾಟಕ ನವ ನಿರ್ಮಾಣಕ್ಕೆ

## ಗ್ಯಾರಂಟಿ ಸರ್ಕಾರ...

ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ಜಾರಿ ಮಾಡುತ್ತಾ ನುಡಿದಂತೆ ನಡೆದು ಜನರ ವಿಶ್ವಾಸ ಗಳಿಸಿದ್ದೇವೆ.

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ

ಬ್ರಾಹ್ಮಣ ಸಮುದಾಯ ಮಾಲೀಕತ್ವದ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು

# ಸ್ವಾವಲಂಬಿ ಬದುಕಿಗೆ ಧರ್ಮಸ್ಥಳ ಸಂಸ್ಥೆ ಸಹಕಾರಿ: ಸೌಮ್ಯ ಅನಿಲ್ ಚಿಕ್ಕಮಾದು

ಎಚ್.ಡಿ.ಕೋಟೆ: ದೇಶದಲ್ಲಿಯೇ ಅತಿ ದೊಡ್ಡ ಸಂಸ್ಥೆಯಾಗಿರುವ ಶ್ರೀ ಧರ್ಮಸ್ಥಳ ಸಂಸ್ಥೆಯು ಯಾವುದೇ ಶ್ಯೂರಿಟಿ ಇಲದೆ ಮಹಿಳೆಯರ ಸಬಲೀಕರಣಕ್ಕಾಗಿ ಹಾಗೂ ಆರ್ಥಿಕವಾಗಿ ಪ್ರಗತಿ ಸಾಧಿಸಲು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಸಾಲ ನೀಡುತ್ತಿರುವುದರಿಂದ ಹಲವು ರೀತಿಯಲ್ಲಿ ಸಹಕಾರಿಯಾಗಿದೆ ಎಂದು ಸೌಮ್ಯ ಅನಿಲ್ ಚಿಕ್ಕಮಾದು ಅಭಿಪ್ರಾಯ ಪಟ್ಟರು.

ತಾಲೂಕಿನ ಹೆಗ್ಗಡಾಪುರ ಗ್ರಾಮದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಬಿ.ಸಿ. ಟ್ರಸ್ಟ್ ಹಾಗೂ ಗ್ರಾಮಸ್ಥರ ಸಹಯೋಗದಲ್ಲಿ ನಡೆದ

ಸಾಮೂಹಿಕ ಗಣಪತಿ ಹೋಮ ಮತ್ತು ಬಿಲ್ವಾರ್ಚನೆ, ಧಾರ್ಮಿಕ ಸಭಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಸರ್ಕಾರ ಮಹಿಳೆಯರ ಸಬಲೀಕರಣಕ್ಕೆ ಯೋಜನೆ ರೂಪಿಸುವುದಕ್ಕೂ ಮೊದಲೇ ಮಹಿಳೆಯರ ಏಳಿಗೆಗೆ ಹತ್ತು, ಹಲವು ಯೋಜನೆಗಳನ್ನು ಧರ್ಮಸ್ಥಳ ಸಂಸ್ಥೆ ರೂಪಿಸಿತ್ತು. ಉಳಿತಾಯದ ಜೊತೆಗೆ, ವ್ಯವಸಾಯಕ್ಕೆ ಅನುವಾಗುವಂತೆ ಮಹಿಳೆಯರು ಕಿರು ಸಾಲ ಸೌಲಭ್ಯಗಳನ್ನು ಪಡೆದು, ಕಡಿಮೆ ಬಡ್ಡಿದರದಲ್ಲಿ ಹಿಂದಿರುಗಿಸುತ್ತಿರುವುದು ಒಳ್ಳೆಯ ಬೆಳವಣಿಗೆ ಮಹಿಳೆಯರು



ಸ್ವಾವಲಂಭನೆಯಾಗಿ ಬದುಕಲು ಸಂಸ್ಥೆ ದಾರಿ ದೀಪವಾಗಿದೆ ಎಂದು ಅಭಿಪ್ರಾಯಪಟ್ಟರು.

ತೆರಣಿಮುಂಟಿ ಗ್ರಾಮದ ರವಿರಾಮೇಶ್ವರ ದೇವಾಲಯದ ಅರ್ಚಕ ಭಾಸ್ಕರ್ ಮಾತನಾಡಿ, ಇತ್ತೀಚೀನ ದಿನಗಳಲ್ಲಿ ಅರಣ್ಯ ನಾಶದಿಂದಾಗಿ ಕಾಡಿನಿಂದ ಕಾಡುಪ್ರಾಣಿಗಳು ಹೊರಬುತ್ತಿವೆ. ಎಚ್.ಡಿ. ಕೋಟೆ ತಾಲೂಕು ಬಹುತೇಕ ಕಾಡಿನಿಂದ ಕೂಡಿತ್ತು, ದಿನಗಳು ಕಳೆದಂತೆ ಕಾಡಿನ ಪ್ರಮಾಣ ಕಡಿಮೆಯಾಗಿದೆ, ಇದರಿಂದಾಗಿಯೂ ಸಹ ಕಾಡು ಪ್ರಾಣಿಗಳು ನಾಡಿನತ್ತ ಧಾವಿಸುತ್ತಿರುವುದರಿಂದ ಕೆಲವು ಅನಾಹುತಗಳು ಸಂಭವಿಸಿವೆ ಎಂದು ಬೇಸರ ವ್ಯಕ್ತಪಡಿಸಿದರು. ಪಡುವಲು ವಿರಕ್ತ ಮಠದ ಮಠಾಧ್ಯಕ್ಷ ಮಹದೇವಸ್ವಾಮಿ ಮಾತನಾಡಿ, ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಯೋಜನೆಗಳನ್ನು ತಲುಪಿಸುವಲ್ಲಿ ಧರ್ಮಸ್ಥಳ ಗ್ರಾಮಭಿವೃದ್ಧಿ ಯೋಜನೆ ಸಫಲವಾಗಿದೆ. ಮನುಷ್ಯನು ಜೀವನದಲ್ಲಿ ಸಾರ್ಥಕತೆಯನ್ನು ಗಳಿಸಿಕೊಳ್ಳಲು ಧಾರ್ಮಿಕ ಸಭೆ, ಸಮಾರಂಭಗಳು ಸಹಕಾರಿಯಾಗಿವೆ. ಜೀವನದಲ್ಲಿ ನಿತ್ಯವೂ ಸಹ ಬಾಳ್ವೆಯಿಂದ ಬದುಕಿದಾಗ ಸಾರ್ಥಕತೆ ದೊರೆಯಲಿದೆ ಎಂದರು. ಗಣಪತಿ ಹೋಮ ಸಮಿತಿ ಅಧ್ಯಕ್ಷ ಎಚ್.ಎಸ್.ಮಂಜುನಾಯಕ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಹಿರಿಯ ಜಿಲ್ಲಾ ನಿರ್ದೇಶಕ ವಿ.ವಿಜಯ ಕುಮಾರ್ ನಾಗನಾಳ,ಮೇಲ್ವಿಚಾರಕಿ ಎಚ್. ಎಲ್.ಭಾರತಿ ನಾಗನಹಳ್ಳಿ ಗ್ರಾ.ಪಂ.ಅಧ್ಯಕ್ಷೆ ಇಂದ್ರಮ್ಮ ಮಹದೇವು, ಉಪಾಧ್ಯಕ್ಷ ಸ್ವಾಮಿ, ಸದಸ್ಯರಾದ ಎಚ್.ಸಿ. ರವಿ, ಲಕ್ಷ್ಮೀಕುಮಾರ್, ಚಿಕ್ಕದೇವಮ್ಮ ಮಂಜುನಾಥ, ಸೋಮಾಚಾರ್, ಎಚ್.ಟಿ. ಶೇಖರ್, ಎಚ್.ಜೆ. ಶಂಕರ್, ಪ್ರೇಮಕುಮಾರ್, ದೇವನಾಯಕ, ಚಂದ್ರಪ್ರಸಾದ್, ಪ್ರಕಾಶ್, ಸಿದ್ದಪ್ಪಾಜಿ, ಕನ್ನಡ ಸಾಹಿತ್ಯ ಪರಿಷತ್ತಿನ ತಾಲ್ಲೂಕು ಠಅಧ್ಯಕ್ಷ ಕನ್ನಡ ಪ್ರಮೋದ್, ವಲಯ , ಶಂಭು, ಶೇಖರ್, ಲೋಕೇಶ್, ನಾಗಮ್ಮ, ಪ್ರೇಮಚಂದ್ರ, ರಾಮರಾವ್, ಬೀರೇಗೌಡ, ಕುಮಾರ್ ಸೇರಿದಂತೆ ಗ್ರಾಮಸ್ಥರು, ಮುಖಂಡರು ಸಂಘದ ಸದಸ್ಯರು ಇದ್ದರು.

## ವಿವಿಧ ರೀತಿಯ ಸಾಲ ಸೌಲಭ್ಯ

**ಎಚ್.ಡಿ.ಕೋಟೆ ತಾಲೂಕಿನ ನಮ್ಮ ಸಂಸ್ಥೆ ಮಹಿಳಾ ಸದಸ್ಯರು ಸುಮಾರು 19.63 ಲಕ್ಷ ರೂ, ಉಳಿತಾಯ ಮಾಡಿದ್ದಾರೆ. 10 ರಿಂದ 12 ವರ್ಷಗಳಲ್ಲಿ ಸದಸ್ಯರ ಮೂಲ ಸೌಕರ್ಯಗಳಾದ ಶಿಕ್ಷಣ, ನೀರಾವರಿ, ಸ್ವ–ಉದ್ಯೋಗ, ಮನೆ, ಕೃಷಿ, ವ್ಯಾಪಾರ ಅನೇಕ ಉದ್ದೇಶಗಳಿಗೆ 900ಕೋ, ರೂಗಳನ್ನು ಸದಸ್ಯರಿಗೆ ಮೀಸಲಿಡಲಾಗಿದೆ. ನಾವು ಕೊಡುವ ಸಾಲವನ್ನು 99% ಜನ ತಪ್ಪದೇ ಕಟ್ಟುತ್ತಿದ್ದಾರೆ. ಕೇವಲ 1% ಜನರು ಮಾತ್ರ ಸಮಸ್ಯೆಗಳಿಂದ ಕಟ್ಟುತ್ತಿಲ್ಲ. ಸಂಘದಲ್ಲಿ 2012 ರಿಂದ 2020 ರವರೆಗೆ ನಾಲ್ಕೂವರೆ ಕೋಟಿ ಲಾಭಾಂಶ ಪಡೆದುಕೊಂಡಿದೆ. 2020 ರಿಂದ 2025 ರವರೆಗೆ 3.5ಕೋಟಿ ಲಾಭಾಂಶವನ್ನು ಸಂಘದ ಸದಸ್ಯರು ಪಡೆದುಕೊಂಡಿದ್ದಾರೆ ಎಂದು ತಾಲ್ಲೂಕು ಯೋಜನಾಧಿಕಾರಿ ವಿ. ಭಾಸ್ಕರ್ ಹೇಳಿದರು.**

## 31ರಿಂದ ಏತ ನೀರಾವರಿ ಜಾರಿಗೆ ಆಗ್ರಹಿಸಿ ಹೋರಾಟ

ಮೈಸೂರು: ಚಾಮರಾಜನಗರ ರಾಮಾಪುರ ಹೋಬಳಿ ವ್ಯಾಪ್ತಿಯ ದಂಟಳ್ಳಿ ಏತ ನೀರಾವರಿ ಯೋಜನೆಗೆ ಡಿಪಿಆರ್ ಮಾಡಿಸುವಲ್ಲಿ ಸರ್ಕಾರ, ಜಿಲ್ಲಾಡಳಿತ, ಜನಪ್ರತಿನಿಧಿಗಳು ನಿರ್ಲಕ್ಷ ?ಯ ವಹಿಸಿರುವುದನ್ನು ವಿರೋಧಿಸಿ ಜ.31ರಿಂದ ಮಲೆ ಮಹದೇಶ್ವರ ಬೆಟ್ಟ ರಸ್ತೆಯ ವಡಕೆಹಳ್ಳಿ ಗ್ರಾಮದಲ್ಲಿ ಅನಿರ್ದಿಷ್ಟಾವಧಿ ರಸ್ತೆ ತಡೆ ನಡೆಸಲಾಗುತ್ತಿದೆ ಎಂದು ಏತ ನೀರಾವರಿ ಹೋರಾಟ ಸಮಿತಿಯ ಜಿಲ್ಲಾ ಸಂಚಾಲಕ ಶೈಲೇಂದ್ರ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಈ ಯೋಜನೆಗೆ ಡಿಪಿಆರ್ ಮಾಡಿಸುವುದಾಗಿ ಮಾತುಕೊಟ್ಟಿದ್ದ ಶಾಸಕ ಎಂ.ಆರ್. ಮಂಜುನಾಥ್ ವಚನ ಭ್ರಷ್ಟರಾಗಿದ್ದಾರೆ. ಸಮಸ್ಯೆ ಬಗೆಹರಿಸುವ ನಿಟ್ಟಿನಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್ ಹಾಗೂ ಸಂಸದ ಸುನಿಲ್ ಬೋಸ್ ಸಹಾ ನಿರ್ಲಕ್ಷ ?? ಧೋರಣೆ ಅನುಸರಿಸುತ್ತಿದ್ದಾರೆ ಹೀಗಾಗಿ ಈಗ ಅನಿವಾರ್ಯವಾಗಿ ರಸ್ತೆ ತಡೆ ನಡೆಸಬೇಕಾಗುತ್ತಿದೆ. ಈ ವೇಳೆ ಯಾವುದಾದರೂ ಅನಾಹುತ ಸಂಭವಿಸಿದರೆ ಅದಕ್ಕೆ ಜಿಲ್ಲಾಡಳಿತ, ಸರ್ಕಾರ ಹಾಗೂ ಜನಪ್ರತಿನಿಧಿಗಳೇ ಹೊಣೆಯಾಗಬೇಕಾಗುತ್ತದೆ ಎಂದು ಎಚ್ಚರಿಸಿದರು. ಹನೂರು ಹೋಬಳಿ ವ್ಯಾಪ್ತಿಯ ಮಾರ್ಟಳ್ಳಿ, ಶೆಟ್ಟಹಳ್ಳಿ, ಕುರಟ್ಟಿ ಹೊಸೂರು, ರಾಮಾಪುರ, ಕೌದಳ್ಳಿ, ಮಹದೇಶ್ವರ ಬೆಟ್ಟ ಪಂಚಾಯಿತಿ, ವಡಕೆಹಳ್ಳದಲ್ಲಿ ಕಳೆದ 20 ವರ್ಷಗಳಿಂದ ಸರಿಯಾಗಿ ಮಳೆ ಬಾರದೇ ಅಂತರ್ಜಲ ಕುಸಿದಿದೆ. ಸುಮಾರು 1300 ಅಡಿ ಕೊರೆಯಿಸಿದರೂ ನೀರು ಬರುತ್ತಿಲ್ಲ. ಈಗ ಇರುವ ಕೊಳವೆ ಬಾವಿಗಳ ನೀರು ಗಡುಸಾಗಿದ್ದು, ಸೇವನೆಗೆ ಯೋಗ್ಯವಲ್ಲ. ಇವೆಲ್ಲವೂ ಕಾವೇರಿ ನದಿಯಿಂದ ಸುಮಾರು 30 ಕಿಮೀ ವ್ಯಾಪ್ತಿಯಲ್ಲಿ ಬರುತ್ತವೆ. ಆದ್ದರಿಂದ ಕಾವೇರಿ ನದಿಯಿಂದ ದಂಟಳ್ಳಿ ಮಾರ್ಗವಾಗಿ ಏತ ನೀರಾವರಿ ಸೌಲಭ್ಯ ಕಲ್ಪಿಸಿದರೆ, ಸಮಸ್ಯೆ ಬಗೆಹರಿಯಲಿದೆ. ಇದಕ್ಕಾಗಿ ಸತತ ಹೋರಾಟ ನಡೆದಿದೆ. ಜೊತೆಗೆ ಕಳೆದ ಅಕ್ಟೋಬರ್ 27 ರಿಂದ ವಡಕೆಹಳ್ಳ ಗ್ರಾಮದಲ್ಲಿ ಅನಿರ್ದಿಷ್ಟಾವಧಿ ಅಹೋರಾತ್ರಿ ಧರಣಿ ಹಮ್ಮಿಕೊಳ್ಳಲಾಗಿದೆ ಎಂದರು. ಈ ವೇಳೆ ಸ್ಥಳಕ್ಕಾಗಮಿಸಿದ ಅಂದಿನ ಜಿಲ್ಲಾಧಿಕಾರಿ ಶಿಲ್ಪಾನಾಗ್, ಶಾಸಕ ಎಂ.ಆರ್. ಮಂಜುನಾಥ್ ಸಂಕ್ರಾಂತಿ ಕಳೆದ ಬಳಿಕ ಡಿಪಿಆರ್ ಸಿದ್ಧಪಡಿಸುವುದಾಗಿ ತಿಳಿಸಿದ್ದರು. ಆದರೂ ಎಲ್ಲರೂ ನಿರ್ಲಕ್ಷ ?? ವಹಿಸಿದ್ದಾರೆ. ಹೀಗಾಗಿ ಈ ಜ.31 ರಿಂದ ಅನಿರ್ದಿಷ್ಟಾವಧಿ ರಸ್ತೆ ತಡೆ ಚಳವಳಿ ಹಮ್ಮಿಕೊಳ್ಳಲಾಗುತ್ತಿದೆ. ತಿಳಿಸಿದರು. ಜಾನ್‌ಪಾಲ್, ಅರ್ಬುದರಾಜ್, ಪೌಲ್ ಧರ್ಮರಾಜ್ ಮಾರ್ಟಳ್ಳಿ, ಅರುಳ್ ದಾಸ್ ಇನ್ನಿತರರು ಇದ್ದರು.



# ಗ್ರಾಪಂನಲ್ಲೂ ಸಮಾನ ವೇತನ ಕೊಡಿ

## ಆಯೋಗದ ಮುಂದೆ ಸಾಲು ಸಾಲು ಸಮಸ್ಯೆಗಳು | ಪೌರ ಕಾರ್ಮಿಕರೊಂದಿಗೆ ಸಂವಾದ

ಮೈಸೂರು: ಗ್ರಾಮ ಪಂಚಾಯಿತಿ ಪೌರ ಕಾರ್ಮಿಕರಿಗೂ ಸಮಾನ ವೇತನ ಕೂಲಿ ಕೊಡಿ. ಹೊರಗುತ್ತಿಗೆ ನೇರ ಪಾವತಿ ಪೌರ ಕಾರ್ಮಿಕರು ಅಕಾಲಿಕ ಮರಣಕ್ಕೆ ತುತ್ತಾದರೆ ಅವರ ಕುಟುಂಬದವರಿಗೆ ಯಾವುದೇ ಸೌಲಭ್ಯಗಳು ದೊರೆಯುತ್ತಿಲ್ಲ. ಅವರ ಕುಟುಂಬದವರಿಗೆ ಕೆಲಸ ನೀಡಬೇಕು. ಪೌರ ಕಾರ್ಮಿಕರ ನೇಮಕಾತಿಯಲ್ಲಿ ರೋಸ್ಟರ್ ಪದ್ದತಿ ರದ್ದಾಗಬೇಕು. ಅರ್ಹ ಪೌರ ಕಾರ್ಮಿಕರಿಗೆ ಆಶ್ರಯ ಯೋಜನೆಯಡಿ ವಸತಿ ಸೌಲಭ್ಯ ದೊರಕಿಸಿಕೊಡಬೇಕೆಂಬುದು ಸೇರಿ ಸಾಲು ಸಾಲು ಸಮಸ್ಯೆಗಳನ್ನು ಆಯೋಗದ ಮುಂದೆ ಹೇಳಿಕೊಂಡರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮೈಸೂರು ಮಹಾನಗರ ಪಾಲಿಕೆ, ಜಿಲ್ಲಾ ನಗರಾಭಿವೃದ್ಧಿ ಕೋಶ, ಸಮಾಜ ಕಲ್ಯಾಣ ಇಲಾಖೆ ಮೈಸೂರು ಇವರ ಸಹಯೋಗದೊಂದಿಗೆ ಮೈಸೂರು ಜಿಲ್ಲೆಯ ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಪೌರ ಕಾರ್ಮಿಕರು ಹಾಗೂ ಸ್ವಚ್ಛತಾ ಸಿಬ್ಬಂಗಳೊಂದಿಗೆ ಹಮ್ಮಿಕೊಂಡಿದ್ದ ಸಂವಾದದಲ್ಲಿ ಹಲವು ಸಮಸ್ಯೆಗಳನ್ನು ಹೇಳಿಕೊಂಡರು. ಪೌರ ಕಾರ್ಮಿಕರ ಖಾಯಂ ವಿಚಾರದಲ್ಲಿ ತಾರತಮ್ಯ ಆಗುತ್ತಿದ್ದು, ಬೆಳಗಿನ ಉಪಹಾರ ಕಳಪೆ ಗುಣಮಟ್ಟದಿಂದ ಕೂಡಿರುತ್ತದೆ. ಪೌರ ಕಾರ್ಮಿಕರ ವೇತನ ಪ್ರತಿ ತಿಂಗಳ 5 ತಾರೀಖಿನ ಒಳಗೆ ದೊರೆಯುತ್ತಿಲ್ಲ ಎಂದು ತಿಳಿಸಿದರು.

ಆರೋಗ್ಯ ತಪಾಸಣೆಗೆ ಕೆಲವು ಆಸ್ಪತ್ರೆಗಳನ್ನು ಮಾತ್ರ ಉಚಿತವಾಗಿ ನೀಡಲಾಗಿದೆ. ಮೈಸೂರು ಜಿಲ್ಲೆಯ ಎಲ್ಲಾ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸೆಗೆ ಅವಕಾಶ ಕಲ್ಪಿಸಬೇಕು. ಪೌರ ಕಾರ್ಮಿಕರನ್ನು ನೀಡಿರುವ ಟೆಂಡರ್ ದಾರರು ಕಾರ್ಮಿಕ ಇಲಾಖೆಗೆ ತಲಾ 50 ರೂ. ಪಾವತಿಸಿ ಇನ್ಸೂರೆನ್ ಮಾಡಿಸಿದರೆ ಕಾರ್ಮಿಕ ಇಲಾಖೆಯಿಂದ ಹಲವಾರು ಸೌಲಭ್ಯಗಳು ದೊರೆಯುತ್ತವೆ. ಮಹಾನಗರ ಪಾಲಿಕೆಯಲ್ಲಿರುವ ಎಲ್ಲಾ ಪೌರ ಕಾರ್ಮಿಕರ ಹುದ್ದೆಗಳನ್ನು ನೇಮಕಾತಿ ಮಾಡಬೇಕು ಎಂದು ಮನವಿ ಮಾಡಿದರು.

ಗ್ರಾಮ ಪಂಚಾಯತ್ ಮಟ್ಟದಲ್ಲಿ ಪೌರ



ಕಾರ್ಮಿಕರಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ದೊರೆಯುತ್ತಿಲ್ಲ. ಪೌರ ಕಾರ್ಮಿಕರಿಗೆ ನಿವೇಶನ ಸೌಲಭ್ಯ ದೊರೆಯುತ್ತಿಲ್ಲ. ಗ್ರಾಮ ಪಂಚಾಯತಿ ಪೌರ ಕಾರ್ಮಿಕರನ್ನು ಖಾಯಂ ಮಾಡಬೇಕು ಎಂದು ಮನವಿ ಸಲ್ಲಿಸಿದರು. ಮನವಿ ಆಲಿಸಿದ ಆಯೋಗದ ಅಧ್ಯಕ್ಷ ಪಿ.ರಘು ಮಾತನಾಡಿ,ಯಾವುದೇ ಹೋಟೆಲ್ ಗಳಲ್ಲಿ ಪೌರ ಕಾರ್ಮಿಕರು ಶೌಚಾಲಯಗಳನ್ನು ಬಳಸಲು ಮುಕ್ತ ಅವಕಾಶವಿದ್ದು, ಹೋಟೆಲ್ ಮಾಲೀಕರು ಅಡ್ಡಿಪಡಿಸುವಂತಿಲ್ಲ. ಪೌರ ಕಾರ್ಮಿಕರು ತಮ್ಮ ಮಕ್ಕಳನ್ನು ಪೌರ ಕಾರ್ಮಿಕರನ್ನು ಮಾಡುವ ಆಲೋಚನೆ ಬಿಟ್ಟು ಹೆಚ್ಚಿನ ಶಿಕ್ಷಣಕೊಡಿಸಿ ಎಂದರು.

ಇನ್ನೂ ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ, ಗ್ರಾಮ ಪಂಚಾಯಿತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಇಎಸ್‌ಐ, ಪಿಎಫ್ ಸೌಲಭ್ಯ ದೊರೆಯಬೇಕು. ಕೆಲವು ಏಜೆನ್ಸಿಗಳು ಕಾರ್ಮಿಕರನ್ನು ವಂಚಿಸುತ್ತಿವೆ. ಕಾಯಿಲೆ ಬಿದ್ದು ಅವರು ನಿಧನರಾದರೆ ಕುಟುಂಬಗಳು ಬೀದಿಗೆ ಬೀಳಲಿವೆ. ಇದನ್ನು ಮನಗಂಡು ಅಕಾರಿಗಳು ಕರ್ತವ್ಯ ನಿರ್ವಹಿಸಬೇಕು. ಕಾರ್ಮಿಕರನ್ನು ವಂಚಿಸುತ್ತಿರುವ ಏಜೆನ್ಸಿಗಳನ್ನು ಬ್ಲಾಕ್ ಲಿಸ್ಟ್ಗೆ ಸೇರಿಸಿ ಎಂದು ಖಡಕ್ ಸೂಚನೆ ನೀಡಿದರು.

ಕೆಎಸ್‌ಆರ್‌ಟಿಸಿಯಲ್ಲಿ ಕೆಲಸ ಮಾಡುತ್ತಿರುವ ಪೌರಕಾರ್ಮಿಕರಿಗೆ ಕನಿಷ್ಠ ವೇತನ ನೀಡದೆ ಏಜೆನ್ಸಿ ವಂಚಿಸಿದೆ. ಇದರ ಬಗ್ಗೆ ದೂರುಗಳು ಬಂದಿದೆ. ಆದರೂ ಏಜೆನ್ಸಿ ವಿರುದ್ಧ ಕ್ರಮ ಜರುಗಿಸಿಲ್ಲ. ಕೂಡಲೇ ಆ ಏಜೆನ್ಸಿಯನ್ನು ಬ್ಲಾಕ್ ಲಿಸ್ಟ್ ಸೇರಿಸಿ. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ ಕಾರ್ಮಿಕರಿಗೆ ಸ್ವಚ್ಛತಾ ಪರಿಕಾರಗಳನ್ನು ನೀಡಿಲ್ಲ ಎಂಬ ದೂರು ಇದೆ. ಇದರ ಬಗ್ಗೆ ತ್ವರಿತವಾಗಿ ಗಮನ ಹರಿಸಬೇಕು ಎಂದು ಸೂಚನೆ ನೀಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಅವರು 23 ರಿಂದ 25 ವಾರ್ಡ್ಗಳಲ್ಲಿ ಈಗಾಗಲೇ ವಿಶ್ರಾಂತಿ ಗೃಹಗಳನ್ನು ನಿರ್ಮಿಸಲಾಗಿದೆ. ಉಳಿದ ಕಡೆಗಳಲ್ಲಿಯೂ ವಿಶ್ರಾಂತಿ ಗೃಹಗಳನ್ನು ನಿರ್ಮಿಸಲು ಮುಂದಾಗಲಾವುದು. ಮಹಿಳಾ ಕಾರ್ಮಿಕರಿಗೆ ಆಯಾ ವಾರ್ಡ್‌ನಲ್ಲಿರುವ ಪ್ರತಿಯೊಂದು ಹೋಟೆಲ್‌ನಲ್ಲಿ ಮಹಿಳಾ ಕಾರ್ಮಿಕರಿಗೆ ಶೌಚಾಲಯಕ್ಕೆ ಅನುವು ಮಾಡಿಕೊಡಬೇಕು ಎಂದು ಸರ್ವೋಚ್ಚ ನ್ಯಾಯಾಲಯದ ಆದೇಶವಿದೆ. ಇದನ್ನು ಪಾಲನೆ ಮಾಡದ ಹೋಟೆಲ್‌ಗಳ ವಿರುದ್ಧ ನೋಟಿಸ್ ಕೊಟ್ಟು ಕ್ರಮ ಜರುಗಿಸಬೇಕು ಎಂದು ಅಕಾರಿಗಳಿಗೆ ಸೂಚನೆ ನೀಡಿದರು.

ಗುಣಮಟ್ಟ ಉಪಹಾರ ನೀಡಲು ಸೂಚನೆ ನೀಡಲಾಗುವುದು. ಆದರೆ, ಹಲವಾರು ಪೌರಕಾರ್ಮಿಕರು ಹೋಟೆಲ್‌ಗಳನ್ನು ಶುಚಿಗೊಳಿಸಿ ಉಪಹಾರ ಸೇವಿಸುತ್ತಿದ್ದಾರೆ. ಹೀಗಾಗಿ ಅವರಿಗೆ ಉಪಹಾರ ಕೊಡುವುದಕ್ಕಿಂತ ಹಣ ಪಾವತಿ ಮಾಡುವ ಕೆಲಸವಾಗಬೇಕು. ಈ ಕುರಿತು ಸರ್ಕಾರದ ಗಮನಕ್ಕೆ ತರಲಾಗಿದ್ದು, ಉಪಹಾರದ ಬದಲಿಗೆ ಹಣ ಜಮೆ ಮಾಡುವಂತಾಗಲಿದೆ ಎಂದು ಅಧ್ಯಕ್ಷರಿಗೆ ಮನವಿ ಮಾಡಿದರು.

ಕಳೆದ ಸಾಲಿನಲ್ಲಿ ಎಪಿಎಂಸಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಪೌರಕಾರ್ಮಿಕರಿಗೆ ಪಿಎಫ್, ಇಎಸ್‌ಐಯನ್ನು ಏಜೆನ್ಸಿ ಪಾವತಿ ಪಾಡಿಲ್ಲ ಎಂದು ದೂರು ಕೇಳಿಬಂದಿದ್ದು, ಸಂಬಂಧ ಪಟ್ಟ ಚಾಮುಂಡೇಶ್ವರಿ ಏಜೆನ್ಸಿ ವಿರುದ್ಧ ಕ್ರಮ ಕೈಗೊಳ್ಳುವಂತೆ ಅಕಾರಿಗಳಿಗೆ ತಿಳಿಸಿದರು.

ಕಾರ್ಮಿಕ ಇಲಾಖೆಯ ಆಯುಕ್ತ ಚೇತನ್ ಮಾತನಾಡಿ, ಹಲವಾರು ಏಜೆನ್ಸಿಗಳ ಮೇಲೆ ದೂರುಗಳು ಬಂದಿವೆ. ಅಕಾರಿಗಳು ಮುಂದಿನ ಕ್ರಮಗಳನ್ನು ಜರುಗಿಸದೆ ಅಂತಹ ಏಜೆನ್ಸಿಗಳನ್ನು ಕಪ್ಪು ಪಟ್ಟಿಗೆ ಸೇರಿಸಲಾಗುವುದು ಎಂದರು. ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ರಂಗೇಗೌಡ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಪ್ರಿಯದರ್ಶಿನಿ ಸೇರಿ ಇತರರು ಉಪಸ್ಥಿತರಿದ್ದರು.

### ಸಿಎಂ ಕ್ಷೇತ್ರದಲ್ಲೇ ಪೌರ ಕಾರ್ಮಿಕರಿಗೆ ಸೂರಿಲ್ಲ

**ಮುಖ್ಯಮಂತ್ರಿಗಳು ಪ್ರತಿನಿಧಿಸುವ ವರುಣ ಕ್ಷೇತ್ರದಲ್ಲಿ ಶೇಡ್ ಹಾಕಿಕೊಂಡು ವಾಸ ಮಾಡುತ್ತಿರುವ ನೀಲಮ್ಮ ಎಂಬುವವರು ಮನೆಗಾಗಿ ಮನವಿ ಮಾಡಿದರು. ಸಮಸ್ಯೆ ಆಲಿಸಿದ ಆಯೋಗ ಹೂಟಗಳ್ಳಿಯಲ್ಲಿ ಹೊಸದಾಗಿ ನಿರ್ಮಿಸುತ್ತಿರುವ ಬಡಾವಣೆಯಲ್ಲಿ ಶೀಘ್ರವಾಗಿ ಪೌರಕಾರ್ಮಿಕರಿಗೆ ನಿವೇಶನ ಕೊಡಬೇಕು ಎಂದು ತಾಕೀತು ಮಾಡಿದರು. ವರುಣ, ಹೂಟಗಳ್ಳಿ, ಹುಣಸೂರು, ಪಿರಿಯಾಪಟ್ಟಣ, ನಂಜನಗೂಡಿನಲ್ಲಿ ಮನೆ ಇಲ್ಲದವರಿಗೆ ಮನೆ ಕೊಡುವ ಕಾರ್ಯವಾಗಬೇಕು. ಸರ್ಕಾರದ ಯೋಜನೆ ಬಳಸಿ ಮನೆ ನಿರ್ಮಾಣಕ್ಕೆ ಮುಂದಾಗಬೇಕು. ನಿವೇಶನ ಇಲ್ಲದ ಕಡೆ ಜಾಗಗಳನ್ನು ಗುರುತು ಮಾಡಿ ಜಿಲ್ಲಾಕಾರಿಗಳ ಗಮನಕ್ಕೆ ತರಬೇಕು. ಈಗ ನಿವೇಶನ ಕೊಟ್ಟರೆ ಅವರಿಗೆ ಉಳಿಯಲಿದೆ. ಮುಂದಿನ ದಿನಗಳಲ್ಲಿ ನಿವೇಶನ ಸಿಗುವುದು ಕಷ್ಟವಾಗಲಿವೆ ಎಂದು ಹೇಳಿದರು.**

# ಸಾಂಸ್ಕೃತಿಕ ಸಂವೇಧನೆ ಉಳ್ಳವರು ಸಮಾಜದ ಮುನ್ನಡೆ

ರಾಮನಗರ: ಸಮಾಜವನ್ನು ಅರ್ಥ ಮಾಡಿಕೊಂಡವರು, ಸಾಂಸ್ಕೃತಿಕ ಸಂವೇಧನೆಯನ್ನು ಉಳ್ಳವರು, ಸಮಾಜದ ಮುನ್ನಡೆಗೆ ಕಾರಣರಾಗುತ್ತಾರೆ. ಕೆ.ಶೇಷಾದ್ರಿ ಇಂತಹ ವ್ಯಕ್ತಿತ್ವವುಳ್ಳ ವ್ಯಕ್ತಿ ಎಂದು ಚಿಂತಕ ಬಂಜಗೆರೆ ಜಯಪ್ರಕಾಶ್ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ದ್ಯಾವರಸೇಗೌಡನ ದೊಡ್ಡಿಯಲ್ಲಿ ನಗರಸಭಾಧ್ಯಕ್ಷ ಕೆ. ಶೇಷಾದ್ರಿ ಅವರ ಅಭಿಮಾನಿಗಳು ಹಮ್ಮಿಕೊಂಡಿದ್ದ "ಸಾರ್ಥಕ ಸೇವೆಯ ಸಮರ್ಪಣೆ ಜನಾಶೀರ್ವಾದಕ್ಕೆ ವರ್ಷದ ನಡೆ" ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಧಮನಿತರು, ಬಡವರು, ಸೌಲಭ್ಯವಂಚಿತರನ್ನು ಅಭಿವೃದ್ದಿಯತ್ತ ನಡೆಸಬೇಕು ಎಂಬ ಬದ್ದತೆಯುಳ್ಳವರನ್ನು ಜನ ತಮ್ಮ ಮೆಚ್ಚಿನ ನಾಯಕರು ಎಂದು ಪರಿಗಣಿಸುತ್ತಾರೆ. ಸಜ್ಜನಿಕೆ ಎಂಬುದು ಪ್ರಜಾಪ್ರಭುತ್ವಕ್ಕೆ ಅತ್ಯಗತ್ಯವಾಗಿದೆ. ರಾಜಕಾರಣಿಗಳಿಗೆ ಈ ಗುಣವೂ ಇರಬೇಕು. ಕೆ.ಶೇಷಾದ್ರಿ ಅವರಲ್ಲಿ ಈ ಎಲ್ಲಾ ಗುಣಗಳು ಇವೆ. ಹೀಗಾಗಿಯೇ ಅವರನ್ನು ಜನ ಮೆಚ್ಚಿದ ನಾಯಕರಾಗಿದ್ದಾರೆ ಎಂದರು. ಮಾಜಿ ಶಾಸಕ ಸಿ.ಎಂ.ಲಿಂಗಪ್ಪ ಅವರು ಕೂಡ ಜನ ಮೆಚ್ಚಿದ ನಾಯಕರಾಗಿದ್ದಾರೆ ಎಂದರು. ಸಾಹಿತಿ ಡಾ.ಬೈರಮಂಗಲ ರಾಮೇಗೌಡ ಮಾತನಾಡಿ, ಜನರ ನಡುವಿನಿಂದ ರೂಪುಗೊಂಡವರು ನಿಜವಾದ ಜನನಾಯಕರು. ಕೆ.ಶೇಷಾದ್ರಿ ಇಂತಹ ಜನನಾಯಕರು ಎಂದರು. ತಾವು ಕೆ.ಶೇಷಾದ್ರಿ ಅವರನ್ನು ಕಳೆದ 30 ವರ್ಷಗಳಿಂದ ಗಮನಿಸುತ್ತಿರುವುದಾಗಿ, ನಗರಸಭೆಯ ಅತ್ಯುನ್ನತ ಸ್ಥಾನದಲ್ಲಿರುವ



ಅವರು ನೆನೆಗುದಿಗೆ ಬಿದ್ದ ಕಾರ್ಯಗಳನ್ನು ಕೈಗೆತ್ತಿಕೊಂಡಿದ್ದಾರೆ. ಹೀಗಾಗಿಯೇ ಶೇಷಾದ್ರಿ ಅವರ 57ನೇ ಹುಟ್ಟುಹಬ್ಬ ಜನೋತ್ಸವವಾಗಿ ಪರಿವರ್ತನೆಯಾಗಿದೆ ಎಂದರು. ಜಿಲ್ಲಾ ಪ್ರಾಂಶುಪಾಲರ ಸಂಘದ ಅಧ್ಯಕ್ಷ ಜಿ.ಶಿವಣ್ಣ, ಮಾಜಿ ಶಾಸಕ ಸಿ.ಎಂ.ಲಿಂಗಪ್ಪ ಮಾತನಾಡಿದರು. ನಗರಸಭಾಧ್ಯಕ್ಷ ಕೆ.ಶೇಷಾದ್ರಿ ಜನತೆಗೆ ಕೃತಜ್ಞತೆ ಅರ್ಪಿಸಿ ಮುಂದಿನ ಒಂದು ವರ್ಷಗಳ ಕಾಲ ನಗರದ ಅಭಿವೃದ್ದಿಗೆ ಜನತೆ ಕೈಜೋಡಿಸಬೇಕು ಎಂದು ಕರೆ ನೀಡಿದರು. ಚನ್ನಪಟ್ಟಣ ಕ್ಷೇತ್ರದ ಶಾಸಕ ಸಿ.ಪಿ.ಯೋಗೇಶ್ವರ್, ಮಾಜಿ ಶಾಸಕ ಎಂ.ಸಿ.ಅಶ್ವಥ್, ಮಾಗಡಿ ಕ್ಷೇತ್ರದ ಮಾಜಿ ಶಾಸಕ ಎ.ಮಂಜುನಾಥ್, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಗಾಣಕಲ್ ನಟರಾಜ್, ಕೆ.ಎಂ.ಎಫ್ ಮಾಜಿ ಅಧ್ಯಕ್ಷ ಪಿ.ನಾಗರಾಜು, ಬಿಡದಿ ಪುರಸಭೆ ವಿಪಕ್ಷ ನಾಯಕ ಉಮೇಶ್, ಬಂಜಾರ ಅಕಾಡೆಮಿ ಅಧ್ಯಕ್ಷ ಡಾ.ಎ.ಆರ್.ಗೋವಿಂದಸ್ವಾಮಿ, ಕಾಂಗೋರು ಆಸ್ಪತ್ರೆಯ ಮುಖ್ಯಸ್ಥ ಡಾ. ಶೇಖರ್ ಸುಬ್ಬಯ್ಯ, ಪ್ರಮುಖರಾದ ಎಲ್. ಚಂದ್ರಶೇಖರ್, ಸಾಹುಕಾರ್ ಅಮ್ಜದ್ ಇದ್ದರು.

# ಜ.25ರಂದು ರೇಡಿಯಂಟ್ ಶಾಲೆ ಉದ್ಘಾಟನೆ

ಚಾಮರಾಜನಗರ, ರೇಡಿಯಂಟ್ ಸ್ಕೂಲ್ ಆಫ್ ಎಕ್ಸಲೆನ್ಸ್, ರೇಡಿಯಂಟ್ ಪಿಯು ಕಾಲೇಜು ಹಾಗೂ ರೇಡಿಯಂಟ್ ಅಕಾಡೆಮಿಯ ಉದ್ಘಾಟನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ರೇಡಿಯಂಟ್ ಶಿಕ್ಷಣ ಸಂಸ್ಥೆ ಅಧ್ಯಕ್ಷ ನಿಜಗುಣರಾಜು ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿ ಅವರು, ಗುಂಡ್ಲುಪೇಟೆ ತಾಲೂಕಿನ ದೊಡ್ಡ ತುಪ್ಪೂರು ಬಳಿಯಲ್ಲಿ ನಿರ್ಮಿಸಿರುವ ರೇಡಿಯಂಟ್ ಶಿಕ್ಷಣ ಸಂಸ್ಥೆಯನ್ನು ಜ.25 ರಂದು ಬೆಳಗ್ಗೆ 10.30ಕ್ಕೆ ಸುತ್ತೂರು ಶ್ರೀಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿಯವರು ಡಾ.ಶಿವಕುಮಾರಸ್ವಾಮೀಜಿ ಅವರ ಕಂಚಿನ ಪುತ್ಥಳಿಯನ್ನು ಅನಾವರಣ ಮಾಡಲಿದ್ದಾರೆ. ಸಿದ್ದಗಂಗಾ ಮಠದ ಶ್ರೀಸಿದ್ದಲಿಂಗಮಹಾಸ್ವಾಮೀಜಿಗಳು ಕಾಲೇಜು ಕಟ್ಟಡವನ್ನು ಉದ್ಘಾಟಿಸಲಿದ್ದಾರೆ ಎಂದು ಮಾಹಿತಿ ನೀಡಿದರು.



ಶ್ರೀಕ್ಷೇತ್ರ ಕನಕಗಿರಿಯ ಶ್ರೀಭುವನಕೀರ್ತಿ ಭಟ್ಟಾರಕಸ್ವಾಮೀಜಿಗಳು ದಿವ್ಯ ಸಾನಿಧ್ಯ ವಹಿಸಲಿದ್ದು, ಸಮಾರಂಭವನ್ನು ಬಿಜೆಪಿ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್.ಸಂತೋಷ್ ಉದ್ಘಾಟಿಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದಗೌಡ, ಸಂಸದ ಬಸವರಾಜ ಬೊಮ್ಮಾಯಿ, ಮಾಜಿ ಸಚಿವ ಸಿ.ಟಿ.ರವಿ, ಶಾಸಕರಾದ ಎಚ್.ಎಂ.ಗಣೇಶ್ ಪ್ರಸಾದ್, ಬಿ.ಪಿ.ಶ್ರೀವತ್ಸ, ಎಚ್.ಕೆ.ಸುರೇಶ್, ಮಾಜಿ ಶಾಸಕ ಸಿ.ಎಸ್.ನಿರಂಜನಕುಮಾರ್, ಬೆಳ್ಳಿ ಪ್ರಕಾಶ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಸಿ.ಸೋಮಶೇಖರ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಉತ್ತಮ ಅನುಭವವುಳ್ಳ ಪ್ರಾಧ್ಯಾಪಕರು ಶಿಕ್ಷಣ ಸಂಸ್ಥೆಯಲ್ಲಿದ್ದು, ಪೂರ್ವ ಪ್ರಾಥಮಿಕದಿಂದ ದ್ವಿತೀಯ ಪಿಯುಸಿ ವರೆಗೂ ಶಿಕ್ಷಣವನ್ನ ನೀಡಲಾಗುವುದು. ಪ್ರಥಮವಾದ ಕೊಠಡಿ ಗ್ರಂಥಾಲಯ ಹಾಗೂ ವಸತಿ ಸಹಿತ ಶಿಕ್ಷಣದ ವ್ಯವಸ್ಥೆಯನ್ನು ನಮ್ಮ ಶಿಕ್ಷಣ ಸಂಸ್ಥೆಯಲ್ಲಿ ಕಲ್ಪಿಸಲಾಗಿದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಸಲಹೆಗಾರರಾದ ಗೀತಾ ಬಸವರಾಜು, ಸಂಸ್ಥೆಯ ಕಾರ್ಯದರ್ಶಿ ಡಿ. ಶ್ವೇತಾ, ಡೀನ್ ಡಾ.ಸುರೇಶ್, ಪ್ರಾಂಶುಪಾಲರಾದ ಸಜಿತಾ ಸತೀಶ್, ಪಿಯು ಕಾಲೇಜಿನ ಪ್ರಾಂಶುಪಾಲ ಡಾ.ಸುಧಾಕರ್, ಡಾ.ಚಿದಾನಂದ್, ಡಾ.ಶಿವರಾಮಯ್ಯ ಹಾಜರಿದ್ದರು.

# ಕೋಟಂಬಳಿ ದೇವಾಲಯದ ಜೀರ್ಣೋದ್ದಾರಕ್ಕೆ ಬಿಡುಗಡೆಯಾಗಿದ್ದ ಅನುದಾನ ತಲುಪಿಲ್ಲ

ಚಾಮರಾಜನಗರ, ತಾಲೂಕಿನ ಕೋಟಂಬಳ್ಳಿ ಗ್ರಾಮದ ಶ್ರೀ ಆಂಜನೇಯಸ್ವಾಮಿ ದೇವಾಲಯದ ಪುನರ್ ನಿರ್ಮಾಣಕ್ಕಾಗಿ ಸರಕಾರದ ಆರ್ಥಿಕ ಇಲಾಖೆಯಿಂದ ಬಿಡುಗಡೆಯಾಗಿದ್ದ 75 ಲಕ್ಷ ರು, ಅನುದಾನ ಇಲ್ಲಿಯವರೆಗೂ ತಲುಪಿಲ್ಲ ಎಂದು ಗ್ರಾಮದ ಮುಖಂಡ ಮಂಜುನಾಥ್ ಆರೋಪಿಸಿದರು.



ನಗರದ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಕೋಟಂಬಳ್ಳಿ ಗ್ರಾಮದ ಶ್ರೀ ಆಂಜನೇಯ ಸ್ವಾಮಿ ದೇಬಾಲಯ ಪುರಾತನಕಾಲದಾಗಿದ್ದು, 300 ವರ್ಷಗಳ ಇತಿಹಾಸವಿದೆ ಎಂದು ಹೇಳಿದರು. ಈಗಾಗಲೇ ದೇವಾಲಯದ ಒಳಗೆ ಮತ್ತು ಹೊರಗೆ ಶಿಥಿಲವಾಗಿದ್ದು, ಮಳೆ ಬಂದರಂತೂ ನೀರು ಸೋರುತ್ತದೆ. ಮುಜರಾಯಿ ಇಲಾಖೆಗೆ ಸೇರಿದ ಈ ದೇವಾಲಯ ಬಿದ್ದು ಹೋಗುವ ಪರಿಸ್ಥಿತಿತಲುಪಿದೆ. ದೇವಾಲಯದ ಜೀರ್ಣೋದ್ದರ ಮಾಡಲು ಗ್ರಾಮಸ್ಥರೆಲ್ಲ ಸೇರಿ ನಿರ್ಧರಿಸಿದೆವು. ಈ ಸಂಬಂಧ ಕಳೆದ 20 ವರ್ಷಗಳಿಂದ ಸಂಬಂಧಪಟ್ಟವರಿಗೆ ಅರ್ಜಿಸಲ್ಲಿಸಿಕೊಂಡು ಬರುತ್ತಿದ್ದೇವೆ. 2024 ರಲ್ಲಿ ಮುಖ್ಯಮಂತ್ರಿಗಳಿಗೆ ಅರ್ಜಿಸಲ್ಲಿಸಿದ ಬಳಿಕ 2025 ರಲ್ಲಿ ಸರಕಾರದ ಮುಖ್ಯ ಕಾರ್ಯದರ್ಶಿ ನೀಡಿದ ದಾಖಲಾತಿಯನ್ನು ಧಾರ್ಮಿಕ ದತ್ತಿ ಸಚಿವರಿಗೆ ಕಳುಹಿಸಿಕೊಟ್ಟಿದ್ದರು. ಆ ನಂತರ ಆರ್ಥಿಕ ಇಲಾಖೆಯಿಂದ ರೂ, 75 ಲಕ್ಷ ಬಿಡುಗಡೆಯಾಗಿ ಸಂಬಂಧಿಸಿದ ಸಚಿವರಿಗೆ ಫೈಲ್ ಕಳುಹಿಸಿಕೊಡಲಾಗಿತ್ತು. ಫೈಲ್ ಎಲ್ಲಾ ಕಡೆ ಅಡ್ಡಾಡಿದ ನಂತರ ಕೊನೆಗೆ 15 ಲಕ್ಷ ರು, ಬಿಡುಗಡೆ ಮಾಡಿ ಆದೇಶ ಮಾಡಿದ್ದಾರೆ. ದೇವಾಲಯದ ಪುನರ್ ನಿರ್ಮಾಣಕ್ಕೆ ಬಿಡುಗಡೆಯಾಗಿದ್ದ 75 ಲಕ್ಷ ಅನುದಾನವನ್ನು ಸರಕಾರದಿಂದ ಕೊಡಿಸಿಕೊಡುವಂತೆ ರಾಜ್ಯಪಾಲರಿಗೂ ಮನವಿ ಮಾಡಿಕಡಿದ್ದೇವೆ. ಆದರೂ ಸಮಸ್ಯೆ ಬಗೆಹರಿದಿಲ್ಲ ಎಂದು ಅಸಮದಾನ ಹೊರಹಾಕಿದರು. ಸರಕಾರ ಮುಂದೆಯಾದರೂ ದೇವಾಲಯದ ಅಭಿವೃದ್ದಿಗೆ ಬಿಡುಗಡೆಯಾದ 75 ಲಕ್ಷ ರು ಅನುದಾನ ಬಿಡುಗಡೆಗೆ ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು.

## ಸರಕಾರಿ ಶಾಲೆಗಳಿಗೆ ಉಳಿವಿಗೆ ಒತ್ತಾಯ

# ಖಾಸಗಿ ಶಾಲೆಗಳಿಗೆ ಕಡಿವಾಣ ಹಾಕುವಂತೆ ಆಗ್ರಹ

ಚಾಮರಾಜನಗರ, ಜಿಲ್ಲೆಯ ವಿವಿಧೆಡೆ ಕಾನೂನು ಬಾಹಿರವಾಗಿ ತಲೆ ಎತ್ತುತ್ತಿರುವ ಖಾಸಗಿ ಶಾಲೆಗಳಿಗೆ ಕಡಿವಾಣ ಹಾಕಲು ಜಿಲ್ಲಾಡಳಿತ ಮತ್ತು ಸರಕಾರ ಕ್ರಮವಹಿಸದಿದ್ದರೆ ತೀವ್ರ ಸ್ವರೂಪದ ಹೋರಾಟ ನಡೆಸುವುದಾಗಿ ನಮ್ಮ ಕನ್ನಡಿಗರ ವಿಜಯಸೇನೆ ಹೋರಾಟ ಸಮಿತಿಯ ಜಿಲ್ಲಾಧ್ಯಕ್ಷ ಎಂ.ಮಂಜು ಎಚ್ಚರಿಸಿದರು.

ನಗರದ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದರು. ಒಂದೆಡೆ ಜಿಲ್ಲೆಯದ್ಯಾಂತ ಸದ್ದಿಲ್ಲದೇ ಖಾಸಗಿ ಶಾಲೆಗಳು ನಾಯಿಕೊಡೆಗಳಂತೆ ತೆರೆಯುತ್ತಿದ್ದರೇ, ಮತ್ತೊಂದೆಡೆ ಮಕ್ಕಳ ಹಾಜರಾತಿಯಿಲ್ಲದೆ,ಸರಕಾರಿ ಶಾಲೆ ಗಳು ಬಾಗಿಲು ಬಂದ್ ಆಗುತ್ತಿರುವುದು ದುರದೃಷ್ಟಕರ ಎಂದು ಅಸಮದಾನ ಹೊರಹಾಕಿದರು.

ಖಾಸಗಿ ಶಿಕ್ಷಣ ಸಂಸ್ಥೆಗಳ ಪ್ರತಿಭಟನೆಯಲ್ಲಿ ಹುರುಳಿಲ್ಲ: ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಹಾಗೂ ಖಾಸಗಿ ಶಾಲೆಗಳನ್ನು ತೆರೆಯಲು ವಿಧಿಸಿರುವ ಷರತ್ತುಗಳನ್ನು ಸಡಿಲಗೊಳಿಸುವಂತೆ ಒತ್ತಾಯಿಸಿ ಖಾಸಗಿ ಶಿಕ್ಷಣ ಸಂಸ್ಥೆಗಳು ನಗರದಲ್ಲಿ ನಡೆಸಿರುವ



ಪ್ರತಿಭಟನೆಗೆ ಜಿಲ್ಲಾಢಳಿತ ಹಾಗೂ ಸರಕಾರ ಮಣಿಯಬಾರದು ಎಂದು ಒತ್ತಾಯಿಸಿದರು.

ಶಾಲೆಗಳನ್ನು ತೆರೆಯುವಾಗ ಖಾಸಗಿ ಶಿಕ್ಷಣ ಸಂಸ್ಥೆಗಳು ನಿಯಾಮವಳಿಗಳನ್ನು ಪಾಲಿಸುತ್ತಿಲ್ಲ ಎಂಬುದರ ಬಗ್ಗೆ ದಾಖಲಾತಿಗಳನ್ನು ಕಲೆಹಾಕಲಾಗಿದೆ. ತಾಲೂಕಿನ ಹರದನಹಳ್ಳಿ, ಸರಗೂರು ಗ್ರಾಮಗಳಲ್ಲಿ ಕಾನೂನು ಭಾಹಿರವಾಗಿ ಶಾಲೆಗಳನ್ನು ತೆರೆಯಲಾಗಿದೆ. ಭೂಪರಿವರ್ತನೆ ಮಾಡಿಲ್ಲ. ಅನ್ಯಕ್ರಾಂತ ಆಗಿಲ್ಲ. ಅಗ್ನಿಶಾಮಕ ದಳದಿಂದ ಸುರಕ್ಷತಾ ಪ್ರಮಾಣ ಪತ್ರ ಪಡೆದಿರುವುದಿಲ್ಲ. ಶಿಕ್ಷಣ ಇಲಾಖೆ ಅಧಿಕಾರಿಗಳು ಖಾಸಗಿ ಶಿಕ್ಷಣ ಸಂಸ್ಥೆಗಳೊಂದಿಗೆ ಶಾಮೀಲಾಗಿ ಖಾಸಗಿ ಶಾಲೆಗಳನ್ನು ತಡರೆಯಲು ಕಣ್ಮುಚ್ಚಿಕೊಂಡು ಅನುಮತಿ ನೀಡುತ್ತಿದ್ದಾರೆ ಎಂದು ದೂರಿದರು. ಈಗಾಗಲೇ ಲೋಕಾಯುಕ್ತ ಅಧಿಕಾರಿಗಳು ಸೇರಿದಂತೆ ಜಿಲ್ಲಾಡಳಿತಕ್ಕೆ ದೂರು ನೀಡಿದ್ದೇವೆ. ಇದರಿಂದ ವಿಚಲಿತರಾಗಿರುವ ಖಾಸಗಿ ಶಿಕ್ಷಣ ಸಂಸ್ಥೆಗಳು ಕಾನೂನು ಬಾಹಿರವಾಗಿ ಶಾಲೆಗಳನ್ನು ತೆರೆಯಲು ಅನುಮತಿ ಕೇಳಿ ಪ್ರತಿಭಟನೆಗೆ ಧುಮುಕಿದ್ದಾರೆ. ಆದರೆ ಜಿಲ್ಲಾಢಳಿತ ಮತ್ತು ಸರಕಾರ ಖಾಸಗಿ ಶಿಕ್ಷಣ ಸಂಸ್ಥೆಗಳ ವ್ಯವಸ್ಥಿತ ಷಡ್ಯಂತ್ರಕ್ಕೆ ಸೊಪ್ಪು ಹಾಕಬಾರದು ಎಂದು ಒತ್ತಾಯಿಸಿದರು. ಖಾಸಗಿ ಶಾಲೆಗಳನ್ನು ತೆರೆಯಲು ಅನುಮತಿ ನೀಡದಿರುವಂತೆ ಆಗ್ರಹಿಸಿ ಜ, 29 ರಂದು ನಗರದಲ್ಲಿ ಪ್ರತಿಭಟನೆ ನಡೆಸುವುದಾಗಿ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ನಮ್ಮ ಕನ್ನಡಿಗರ ವಿಜಯಸೇನೆ ಮುಖಂಡರಾದ ಶಿವು, ಚಂದ್ರಶೇಖರ್, ಕೃಷ್ಣ ಇತರರು ಹಾಜರಿದ್ದರು.

# ಸಂಕ್ಷಿಪ್ತ ಸುದ್ದಿ

## ಯಶಸ್ವಿನಿ ಯೋಜನೆಯ ಸದಸ್ಯತ್ವ ನವೀಕರಣ ನೋಂದಣಿ



**ಕೆ.ಆರ್.ನಗರ:** ಪಟ್ಟಣದ ಗ್ರಾಮೀಣ ನಿಧಿ ಸೌಹಾರ್ದ ಕೋ ಆಪರೇಟಿವ್ ಸೊಸೈಟಿ ವತಿಯಿಂದ 2025 – 26 ನೇ ಸಾಲಿನ ಯಶಸ್ವಿನಿ ಯೋಜನೆಯ ಸದಸ್ಯತ್ವ ನವೀಕರಣ ಹಾಗೂ ಹೊಸದಾಗಿ ನೊಂದಣಿ ಮಾಡಲಾಗುತ್ತಿದೆ ಎಂದು ಸೊಸೈಟಿಯ ಅಧ್ಯಕ್ಷ ಕೆ.ಆರ್.ಶ್ಯಾಮಸುಂದರ್ ತಿಳಿಸಿದ್ದಾರೆ.

ಅವರು ಈ ಕುರಿತು ಪತ್ರಿಕಾ ಹೇಳಿಕೆಯನ್ನು ನೀಡಿ ಹೊಸದಾಗಿ ಹೆಸರನ್ನು ನೋಂದಾಯಿಸಲು ಹಾಗೂ ನವೀಕರಿಸಲು 500ರೂ ಶುಲ್ಕವನ್ನು ನಿಗದಿಪಡಿಸಲಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಉಚಿತವಾಗಿರುತ್ತದೆ. ಸೊಸೈಟಿಯ ಸದಸ್ಯರುಗಳು ತಮ್ಮ ಷೇರು ಪಾಸ್ ಪುಸ್ತಕ, ಆಧಾರ್ ಕಾರ್ಡ್ ಹಾಗೂ ತಮ್ಮ ಇತ್ತೀಚಿನ ಭಾವಚಿತ್ರವನ್ನು ತಂದು ಸೊಸೈಟಿಯಲ್ಲಿ ನೋಂದಾವಣೆ ಮಾಡಿಕೊಳ್ಳಬಹುದಾಗಿದೆ. ಈ ಯೋಜನೆಯನ್ನು ಸೊಸೈಟಿಯ ಎಲ್ಲಾ ಸದಸ್ಯರುಗಳು ಸದುಪಯೋಗ ಪಡಿಸಿಕೊಳ್ಳಬೇಕೆಂದು ಸೊಸೈಟಿಯ ಅಧ್ಯಕ್ಷ ಕೆ.ಆರ್.ಶ್ಯಾಮಸುಂದರ್ ಮನವಿ ಮಾಡಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಮೊ: 9986615961 ನ್ನು ಸಂಪರ್ಕಿಸಬಹುದಾಗಿದೆ.

## ತರಬೇತಿಗೆ ಅರ್ಜಿ ಆಹ್ವಾನ

**ಮಡಿಕೇರಿ:**–2025–26 ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಗೆ ಉದ್ಯೋಗ ಅವಕಾಶ ಒದಗಿಸುವ ನಿಟ್ಟಿನಲ್ಲಿ ಆಶ್ರೀರ್ವಾದ್ ಪೈಪ್ಸ್ ಪ್ರೈವೇಟ್ ಲಿಮಿಟೆಡ್, ಬೆಂಗಳೂರು ರವರು ತರಬೇತಿಯನ್ನು ಪ್ಲಂಮಿಂಗ್ ಸ್ಕೂಲ್, ಅತ್ತಿಬೆಲೆ ಬೆಂಗಳೂರು ಇಲ್ಲಿ 2 ತಿಂಗಳು 15 ದಿನಗಳು (75 ದಿನಗಳು) ತರಬೇತಿ ನೀಡಲಾಗುತ್ತದೆ.

ಅರ್ಜಿ ಸಲ್ಲಿಸಲು ಜನವರಿ, 31 ಕೊನೆಯ ದಿನವಾಗಿದೆ. ಅಭ್ಯರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದವರಾಗಿರಬೇಕು (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌಧ ಮತ್ತು ಪಾರ್ಸಿ). ಅಭ್ಯರ್ಥಿಯ ವಯಸ್ಸು ಕನಿಷ್ಠ 18 ರಿಂದ ಗರಿಷ್ಠ 35 ವರ್ಷ ಮೀರಿರಬಾರದು (ಅರ್ಜಿಸಲ್ಲಿಸಲು ಅಂತಿಮ ದಿನಾಂಕದೊಳಗೆ) ವಿದ್ಯಾರ್ಹತೆ 8 ನೇ, 10ನೇ ತರಗತಿ, ಐಟಿಐ, ಡಿಪ್ಲೋಮಾ, ಪಿಯುಸಿ ಮತ್ತು ಯಾವುದೇ ಪದವಿ (ಪಾಸ್/ಫೈಲ್).

ಹೆಚ್ಚಿನ ಮಾಹಿತಿಗೆ ತಾಲ್ಲೂಕು ಮಾಹಿತಿ ಕೇಂದ್ರ ಸೋಮವಾರಪೇಟೆ ದೂರವಾಣಿ ಸಂಖ್ಯೆ 8548068519, ವಿರಾಜಪೇಟೆ ದೂ.ಸಂ.9900731037 ಹಾಗೂ ಜಿಲ್ಲಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಮೌಲಾನಾ ಆಜಾದ್ ಭವನ, ಎಫ್‌ಎಂಸಿ ಕಾಲೇಜು ಹತ್ತಿರ, ಮಡಿಕೇರಿ ಕೊಡಗು ಜಿಲ್ಲೆ 9972799091 ನ್ನು ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಬಿ.ಎಂ.ದಿವಾಕರ ಅವರು ತಿಳಿಸಿದ್ದಾರೆ.

## ಜ.30 ರಂದು ಹುತಾತ್ಮರ ದಿನ

**ಮಡಿಕೇರಿ:** ಜಿಲ್ಲಾಡಳಿತ ಹಾಗೂ ಸರ್ವೋದಯ ಸಮಿತಿ ವತಿಯಿಂದ ಹುತಾತ್ಮರ ದಿನ ಪ್ರಯುಕ್ತ ಪೂಜ್ಯ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಚಿತಾಭಸ್ಮವನ್ನು ಜನವರಿ, 30 ರಂದು ಬೆಳಗ್ಗೆ 9.30 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಜಿಲ್ಲಾ ಖಜಾನೆ ಕಚೇರಿಯಿಂದ ಮೆರವಣಿಗೆಯಲ್ಲಿ ಪೊಲೀಸ್ ಗೌರವ ರಕ್ಷೆಯೊಂದಿಗೆ ತೆಗೆದುಕೊಂಡು ಹೋಗಿ ಗಾಂಧಿ ಮಂಟಪದ ಆವರಣದಲ್ಲಿ ಇರಿಸಿ ಬೆಳಗ್ಗೆ 10.30 ಗಂಟೆಗೆ ಸರ್ವಧರ್ಮ ಪ್ರಾರ್ಥನೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಎಸ್.ಜೆ.ಸೋಮಶೇಖರ್ ಅವರು ತಿಳಿಸಿದ್ದಾರೆ.

### ಹತ್ತು ಸಾವಿರ ಹೆಚ್ಚಿನ ವಿದ್ಯಾರ್ಥಿಗಳಿಂದ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತಾಗಿ ಪತ್ರ ಅಭಿಯಾನ

# ಜಿಲ್ಲೆಯ 9 ಗ್ರಾಮಗಳು ಈಗ ತಂಬಾಕು ಮುಕ್ತ : ಡಾಕುಮಾರ

**ಮಂಡ್ಯ :** ಜಿಲ್ಲೆಯಲ್ಲಿ 9 ಗ್ರಾಮಗಳನ್ನು ತಂಬಾಕು ಮುಕ್ತ ಗ್ರಾಮಗಳಾಗಿ ಘೋಷಣೆ ಮಾಡಲಾಗಿದ್ದು ಕಳೆದ ಸಭೆಯಲ್ಲಿ ಸೂಚಿಸಿದಂತೆ ಹತ್ತು ಸಾವಿರಕ್ಕೂ ಹೆಚ್ಚಿನ ಶಾಲಾ ಕಾಲೇಜು ವಿದ್ಯಾರ್ಥಿಗಳಿಂದ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಪತ್ರ ಅಭಿಯಾನ ನಡೆಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಗುರುವಾರ ಆಯೋಜಿಸಿದ್ದ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಮಕ್ಕಳಿಂದ ಅವರ ಪೋಷಕರಿಗೆ ಮಾದಕ ವಸ್ತುಗಳ ಸೇವನೆಯ ದುಷ್ಪರಿಣಾಮಗಳ ಕುರಿತು ಪತ್ರ ಬರೆಯುವ ಮೂಲಕ ಜಾಗೃತಿ ಮೂಡಿಸಿದರೆ ಪೋಷಕರು ಪರಿವರ್ತನೆಗೊಳ್ಳುವ ಸಾಧ್ಯತೆ ಇರುತ್ತದೆ ಜೊತೆಗೆ ಮಕ್ಕಳಿಗೂ ಸಹ ಮಾದಕ ವಸ್ತುಗಳನ್ನು ಸೇವನೆ ಮಾಡಬಾರದು ಎಂಬ ಅರಿವು ಮೂಡುತ್ತದೆ ಎಂದು ಹೇಳಿದರು.

ತುಂಬಾಕು, ಮದ್ಯಪಾನ, ಧೂಮಪಾನ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜಿಂಗಲ್ಸ್ ಸಿದ್ಧಪಡಿಸಿ ನಗರ ಸಭೆ ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ



ಸ್ವಚ್ಚತಾ ವಾಹನಗಳ ಮೂಲಕ ಅರಿವು ಮೂಡಿಸಿ ಎಂದು ಸೂಚಿಸಿದರು.

ಶಾಲಾ ವ್ಯಾಪ್ತಿಯಲ್ಲಿ ಮಾದಕ ವಸ್ತುಗಳ ಕುರಿತು ನಿಗಾ ವಹಿಸಲು ಶಿಕ್ಷಕರಿಗೆ ಜವಾಬ್ದಾರಿ ನೀಡಿ

ಶಾಲೆಗಳ ಸುತ್ತಲಿನ 100 ಮೀಟರ್ ವ್ಯಾಪ್ತಿಯಲ್ಲಿ ತುಂಬಾಕು ಅಥವಾ ಯಾವುದೇ ಮಾದಕ ವಸ್ತುಗಳನ್ನು ಮಾರಾಟ ಮಾಡುವಂತಿಲ್ಲ. ಆದರೆ ಕೆಲವು ಕಡೆ ಬೇರೆ ಬೇರೆ ಅಂಗಡಿಗಳ ಮೂಲಕ ಮಾದಕ ವಸ್ತುಗಳ ಮಾರಾಟವಾಗುವ ಸಾಧ್ಯತೆ ಇರುತ್ತದೆ ಹಾಗಾಗಿ ಶಾಲೆಯ ಸುತ್ತಲಿನಲ್ಲಿ ಯಾರು ಮಾದಕ ವಸ್ತುಗಳ ಮಾರಾಟ ಮಾಡುತ್ತಿದ್ದಾರೆ ಎಂಬುದನ್ನು ಗುರುತಿಸಿ ಸಂಬಂಧಪಟ್ಟವರಿಗೆ ತಿಳಿಸುವ ಜವಾಬ್ದಾರಿಯನ್ನು ಶಾಲಾ ಶಿಕ್ಷಕರಿಗೆ ವಹಿಸಿ ಎಂದು ಹೇಳಿದರು.

ಅನೇಕ ಸಂದರ್ಭಗಳಲ್ಲಿ ಜನರು ಕಬ್ಬಿನ ಗದ್ದೆ ಹಾಗೂ ಅರಣ್ಯ ಇಲಾಖೆಯ ವ್ಯಾಪ್ತಿಯ ಜಾಗದಲ್ಲಿ ಗಾಂಜಾ ಬೆಳೆಯನ್ನು ಬೆಳೆಸಿ ಮಾರಾಟ ಮಾಡುತ್ತಿದ್ದಾರೆ. ಅಂತಹವರನ್ನು ಗುರುತಿಸಿ ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಜಾರಿಗೊಳಿಸಿ. ಮಾದಕ ವಸ್ತುಗಳು ಸಮಾಜಕ್ಕೆ ಮಾರಕ ಹಾಗಾಗಿ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಸಾರ್ವಜನಿಕರಿಗೆ ಹೆಚ್ಚಿನ ಅರಿವು ಮೂಡಿಸಿ ಎಂದು ತಿಳಿಸಿದರು.

ನಗರ ಸಭೆ ವ್ಯಾಪ್ತಿಯಲ್ಲಿ ಅಕ್ರಮವಾಗಿ ತುಂಬಾಕು ಉತ್ಪನ್ನಗಳನ್ನು ಮಾರಾಟ ಮಾಡಿದರೆ ಸದರಿ ಅಂಗಡಿಯ ಮಾಲೀಕರ ಮಾರಾಟ ಪರವಾನಿಗೆಯನ್ನು (ಟ್ರೇಡ್ ಲೈಸನ್ಸ್) ರದ್ದುಗೊಳಿಸಿ. ತಂಬಾಕು ಸೇವನೆಯ ದುಷ್ಪರಿಣಾಮಗಳ ಪೋಸ್ಟರ್ ಗಳನ್ನು ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಪಾರ್ಕ್ ಮತ್ತು ಜನ ಸಂದಣಿ ಇರುವ ಕಡೆ ಅಂಟಿಸಿ ಅರಿವು ಮೂಡಿಸಿ, ಇಂಜಿನಿಯರಿಂಗ್, ಮೆಡಿಕಲ್ ಮತ್ತು ಪದವಿ ಕಾಲೇಜಿನ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆ ಪರಿಣಾಮಗಳ ಕುರಿತು ಜಾಗೃತಿ ಮೂಡಿಸಿ ಎಂದು ಹೇಳಿದರು.

ಮಾದಕ ವಸ್ತುಗಳ ಸೇವನೆಗೆ ಪ್ರಚೋದನೆ ನೀಡುವ ಸಿನಿಮಾ ಪೋಸ್ಟರ್ ಗಳನ್ನು ಬದಲಾಯಿಸಿ ಜಿಲ್ಲೆಯ ಚಿತ್ರಮಂದಿರಗಳಲ್ಲಿ ಬಿಡುಗಡೆಗೊಳ್ಳುವ ಹೊಸ ಚಲನಚಿತ್ರ ಪೋಸ್ಟರ್ ಗಳನ್ನು ಪರಿಶೀಲಿಸಿ. ಮಾದಕ ವಸ್ತುಗಳ ಸೇವನೆಗೆ ಪ್ರಚೋದನೆ ನೀಡುವ ಚಲನಚಿತ್ರಗಳ ಪೋಸ್ಟರ್ ಅನ್ನು ಬದಲಾಯಿಸುವಂತೆ ಚಿತ್ರಮಂದಿರದ ಮಾಲೀಕರಿಗೆ ಸೂಚಿಸಿ. ಸಾರ್ವಜನಿಕ ಸ್ಥಳಗಳಲ್ಲಿ ಮಾದಕ ವಸ್ತುಗಳ ಬಳಕೆಗೆ ಉತ್ತೇಜನ ನೀಡುವಂತಹ ಪೋಸ್ಟರ್ ಗಳನ್ನು ಅಳವಡಿಸುವುದು ಕಾನೂನು ಬಾಹಿರ ಎಂದು ಹೇಳಿದರು.

ಏಪ್ರಿಲ್ 2025 ರಿಂದ ಡಿಸೆಂಬರ್ 2025 ರ ವರೆಗೆ ಸಾರ್ವಜನಿಕ ಸ್ಥಳಗಳಲ್ಲಿ ಮಾದಕ ವಸ್ತುಗಳ ಸೇವನೆ ಅಕ್ರಮ ಮಾರಾಟ ಮಾಡುವುದನ್ನು 601 ಪ್ರಕರಣಗಳನ್ನು ದಾಖಲಿಸುವ ಮೂಲಕ ರೂ 64430 ದಂಡವನ್ನು ವಸೂಲಿ ಮಾಡಲಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಕೆ ಮೋಹನ್, ಅಬಕಾರಿ ಉಪ ಆಯುಕ್ತರಾದ ಡಾ. ಆರ್. ನಾಗಶಯನ, ಜಿಲ್ಲಾ ತುಂಬಾಕು ನಿಯಂತ್ರಣ ಕೋಶಾಧಿಕಾರಿ ತಿಮ್ಮರಾಜು, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಲೋಕೇಶ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಕುಮಾರ, ಕುಟುಂಬ ಕಲ್ಯಾಣಾಧಿಕಾರಿ ಡಾ. ಬೆಟ್ಟಸ್ವಾಮಿ, ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಎಮ್ ಎನ್ ಆಶಲಾತ, ಆರ್ ಸಿ ಎಚ್ ಅಧಿಕಾರಿ ಡಾ.ಕೆ.ಪಿ ಅಶ್ವಥ್, ಕುಷ್ಠರೋಗ ನಿರ್ಮೂಲನಾಧಿಕಾರಿ ಸೋಮಶೇಖರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಬಿ.ಗೌಡಗೆರೆ ಗ್ರಾ. ಪಂ.ವ್ಯಾಪ್ತಿಯ ಅಭಿವೃದ್ಧಿಗೆ ರೂ 15 ಕೋಟಿ ಅನುದಾನ : ಶಾಸಕ ರವಿ



**ಮಂಡ್ಯ:** ಕಳೆದ ಎರಡೂವರೆ ವರ್ಷದಲ್ಲಿ ಬಿ.ಗೌಡಗೆರೆ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ ರಸ್ತೆ ಸೇರಿದಂತೆ ಹಲವಾರು ಅಭಿವೃದ್ಧಿ ಕಾಮಗಾರಿಗಳಿಗೆ ರೂ 15 ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಎಂದು ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕ ರವಿಕುಮಾರ್ ಅವರು ಹೇಳಿದರು.

ಮಂಡ್ಯ ತಾಲ್ಲೂಕು ಆಡಳಿತದ ವತಿಯಿಂದ ಬಿ.ಗೌಡಗೆರೆ ಗ್ರಾಮದಲ್ಲಿ ನಡೆದ "ಜನತಾ ದರ್ಶನ" ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು ಸಾರ್ವಜನಿಕರು ಸರ್ಕಾರಿ ಕಚೇರಿಗಳನ್ನು ಅಲೆಯುವುದನ್ನು ತಪ್ಪಿಸಲು ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿಯ ಡಿ.ಕೆ ಶಿವಕುಮಾರ್ ಅವರು ಜನ ಸ್ಪಂದನ ಕಾರ್ಯಕ್ರಮವನ್ನು ಜಾರಿ ಗೊಳಿಸಿದರು ಎಂದು ಹೇಳಿದರು.

ಇದು ಮಂಡ್ಯ ತಾಲೂಕಿನಲ್ಲಿ ನಡೆಯುತ್ತಿರುವ 15 ನೇ ಜನತಾ ದರ್ಶನ ಕಾರ್ಯಕ್ರಮವಾಗಿದೆ, ಮಂಡ್ಯ ನಗರದ ವಾರ್ಡ್ ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿನಲ್ಲಿ ಅಧಿಕಾರಿಗಳನ್ನು ಒಳಗೊಂಡಂತೆ ಜನಸ್ಪಂದನ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು.

ಜನಸ್ಪಂದನ ಸಭೆಯಲ್ಲಿ ಜನರು ನೀಡುವ ಅರ್ಜಿಗಳನ್ನು ಸ್ಥಳದಲ್ಲಿ ಪರಿಹರಿಸಲಾಗುವುದು ಇಲ್ಲದ ಪಕ್ಷದಲ್ಲಿ ಸಾರ್ವಜನಿಕರು ಸಲ್ಲಿಸುವ ಅರ್ಜಿಗಳನ್ನು ಪರಿಶೀಲಿಸಿ ಕಾನೂನು ಬದ್ಧವಾಗಿದ್ದಾರೆ ಮೂವತ್ತು ದಿನಗಳಲ್ಲಿ ಸರಿಪಡಿಸಲಾಗುವುದು. ಕಣ್ಣಿನ ತಪಾಸಣೆ ಶಿಬಿರವನ್ನು ಆಯೋಜಿಸಲಾಗಿದೆ ಅಗತ್ಯ ಇರುವವರಿಗೆ ಕನ್ನಡಕವನ್ನು ನೀಡಲಾಗುತ್ತದೆ. ಸಾರ್ವಜನಿಕರ ಸಮಸ್ಯೆ ಪರಿಹಾರಿಸಲು ನಮ್ಮ ಸರ್ಕಾರ ಮತ್ತು ಅಧಿಕಾರಿಗಳು ಶ್ರಮವಹಿಸುತ್ತಿದ್ದೇವೆ ಎಂದು ತಿಳಿಸಿದರು.

ಮಲ್ಲಯ್ಯನದೊಡ್ಡ ಮತ್ತು ಕಟ್ಟೆದೊಡ್ಡಿ ರಸ್ತೆ ಸುಮಾರು 40 ವರ್ಷಗಳಿಂದ ದುಸ್ಥಿತಿಯಲ್ಲಿತ್ತು ಜನರ ಬೇಡಿಕೆಯಂತೆ ಸದರಿ ರಸ್ತೆ ಉದ್ಘಾಟನೆಗೆ ಸಿದ್ಧವಾಗಿದೆ. ರಸ್ತೆ ಅಭಿವೃದ್ಧಿಯನ್ನು ರೂ 2.80 ಕೋಟಿ ವೆಚ್ಚದಲ್ಲಿ ಎರಡು ಭಾಗವಾಗಿ ಮಾಡಲಾಗಿದೆ. ಹನಕೆರೆಯಿಂದ ಕನ್ನಲಿ ವರೆಗೂ ರಸ್ತೆ ನಿರ್ಮಾಣ ಮಾಡಲಾಗುವುದು. ರೂ 5 ಕೋಟಿ ವೆಚ್ಚದಲ್ಲಿ ಹನಕೆರೆಯಿಂದ ಹುಚ್ಚಾಳ್ಗೆಯ ವರೆಗೂ ರಸ್ತೆಯನ್ನು ಮುಂದಿನ ದಿನಗಳಲ್ಲಿ ಅಭಿವೃದ್ಧಿ ಪಡಿಸಲಾಗುವುದು ಎಂದು ಹೇಳಿದರು.

ನಮ್ಮ ಸರ್ಕಾರ ಇನ್ನೂ ಎರಡುವರೆ ವರ್ಷಗಳ ಕಾಲ ಇರುತ್ತದೆ ಗ್ರಾಮೀಣ ಭಾಗದ ಒಳ ರಸ್ತೆಗಳನ್ನು ಹಂತ ಹಂತವಾಗಿ ಸಿದ್ಧಪಡಿಸಲಾಗುವುದು. ಕಟ್ಟೆದೊಡ್ಡಿಯಲ್ಲಿ ಸುಸಜ್ಜಿತವಾದ ರಸ್ತೆಗಳನ್ನು ನಿರ್ಮಾಣ ಮಾಡಲು ರೂ 20 ಲಕ್ಷ ಬಿಡುಗಡೆ ಮಾಡಲಾಗಿದೆ. ಗ್ರಾಮ ಪಂಚಾಯಿತಿ ಕಟ್ಟಡ ನಿರ್ಮಾಣ ಮಾಡಲು ರೂ 5 ಕೋಟಿ ಬಿಡುಗಡೆ ಮಾಡಲಾಗಿದೆ ಎಂದು ಹೇಳಿದರು.

ಜಿಲ್ಲಾಧಿಕಾರಿ ಡಾ ಕುಮಾರ ಅವರು ಮಾತನಾಡಿ ಜನರೊಟ್ಟಿಗೆ ಬೆರೆಯುವ ನಿಜವಾದ ಜನನಾಯಕ ರವಿಕುಮಾರ್ ಅವರು, ಯಾವಾಗಲೂ ಜನರೊಟ್ಟಿಗೆ ಇದ್ದು ಜನರ ಸಮಸ್ಯೆಗಳನ್ನು ಆಲಿಸಿ ಸ್ಥಳದಲ್ಲಿಯೇ ಜನರಿಗೆ ಪರಿಹಾರ ನೀಡಬೇಕು ಎಂಬ ದೂರದೃಷ್ಟಿಯ ಶಾಸಕರಾದ ರವಿಕುಮಾರ್ ಅವರು ಹೊಂದಿದ್ದಾರೆ. ಕಳೆದ 6 ತಿಂಗಳಲ್ಲಿ 10 ಕ್ಕೂ ಹೆಚ್ಚು ಜನಸ್ಪಂದನ ಕಾರ್ಯಕ್ರಮವನ್ನು ಶಾಸಕರು ಆಯೋಜಿಸಿದ್ದಾರೆ ಎಂದು ಹೇಳಿದರು.

ಅನೇಕ ಸಂದರ್ಭಗಳಲ್ಲಿ ಅನಿವಾರ್ಯ ಕಾರಣಗಳಿಂದ ಸಾರ್ವಜನಿಕರು ಅಧಿಕಾರಿಗಳನ್ನು ಭೇಟಿ ಮಾಡಲು ಸಾಧ್ಯವಾಗುವುದಿಲ್ಲ. ಇಂತಹ ಜನಸ್ಪಂದನ ಕಾರ್ಯಕ್ರಮದಲ್ಲಿ ಅಧಿಕಾರಿಗಳು ನಿಮ್ಮ ಊರಿಗೆ ಬಂದು ನಿಮ್ಮ ಸಮಸ್ಯೆಗಳನ್ನು ಆಲಿಸಿ ಕಾನೂನು ಬದ್ಧವಾಗಿ ಪರಿಹಾರ ಒದಗಿಸುತ್ತಾರೆ. ಮೃತರಾದವರ ಹೆಸರು ಪಹಣಿಯಲ್ಲಿ ಈಗಲೂ ಸಹ ಮುಂದುವರೆಯುತ್ತಿದೆ, ವಾರಸುದಾರರು ತಾಲ್ಲೂಕು ಕಛೇರಿಗೆ ಆರ್.ಟಿ.ಸಿ . ವಂಶವೃಕ್ಷ ಮತ್ತು ಮರಣ ಪ್ರಮಾಣ ಪತ್ರ ನೀಡಿ ತಮ್ಮ ಹೆಸರಿಗೆ ಮಾಡಿಕೊಳ್ಳಬೇಕಾಗಿತ್ತು. ಜನರು ತಾಲೂಕು ಕಚೇರಿಗೆ ಅಲೆದಾಡುವುದನ್ನು ತಪ್ಪಿಸಲು ಸರ್ಕಾರ ಒಂದು ಮಹತ್ವಾಕಾಂಕ್ಷಿ ಯೋಜನೆಯಾದ ಪೌತಿ ಖಾತಾ ಆಂದೋಲನವನ್ನು ಜಾರಿಗೊಳಿಸಿದೆ ಎಂದರು.

ಮಂಡ್ಯ ಜಿಲ್ಲೆಯ ಎಲ್ಲಾ ಕಂದಯ ಇಲಾಖೆಯ ಅಧಿಕಾರಿಗಳು ಸಿಬ್ಬಂದಿ ವರ್ಗ ಉತ್ತಮವಾದ ಕೆಲಸವನ್ನು ಮಾಡಿರುವುದರಿಂದ ರಾಜ್ಯದಲ್ಲಿ ಮಂಡ್ಯ ಜಿಲ್ಲೆ ಪೌತಿ ಖಾತೆ ಆಂದೋಲನದಲ್ಲಿ ಪ್ರಥಮ ಸ್ಥಾನ ಪಡೆದುಕೊಂಡಿದೆ. ಆಫ್ ಲೈನ್ ನಲ್ಲಿ 70 ಸಾವಿರಕ್ಕೂ ಹೆಚ್ಚು ಪೌತಿ ಖಾತೆ ಮತ್ತು ಇ– ಪೌತಿ ಖಾತೆ ಮುಖಾಂತರ 58 ಸಾವಿರ ಪೌತಿ ಖಾತೆಯನ್ನು ಜಿಲ್ಲೆಯಲ್ಲಿ ಮಾಡಿದ್ದೇವೆ. ಮುಂದಿನ ದಿನಗಳಲ್ಲೂ ಹೆಚ್ಚು ಪೌತಿ ಖಾತೆಗಳನ್ನು ಮಾಡಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ತಹಶೀಲ್ದಾರ್ ವಿಶ್ವನಾಥ್, ಸರ್ಕಲ್ ಇನ್ಸ್ಪೆಕ್ಟರ್ ಪ್ರಕಾಶ್ ಸೇರಿದಂತೆ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

## ಶ್ರೀ ಶಿವಕುಮಾರ ಸ್ವಾಮೀಜಿ ರವರ 7ನೇ ವರ್ಷದ ಪುಣ್ಯ ಸ್ಮರಣೆ



**ಮಂಡ್ಯ:** ತ್ರಿವಿಧ ದಾಸೋಹಿ ಕರ್ನಾಟಕ ರತ್ನ ಡಾ. ಶ್ರೀ ಶ್ರೀ ಶ್ರೀ ಶಿವಕುಮಾರ ಸ್ವಾಮೀಜಿ ರವರ 7ನೇ ವರ್ಷದ ಪುಣ್ಯ ಸಂಸ್ಮರಣೆ ಕಾರ್ಯಕ್ರಮವನ್ನ ಮಂಡ್ಯ ನಗರ ಕಲ್ಲಹಳ್ಳಿ ಎಂ.ಸಿ. ರಸ್ತೆ ಶ್ರೀ ಶಿವಕುಮಾರ ಸ್ವಾಮೀಜಿ ಬಳಗ, ವೀರಭದ್ರೇಶ್ವರ ಟ್ರಾನ್ಸ್ಪೋರ್ಟ್ ಹಾಗೂ ಕಲ್ಲಹಳ್ಳಿ ಗ್ರಾಮಸ್ಥರು ಏರ್ಪಡಿಸಿದ್ದು ಡಾ. ಶಿವಕುಮಾರ್ ಸ್ವಾಮೀಜಿ ರವರ ಪುಣ್ಯ ಸಂಸ್ಮರಣ ಪೂಜಾ ಕಾರ್ಯಕ್ರಮ ಹಾಗೂ ಸಾರ್ವಜನಿಕರಿಗೆ ದಾಸೋಹ ಏರ್ಪಡಿಸಲಾಗಿತ್ತು ಈ ಸಂದರ್ಭದಲ್ಲಿ ಮುಖಂಡರಾದ ಎಚ್.ಪಿ. ಈರಣ್ಣ, ಕೊಬ್ಬರಿ ವರ್ತಕ ಮಹಾದೇವಸ್ವಾಮಿ, ರಾಷ್ಟ್ರೀಯ ಬಸವದಳದ ಅಧ್ಯಕ್ಷ ವಕೀಲ ಎಂ. ಗುರುಪ್ರಸಾದ್, ಪೋಲಿಸ್ ವೃತ್ತ ನಿರೀಕ್ಷಕ ಆನಂದ್ ಕುಮಾರ್, ಪ್ರಭು, ಮಹೇಶ್, ವಿಶ್ರಾಂತ ದೈಹಿಕ ಶಿಕ್ಷಕ ಶಿವರುದ್ರಸ್ವಾಮಿ, ವಕೀಲರಾದ ಶ್ರೀಕಂಠೇಗೌಡ, ತಿರುಮಲ ಸ್ವಾಮಿ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಿದ್ದು ಕಾರ್ಯಕ್ರಮ ಯಶಸ್ವಿಗೊಂಡಿತು.

## ಜ.23 ರಂದು ಕಾನೂನು ಅರಿವು ಮತ್ತು ನೆರವು ಶಿಬಿರ

**ಮಡಿಕೇರಿ:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯು ಹಿರಿಯ ನಾಗರಿಕರಿಗಾಗಿ ಕೇಂದ್ರ ಪ್ರಾಯೋಜಿತ ಅಟಲ್ ವಯೋ ಅಭ್ಯುದಯ ಯೋಜನೆಯಡಿ ಕೇಂದ್ರ ಸರ್ಕಾರದ ಸ್ಟೇಟ್ ಆಕ್ಷನ್ ಪ್ಲಾನ್ ಫಾರ್ ಸೀನಿಯರ್ ಸಿಟಿಜನ್ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಸಲುವಾಗಿ ಕಾನೂನು ಸೇವಾ ಸಮಿತಿ ಸಹಯೋಗದಲ್ಲಿ ಹಿರಿಯ ನಾಗರಿಕರ ಕಾಯ್ದೆ 2007, ಹಿರಿಯ ನಾಗರಿಕರ ಆಸ್ತಿ ಸಂರಕ್ಷಣೆ, ಹಿರಿಯ ನಾಗರಿಕರಿಗೆ ಇರುವ ಸೌಲಭ್ಯಗಳ ಕುರಿತಾಗಿ ಸಾರ್ವಜನಿಕರಿಗೆ ಕಾನೂನು ಅರಿವು ಮತ್ತು ನೆರವು ಶಿಬಿರ ಕಾರ್ಯಕ್ರಮವು ಶಿಶು ಕಲ್ಯಾಣ ಸಂಸ್ಥೆ(ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದ ಹತ್ತಿರ, ಮಡಿಕೇರಿ) ಇಲ್ಲಿ ಜನವರಿ, 23 ರಂದು ಬೆಳಗ್ಗೆ 10.30 ಗಂಟೆಗೆ ನಡೆಯಲಿದೆ.

### ಮಂಡ್ಯದ ಚಾವಿಸನಿನಿ ವೃತ್ತ ಕಚೇರಿ ಆವರಣದಲ್ಲಿ ನಿಗಮದ ಅಧ್ಯಕ್ಷ ರಮೇಶ್ ಬಂಡಿಸಿದ್ದೇಗೌಡ ಉದ್ಘಾಟನೆ

# ಮೊದಲ ಇವಿ ಚಾರ್ಜಿಂಗ್ ಘಟಕ ಲೋಕಾರ್ಪಣೆ

**ಮಂಡ್ಯ:** ಸಾರ್ವಜನಿಕರಿಗೆ ತ್ವರಿತವಾಗಿ ಎಲೆಕ್ಟ್ರಿಕ್ ವಾಹನಗಳ ಚಾರ್ಜಿಂಗ್ ವ್ಯವಸ್ಥೆ ಕಲ್ಪಿಸುವ ಉದ್ದೇಶದಿಂದ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ (ಸೆಸ್ಕ್)ವು ಮಂಡ್ಯ ಜಿಲ್ಲೆಯಲ್ಲಿ ಮೊದಲ ಸಾರ್ವಜನಿಕ ವಿದ್ಯುತ್ ವಾಹನಗಳ ಫಾಸ್ಟ್ ಚಾರ್ಜಿಂಗ್ ಕೇಂದ್ರವನ್ನು ಆರಂಭಿಸಿದೆ.

ಸೆಸ್ಕ್ ಮಂಡ್ಯ ವೃತ್ತ ಕಚೇರಿ ಆವರಣದಲ್ಲಿ ಪ್ರಾರಂಭಿಸಿರುವ ನೂತನ ಹಾಗೂ ಜಿಲ್ಲೆಯ ಮೊದಲ ಸಾರ್ವಜನಿಕ ವಿದ್ಯುತ್ ವಾಹನಗಳ ಫಾಸ್ಟ್ ಚಾರ್ಜಿಂಗ್ ಕೇಂದ್ರವನ್ನು ಸೆಸ್ಕ್ ಅಧ್ಯಕ್ಷರೂ ಆಗಿರುವ ಶಾಸಕ ರಮೇಶ್ ಬಂಡಿಸಿದ್ದೇಗೌಡ, ಜಿಲ್ಲಾಧಿಕಾರಿ ಕುಮಾರ್ ಹಾಗೂ ಸೆಸ್ಕ್ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಎಂ. ಮುನಿಗೋಪಾಲ್ ರಾಜು ಅವರು ಗುರುವಾರ ಲೋಕಾರ್ಪಣೆ ಮಾಡಿದರು. ನಂತರ ಮಾತನಾಡಿದ ಶಾಸಕ ರಮೇಶ್ ಬಂಡಿಸಿದ್ದೇಗೌಡ ಅವರು, ?ಇತ್ತೀಚೆಗೆ ಎಲೆಕ್ಟ್ರಿಕ್ ವಾಹನಗಳ ಬಳಕೆ ಪ್ರಮಾಣ ಹೆಚ್ಚಾಗುತ್ತಿದ್ದು, ವಾಯುಮಾಲಿನ್ಯ ತಡೆಗಟ್ಟಲು ಹಾಗೂ ಇಂಧನದ ಆಮದು ಅವಲಂಬನೆಯನ್ನು ಕಡಿಮೆ ಮಾಡಲು ಇವಿ ವಾಹನಗಳ ಬಳಕೆ ಅತ್ಯಂತ ಸಹಕಾರಿಯಾಗಿದೆ.

> “ಕೆಲವು ದಿನಗಳ ಹಿಂದಷ್ಟೇ ಮೈಸೂರಿನಲ್ಲಿರುವ ಸೆಸ್ಕ್ ಪ್ರಧಾನ ಕಚೇರಿಯಲ್ಲಿ ಇವಿ ಫಾಸ್ಟ್ ಚಾರ್ಜಿಂಗ್ ಹಬ್ ಪ್ರಾರಂಭಿಸಲಾಗಿತ್ತು. ಇದೀಗ ಮಂಡ್ಯ ನಗರದಲ್ಲಿ ಸಾರ್ವಜನಿಕರ ಬಳಕೆಗೆ ಮೊದಲ ಇವಿ ಫಾಸ್ಟ್ ಚಾರ್ಜಿಂಗ್ ಘಟಕ ಆರಂಭಿಸಿದ್ದು, ಇದರಿಂದ ಇವಿ ವಾಹನಗಳ ಬಳಕೆದಾರರಿಗೆ ಅನುಕೂಲವಾಗಲಿದೆ. ಮುಂದಿನ ದಿನಗಳಲ್ಲಿ ಇತರೆ ಕಡೆಗಳಲ್ಲಿ ಹೆಚ್ಚಿನ ಇವಿ ಫಾಸ್ಟ್ ಚಾರ್ಜಿಂಗ್ ಕೇಂದ್ರಗಳನ್ನು ಸ್ಥಾಪಿಸಿ, ಇವಿ ವಾಹನಗಳ ಬಳಕೆಗೆ ಉತ್ತೇಜನ ನೀಡಲಾಗುವುದು.
>
> । ಕೆ.ಎಂ. ಮುನಿಗೋಪಾಲ್ ರಾಜು, ವ್ಯವಸ್ಥಾಪಕ ನಿರ್ದೇಶಕರು, ಸೆಸ್ಕ್.

ಇದಕ್ಕಾಗಿ ಸೆಸ್ಕ್ ವತಿಯಿಂದ ಎಲೆಕ್ಟ್ರಿಕ್ ವಾಹನಗಳ ಬಳಕೆಗೆ ಉತ್ತೇಜನ ನೀಡುವ ಮೂಲಕ ಹಸಿರು ಶಕ್ತಿಯ ಬಳಕೆಗೆ ಪ್ರೋತ್ಸಾಹ ನೀಡಲಾಗುತ್ತಿದೆ? ಎಂದರು.

**ಇವಿ ವಾಹನ ಬಳಕೆಗೆ ಉತ್ತೇಜನ:** ವಿದ್ಯುತ್ ಚಾಲಿತ ವಾಹನಗಳ ಬಳಕೆ ಉತ್ತೇಜಿಸುವ ದೃಷ್ಟಿಯಿಂದ ಹಾಗೂ ಖಾಸಗಿ ಇವಿ ಚಾರ್ಜಿಂಗ್ ಕೇಂದ್ರಗಳನ್ನು ಅಳವಡಿಸಲು ಉತ್ತೇಜಿಸುವಲ್ಲಿ ಚಾವಿಸನಿನಿಯು ವಿದ್ಯುತ್ ವಾಹನಗಳ ಫಾಸ್ಟ್ ಚಾರ್ಜಿಂಗ್ ಕೇಂದ್ರವನ್ನು ಆರಂಭಿಸಿದೆ.

**ಇವಿ ಕೇಂದ್ರದ ಅಂಶಗಳು :** ಮಂಡ್ಯ ವೃತ್ತ ಕಚೇರಿ ಆವರಣದಲ್ಲಿ ಆರಂಭಿಸಿರುವ ಇವಿ ಫಾಸ್ಟ್ ಚಾರ್ಜಿಂಗ್ ಘಟಕದಲ್ಲಿ ಒಟ್ಟಾರೆ 3 ನಾಲ್ಕು ಚಕ್ರ ವಾಹನಗಳನ್ನು ಏಕಕಾಲದಲ್ಲಿ ಚಾರ್ಜ್ ಮಾಡಬಹುದಾಗಿದೆ. ಈ ಕೇಂದ್ರದಲ್ಲಿ ಪ್ರಸ್ತುತ 30 ಕೆವಿ ಡಿಸಿ ಚಾರ್ಜರ್ ಮತ್ತು 7.4 ಕೆವಿ ಎಸಿ ಚಾರ್ಜರ್‌ಗಳಿದ್ದು, ಭವಿಷ್ಯದಲ್ಲಿ ಇದನ್ನು 240 ಕೆವಿ ಸೂಪರ್ ಫಾಸ್ಟ್ ಚಾರ್ಜಿಂಗ್ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಬಹುದಾಗಿದೆ. ಸಾರ್ವಜನಿಕರು ?Instacharge" App ಬಳಸಿಕೊಂಡು ಈ ವಿದ್ಯುತ್ ವಾಹನಗಳ ಫಾಸ್ಟ್ ಚಾರ್ಜಿಂಗ್ ಕೇಂದ್ರದಲ್ಲಿ ತಮ್ಮ ವಾಹನಗಳನ್ನು ಚಾರ್ಜ್ ಮಾಡಬಹುದು. ಈ ಕೇಂದ್ರದಲ್ಲಿ ಚಾರ್ಜ್ ಅನ್ನು M/s Epic Power ಅವರು ಸರಬರಾಜು ಮಾಡಿ ಅಳವಡಿಸಿರುತ್ತಾರೆ.

ಈ ಸಂದರ್ಭದಲ್ಲಿ ಸೆಸ್ಕ್ ತಾಂತ್ರಿಕ ನಿರ್ದೇಶಕ ಡಿ.ಜೆ. ದಿವಾಕರ್, ಮುಖ್ಯ ಇಂಜಿನಿಯರ್ ಮೃತ್ಯುಂಜಯ ಸೇರಿದಂತೆ ನಿಗಮದ ಅಧಿಕಾರಿಗಳು ಹಾಗೂ ಸಿಬ್ಬಂದಿ ಇದ್ದರು.




## ಧರ್ಮದ ರಕ್ಷಣೆಗೆ ಒಕ್ಕಲಿಗ ಧರ್ಮ ಮಹಾಸಭಾ ಕೆಲಸ : ಶ್ರೀ ಸಿದ್ದರಾಮ ಚೈತನ್ಯ ಸ್ವಾಮೀಜಿ ನುಡಿ

**ಹಾಸನ:** ಒಕ್ಕಲಿಗ ಸಮುದಾಯದ ರಕ್ಷಣೆ ಹಾಗೂ ಒಕ್ಕಲಿಗ ಧರ್ಮವನ್ನು ರಾಜ್ಯಾದ್ಯಂತ ಪಸರಿಸುವ ನಿಟ್ಟಿನಲ್ಲಿ ಒಕ್ಕಲಿಗ ಧರ್ಮ ಮಹಾಸಭಾ ಕೆಲಸ ಮಾಡಲಿದೆ ಎಂದು ಕುಣಿಗಲ್ ಅರೇಶಂಕರ್ ಮಠದ ಮಠಾಧೀಶರಾದ ಶ್ರೀ ಸಿದ್ದರಾಮ ಚೈತನ್ಯ ಸ್ವಾಮೀಜಿ ಹೇಳಿದರು.

ನಗರದ ಹೊಸ ಹೌಸಿಂಗ್ ಬೋರ್ಡ್ ಕಾಲೋನಿಯಲ್ಲಿ ಇಂದು ಒಕ್ಕಲಿಗ ಧರ್ಮ ಮಹಾಸಭಾದ ಹಾಸನ ಜಿಲ್ಲಾ ಕಚೇರಿ ಉದ್ಘಾಟನೆ ಬಳಿಕ ಮಾತನಾಡಿದ ಅವರು, ಒಕ್ಕಲಿಗ ಧರ್ಮ ರಾಜ್ಯದಲ್ಲಿ ಭದ್ರವಾದ ತಳಹದಿ ಮೇಲೆ ಸ್ಥಾಪಿತವಾಗುತ್ತಿದೆ ಗಟ್ಟಿಯಾಗಿ ಸಂಘಟಿತ ವಾಗುತ್ತಿರುವ ಎಲ್ಲಾ ಸಮುದಾಯದ ಮುಖಂಡರಿಗೆ ಈ ಮೂಲಕ ಧನ್ಯವಾದ ತಿಳಿಸುವುದಾಗಿ ಹೇಳಿದರು.

ಒಕ್ಕಲಿಗ ಶಿವ ಯೋಗಿ ಸಿದ್ದರಾಮ ಸ್ವಾಮಿಗಳ ಮಾರ್ಗದರ್ಶನದಲ್ಲಿ ಒಕ್ಕಲಿಗ ಧರ್ಮದ ಅನುಷ್ಠಾನವನ್ನು ಬಹಳ ಮುತುವರ್ಜಿ ವಹಿಸಿ ಮಾಡಲಾಗುತ್ತಿದೆ. ಒಕ್ಕಲಿಗ ಮುದ್ದಣ್ಣ, ಕುವೆಂಪು ಅವರ ಹಾದಿಯಲ್ಲಿ ಒಕ್ಕಲಿಗ ಧರ್ಮ ಮಹಾಸಭಾ ಇನ್ನಷ್ಟು ಕಟ್ಟಿಕೊಳ್ಳಲಿ ಎಂದು ಶುಭ ಹಾರೈಸಿದರು.

ಒಕ್ಕಲಿಗ ಸಮುದಾಯದ ಪೂಜ್ಯ ಗುರುಗಳು ಸಾಹಿತಿಗಳು ಹಿರಿಯ ಮುತ್ಸದ್ದಿಗಳ ತತ್ವ ಸಿದ್ಧಾಂತಗಳನ್ನು ಸಮಾಜಕ್ಕೆ ಪಸರಿಸುವ ಮೂಲಕ ಸಮಾಜದಲ್ಲಿ ಧರ್ಮ ಬಿತ್ತುವ ಕೆಲಸದಲ್ಲಿ ಹಾಸನ



ಜಿಲ್ಲೆ ಮುಂಚೂಣಿಯಲ್ಲಿದೆ ಎಂದರು.

ಇಂದು ಒಕ್ಕಲಿಗ ಧರ್ಮ ಮಹಾಸಭಾ ದ ಹಾಸನ ಜಿಲ್ಲಾ ಕಚೇರಿ ತೆರೆಯಲಾಗಿದ್ದು ಮುಂದಿನ ದಿನಗಳಲ್ಲಿ ಎಲ್ಲಾ ತಾಲೂಕು ಘಟಕಗಳ ಸಮ್ಮುಖದಲ್ಲಿ ಹಾಸನದಲ್ಲಿ ಒಂದು ರಾಜ್ಯಮಟ್ಟದ ಸಮಾವೇಶ ಮಾಡುವ ಮೂಲಕ ಮಾದರಿಯಾಗೋಣ. ಇದಕ್ಕೆ ಎಲ್ಲರ ಸಹಕಾರ ಅಗತ್ಯ ಎಂದರು.

ಕಾರ್ಯಕ್ರಮದಲ್ಲಿ ಒಕ್ಕಲಿಗ ಧರ್ಮ ಮಹಾಸಭಾದ ಜಿಲ್ಲಾಧ್ಯಕ್ಷ ನಾರಿಹಳ್ಳಿ ರಮೇಶ್, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಭಾರತಿ, ಯುವ ಘಟಕದ ಜಿಲ್ಲಾಧ್ಯಕ್ಷ ವರುಣ್ ಗೌಡ ಸೇರಿದಂತೆ ಇತರರು ಇದ್ದರು.

## ಜ.23 ರಂದು ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ 129 ನೇ ಜನ್ಮ ದಿನಾಚರಣೆ

**ಮಡಿಕೇರಿ:** ತಾಳತ್ತಮನೆ ನೇತಾಜಿ ಯುವಕ ಮಂಡಲ ಹಾಗೂ ಯುವತಿ ಮಂಡಳಿ ವತಿಯಿಂದ ಮೈ ಭಾರತ್, ಕೊಡಗು, ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ತಾಲ್ಲೂಕು ಯುವ ಒಕ್ಕೂಟ ಇವರ ಸಂಯುಕ್ತಾಶ್ರಯದಲ್ಲಿ ಭಾರತದ ಮಹಾನ್ ಸ್ವಾತಂತ್ರ್ಯ ಯೋಧ ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ 129ನೇ ಜನ್ಮ ದಿನಾಚರಣೆ ಹಾಗೂ ನೇತಾಜಿ ಯುವಕ ಮತ್ತು ಯುವತಿ ಮಂಡಲದ 34ನೇ ವಾರ್ಷಿಕೋತ್ಸವದ ಅಂಗವಾಗಿ ಜಿಲ್ಲಾ ಮಟ್ಟದ ಪುರುಷರ ವಾಲಿಬಾಲ್ ಪಂದ್ಯಾಟ, ಜಿಲ್ಲಾ ಮಟ್ಟದ ಮಹಿಳೆಯರ ಹಗ್ಗಜಗ್ಗಾಟ, ಮ್ಯಾರಾಥಾನ್ ಹಾಗೂ ಜಿಲ್ಲಾ ಮಟ್ಟದ ಸಾಂಸ್ಕೃತಿಕ ಕಾರ್ಯಕ್ರಮವು ಜನವರಿ, 23 ರಂದು ಮಡಿಕೇರಿ ತಾಲ್ಲೂಕು ತಾಳತ್ತಮನೆ ಆಟದ ಮೈದಾನದಲ್ಲಿ ನಡೆಯಲಿದೆ.



ಸಿನಿಮಾ ವರದಿ: ಬಿ.ಜಿ.ರವಿಕುಮಾರ್



## ಟ್ರೇಲರ್ ನಲ್ಲಿ ಮಾವುತ ಮೋಡಿ



ನಿರ್ಮಾಪಕ ನಟ ಲಕ್ಷ್ಮೀಪತಿ ಬಾಲಾಜಿ ನಿರ್ಮಿಸಿ, ನಾಯಕನಾಗಿ ನಟಿಸಿರುವ ಎರಡನೇ ಚಿತ್ರ "ಮಾವುತ". ಇತ್ತೀಚಿಗೆ ಈ ಚಿತ್ರದ ಟ್ರೇಲರ್ ಬಿಡುಗಡೆ ಸಮಾರಂಭ ಅದ್ದೂರಿಯಾಗಿ ನೆರವೇರಿತು. ಶಂಕರ್ ಬಿ ಡಿ.ಸಿ.ಪಿ(ದೆಹಲಿ), ಬಿ.ಜೆ.ಪಿ ಮುಖಂಡರಾದ ಕವಿತಾ ಸಿಂಗ್, ನಿವೃತ್ತ ಪೊಲೀಸ್ ಅಧಿಕಾರಿ ನಂಜುಂಡಸ್ವಾಮಿ, ಸಮಾಜ ಸೇವಕರಾದ ಭಜರಂಗಿ ಉಮೇಶ್ ಮುಂತಾದವರು ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಟ್ರೇಲರ್ ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

"ಮಾವುತ", ಕಾಡಿನ ಕಥೆ. ಕಾಡಿನಲ್ಲಿ ನಡೆಯುವ ಕೆಲವು ಅಕ್ರಮಗಳನ್ನು ಕಂಡು ಹಿಡಿದು ಕಾಡನ್ನು ಉಳಿಸಿಕೊಳ್ಳುವ "ಮಾವುತ" ಹಾಗೂ ಆನೆಯ ಕಥೆಯೂ ಕೂಡ. ಲಕ್ಷ್ಮೀಪತಿ ಬಾಲಾಜಿ ಅವರು ಈ ಚಿತ್ರವನ್ನು ನಿರ್ಮಾಣ ಮಾಡುವುದರ ಜೊತೆಗೆ ನಾಯಕನಾಗಿಯೂ ನಟಿಸಿದ್ದಾರೆ. ಸಾಗರ್ ಎಂಬ ಆನೆ ಕೂಡ ಈ ಚಿತ್ರದ ಪ್ರಮುಖಪಾತ್ರದಲ್ಲಿ ನಟಿಸಿದೆ. ಚಿತ್ರತಂಡದ ಸಹಕಾರದಿಂದ ಚಿತ್ರ ಚೆನ್ನಾಗಿ ಬಂದಿದೆ. ಇಂದು ಟ್ರೇಲರ್ ಬಿಡುಗಡೆಯಾಗಿದೆ. ಸದ್ಯದಲ್ಲೇ ಚಿತ್ರ ತೆರೆಗೆ ಬರಲಿದೆ ಎಂದು ನಿರ್ದೇಶಕ ರವಿಶಂಕರ್ ನಾಗ್ ತಿಳಿಸಿದರು.

ಮಾವುತ" ಎರಡನೇ ಚಿತ್ರ. ಇದೊಂದು ಕಾಡಿನ ಕಥಾಹಂದರ ಹೊಂದಿರುವ ಚಿತ್ರ. ಕಾಡಿನಲ್ಲೇ ಬಹುತೇಕ ಚಿತ್ರೀಕರಣ ನಡೆದಿರುವ ಚಿತ್ರವೂ ಹೌದು.

ಮಾವುತ ಹಾಗೂ ಆನೆಯ ಬಾಂಧವ್ಯದ ಸನ್ನಿವೇಶಗಳೇ ಈ ಚಿತ್ರದ ಹೈಲೆಟ್. ಸಾಗರ್ ಎಂಬ ಆನೆ ಈ ಚಿತ್ರದಲ್ಲಿ ಅಮೋಘವಾಗಿ ಅಭಿನಯಿಸಿದೆ. ಬಹಳ ದಿನಗಳ ನಂತರ ಕನ್ನಡದಲ್ಲಿ ಆನೆ ಪೂರ್ಣಪ್ರಮಾಣದಲ್ಲಿ ನಟಿಸಿರುವ ಚಿತ್ರವೊಂದು ಬರುತ್ತಿದೆ. ನಾವು ಈ ಸಿನಿಮಾ ಮಾಡಲು ನಮಗೆ ಅನೇಕ ಬಾರಿ ಅಂಬಾರಿ ಹೊತ್ತು, ಈಗ ನಮ್ಮೊಡನೆ ಇರದ ಅರ್ಜುನನೇ ಸ್ಫೂರ್ತಿ. ನಮ್ಮ ಚಿತ್ರ ಅರ್ಜುನನಿಗೆ ಅರ್ಪಣೆ. ಈಗಾಗಲೇ ಅನಿಮಲ್ ಬೋರ್ಡ್ ಅನುಮತಿ ದೊರಕಿದೆ. ಸದ್ಯದಲ್ಲೇ ಚಿತ್ರ ತೆರೆಗೆ ಬರಲಿದೆ . ನಿಮ್ಮೆಲ್ಲರಿಗೂ ಚಿತ್ರ ಇಷ್ಟವಾಗುವ ಭರವಸೆ ಇದೆ ಎಂದರು ನಾಯಕ ಹಾಗೂ ನಿರ್ಮಾಪಕ ಲಕ್ಷ್ಮೀಪತಿ ಬಾಲಾಜಿ.

ಚಿತ್ರದಲ್ಲಿ ಐದು ಸಾಹಸ ಸನ್ನಿವೇಶಗಳಿದೆ. ಒಂದಕ್ಕಿಂತ ಒಂದು ಚೆನ್ನಾಗಿದೆ. ಸಾಹಸ ಸಂಯೋಜನೆಯ ಜೊತೆಗೆ ಪ್ರಮುಖಪಾತ್ರದಲ್ಲಿ ಅಭಿನಯ ಕೂಡ ಮಾಡಿದ್ದೇನೆ ಎಂದು ಥ್ರಿಲ್ಲರ್ ಮಂಜು ತಿಳಿಸಿದರು.

ನಾಯಕಿಯರಾದ ಮಹಾಲಕ್ಷ್ಮಿ, ದಿವ್ಯಶ್ರೀ, ನಟರಾದ ಲಯಕೋಕಿಲ, ಕೈಲಾಶ್ ಕುಟ್ಟಪ್ಪ, ಹಿನ್ನೆಲೆ ಸಂಗೀತ ನೀಡಿರುವ ರವಿವರ್ಮ ಹಾಗೂ ಸಿರಿ ಮ್ಯೂಸಿಕ್ ನ ಚಿಕ್ಕಣ್ಣ ಮುಂತಾದವರು "ಮಾವುತ" ಚಿತ್ರದ ಕುರಿತು ಮಾತನಾಡಿದರು.

## "ಗ್ರಾಮಾಯಣ"ದ ಬೆಂಕಿ ಹಾಡು ಅನಾವರಣ





ಲಹರಿ ಫಿಲಂಸ್ ನಿರ್ಮಾಣದ, ದೇವನೂರು ಚಂದ್ರು ನಿರ್ದೇಶನದ ಹಾಗೂ ವಿನಯ್ ರಾಜಕುಮಾರ್: ಮೇಘ ಶೆಟ್ಟಿ ನಾಯಕ ನಾಯಕಿಯಾಗಿ ಅಭಿನಯಿಸಿರುವ "ಗ್ರಾಮಾಯಣ" ಚಿತ್ರದ "ಬೆಂಕಿ" ಹಾಡನ್ನು ಶಿವರಾಜಕುಮಾರ್ ಅನಾವರಣ ಮಾಡಿದರು.

ಹಾಡು ತುಂಬಾ ಚೆನ್ನಾಗಿದೆ. ಚಿತ್ರ ಯಶಸ್ವಿಯಾಗಲೆಂದು ಶಿವಣ್ಣ ಹಾರೈಸಿದರು. ಗೀತಾ ಶಿವರಾಜಕುಮಾರ್ ಅವರು ಉಪಸ್ಥಿತರಿದ್ದರು. ಪೂರ್ಣಚಂದ್ರ ತೇಜಸ್ವಿ ಸಂಗೀತ ನೀಡಿರುವ ಈ ಹಾಡನ್ನು ಕಪಿಲ ಕಪಿಲನ್ ಹಾಗೂ ಐರಾ ಉಡುಪಿ ಹಾಡಿದ್ದಾರೆ. ಇದು ಶಿವರಾಜಕುಮಾರ್ ಅಭಿನಯಿಸಿದ್ದ "ಮನ ಮೆಚ್ಚಿದ ಹುಡುಗಿ" ಚಿತ್ರದ "ನಿನ್ನಾಣೆ ನಾನು ಬೆಂಕಿಯಲ್ಲೂ ತಂಪು ಕಂಡೇನು" ಹಾಡಿನ ರೀಮಿಕ್ಸ್ ಆಗಿದೆ. ಉಪೇಂದ್ರ ಕುಮಾರ್ ಸಂಗೀತ ಸಂಯೋಜಿಸಿದ್ದ ಈ ಹಾಡನ್ನು ಚಿ.ಉದಯಶಂಕರ್ ಬರೆದಿದ್ದರು. ಎಸ್.ಪಿ.ಬಿ ಹಾಗೂ ಎಸ್ ಜಾನಕಿ ಹಾಡಿದ್ದರು. ಈಗ ಇದೇ ಹಾಡನ್ನು "ಗ್ರಾಮಾಯಣ" ಚಿತ್ರದಲ್ಲಿ ಬಳಸಿಕೊಳ್ಳಲಾಗಿದೆ. ಹಾಡಿನ ಅನಾವರಣದ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

ಲಹರಿ ಸಂಸ್ಥೆಯ ಮನೋಹರ್ ನಾಯ್ಡು ಅವರ ಉಪಸ್ಥಿತಿಯಲ್ಲಿ ಮಾತನಾಡಿದ ನಿರ್ಮಾಪಕ ಲಹರಿ ವೇಲು, "ಗ್ರಾಮಾಯಣ" ನಮ್ಮ ಲಹರಿ ಸಂಸ್ಥೆ ನಿರ್ಮಾಣದ ಒಂಭತ್ತನೇ ಚಿತ್ರ. ದೇವನೂರು ಚಂದ್ರು ಒಂದೊಳ್ಳೆ ಗ್ರಾಮೀಣ ಸೊಗಡಿನ ಚಿತ್ರ ಮಾಡಿಕೊಂಡಿದ್ದಾರೆ. ವಿನಯ್ ರಾಜಕುಮಾರ್, ಮೇಘ ಶೆಟ್ಟಿ ಹಾಗೂ ಚಿತ್ರದಲ್ಲಿ ಅಭಿನಯಿಸಿರುವ ಎಲ್ಲಾ ಕಲಾವಿದರು ಚೆನ್ನಾಗಿ ಅಭಿನಯಿಸಿದ್ದಾರೆ. "ಮನ ಮೆಚ್ಚಿದ ಹುಡುಗಿ" ಚಿತ್ರದ ಮೂಲ ಹಾಡು ನಮ್ಮ ಲಹರಿ ಸಂಸ್ಥೆಯಿಂದ ಬಿಡುಗಡೆಯಾಗಿತ್ತು. ಈಗ ರೀಮಿಕ್ಸ್ ಹಾಡು ಕೂಡ ನಮ್ಮ ಸಂಸ್ಥೆಯಿಂದಲೇ ಬಿಡುಗಡೆಯಾಗುತ್ತಿದೆ. ಹಾಡು ಬಿಡುಗಡೆ ಮಾಡಿಕೊಟ್ಟ ಶಿವರಾಜಕುಮಾರ್ ಅವರಿಗೆ ಧನ್ಯವಾದ ಎಂದರು.

ಕಾರಣಾಂತರದಿಂದ ನಿಂತು ಹೋಗಿದ್ದ "ಗ್ರಾಮಾಯಣ" ವನ್ನು ನಿರ್ಮಾಣ ಮಾಡಿ ಫೆಬ್ರವರಿಯಲ್ಲಿ ಅದ್ದೂರಿ ಬಿಡುಗಡೆ ಮಾಡಲು ಮುಂದಾಗಿರುವ ನಿರ್ಮಾಣ ಸಂಸ್ಥೆಯಾದ ಲಹರಿ ಫಿಲಂಸ್ ಗೆ ಅನಂತ ಧನ್ಯವಾದ. ಕೆ.ಪಿ.ಶ್ರೀಕಾಂತ್ ಅವರಿಗೂ ಆಬಾರಿ. ಇನ್ನೂ ಇದೊಂದು ಪಕ್ಕಾ ಗ್ರಾಮೀಣ ಸೊಗಡಿನ ಸಿನಿಮಾ. ಈವರೆಗೂ ನೀವು ನೋಡಿರದ ವಿನಯ್ ರಾಜಕುಮಾರ್ ಅವರನ್ನು ಈ ಚಿತ್ರದಲ್ಲಿ ನೋಡಬಹುದು. ಮೇಘಶೆಟ್ಟಿ, ಅಚ್ಯುತಕುಮಾರ್, ಗೋಪಾಲಕೃಷ್ಣ ದೇಶಪಾಂಡೆ, ಅರುಣ್ ಸಾಗರ್, ಬಲ ರಾಜವಾಡಿ, ಅಪರ್ಣ, ಸೀತಾ ಕೋಟೆ ಹೀಗೆ ಅನುಭವಿ ಕಲಾವಿದರ ದೊಡ್ಡ ತಾರಾಬಳಗವೇ ಇರುವ ಈ ಚಿತ್ರದ ವಿಶೇಷ ಪಾತ್ರದಲ್ಲಿ ಲೂಸ್ ಮಾದ ಯೋಗಿ ಅಭಿನಯಿಸಿದ್ದಾರೆ. ಸಂತೋಷ್ ರೈ ಪಾತಾಜೆ ಅವರಂತೂ ನಿಗದಿತ ಸಮಯಕ್ಕೂ ಮುಂಚೆಯೇ ಚಿತ್ರೀಕರಣ ಮುಗಿಸಿಕೊಟ್ಟಿದ್ದಾರೆ.

## 'ವಿಕಲ್ಪ' ಟ್ರೇಲರ್ ಬಿಡುಗಡೆ ಚಿತ್ರ 30ಕ್ಕೆ



ಈಗಾಗಲೇ ತನ್ನ ಟೈಟಲ್, ಟೀಸರ್ ಮತ್ತು ಹಾಡುಗಳ ಮೂಲಕ ಚಂದನವನದಲ್ಲಿ ಒಂದಷ್ಟು ಸಿನಿಪ್ರಿಯರ ಮನ ಮತ್ತು ಗಮನ ಎರಡನ್ನೂ ಸೆಳೆದಿರುವ 'ವಿಕಲ್ಪ' ಚಿತ್ರದ ಟ್ರೇಲರ್ ಬಿಡುಗಡೆಯಾಗಿದೆ. 'ಪೋಸ್ಟ್ ಟ್ರಾಮಾಟಿಕ್ ಸ್ಟ್ರೆಸ್ ಡಿಸಾರ್ಡರ್' (ಪಿಟಿಎಸ್‌ಡಿ) ಎಂಬ ಮಾನಸಿಕ ವ್ಯಾಧಿಯ ಎಳೆಯನ್ನು ಆಧಾರಿಸಿ ತೆರೆಗೆ ಬರುತ್ತಿರುವ ಸೈಕಾಲಜಿಕಲ್-ಥ್ರಿಲ್ಲರ್ ಕಥಾಹಂದರದ ಚಿತ್ರ ಇದಾಗಿದ್ದು, 'ಸುರೂಸ್ ಟಾಕೀಸ್' ಸಂಸ್ಥೆಯ ಅಡಿಯಲ್ಲಿ ಶ್ರೀಮತಿ ಇಂದಿರಾ ಶಿವಸ್ವಾಮಿ 'ವಿಕಲ್ಪ' ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದಾರೆ. ಯುವ ಪ್ರತಿಭೆ ಪೃಥ್ವಿರಾಜ್ ಪಾಟೀಲ್, 'ವಿಕಲ್ಪ' ಚಿತ್ರಕ್ಕೆ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡುವುದರ ಜೊತೆಗೆ ತೆರೆಮೇಲೂ ಮುಖ್ಯಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಉಳಿದಂತೆ ನಾಗಶ್ರೀ ಹೆಬ್ಬಾರ್, ಹರಿಣಿ ಶ್ರೀಕಾಂತ್, ಸಂಧ್ಯಾ ವಿನಾಯಕ್, ಗಣಪತಿ ವಡ್ಡಿನಗದ್ದೆ, ಸ್ವರೂಪ್ ಬಚ್ಚ್, ಪೂಜಾ ಬಚ್ಚ್, ಜಯಂತ್ ಡೇವಿಡ್, ಡಾ. ಪ್ರಕೃತಿ, ಮಾಸ್ಟರ್ ಆಯುಷ್ ಸಂತೋಷ್, ಗಿರೀಶ್ ಹೆಗಡೆ ಮುಂತಾದವರು ಚಿತ್ರದ ಇತರ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ. ಇತ್ತೀಚೆಗೆ ನಡೆದ ಸಮಾರಂಭದಲ್ಲಿ ಕನ್ನಡ ಚಿತ್ರರಂಗದ ನಿರ್ದೇಶಕ ಜಯತೀರ್ಥ 'ವಿಕಲ್ಪ' ಚಿತ್ರದ ಟ್ರೇಲರ್ ಬಿಡುಗಡೆ ಮಾಡಿ ಚಿತ್ರತಂಡಕ್ಕೆ ಶುಭಕೋರಿದರು.

ಇದೇ ವೇಳೆ ಮಾತನಾಡಿದ ನಿರ್ದೇಶಕ ಜಯತೀರ್ಥ, 'ಕನ್ನಡ ಚಿತ್ರರಂಗಕ್ಕೆ ಹೊಸಪ್ರತಿಭೆಗಳು ಬರುತ್ತಿರುವುದು ನಿಜಕ್ಕೂ ಖುಷಿಯ ವಿಷಯ. ಹೊಸಬರ ಮೂಲಕ ಹೊಸ ಹೊಸ ಕಲ್ಪನೆ, ಆಲೋಚನೆಗಳು ಸಿನಿಮಾವಾಗಿ ತೆರೆಮೇಲೆ ಅನಾವರಣವಾಗುತ್ತದೆ. ಹೊಸಬರು ಯಾವಾಗಲೂ ಚಿತ್ರರಂಗದ ಜೀವಂತಿಕೆಯನ್ನು ಹಿಡಿದಿಡುತ್ತಾರೆ. 'ವಿಕಲ್ಪ' ಚಿತ್ರದ ಕಲಾವಿದರು, ತಂತ್ರಜ್ಞರು ಯಾರೂ ನನಗೆ ಮೊದಲಿನಿಂದ ಪರಿಚಿತರಲ್ಲ. ಕೆಲ ದಿನಗಳ ಹಿಂದಷ್ಟೇ ಫೋನಿನಲ್ಲಿ ಮಾತನಾಡಿ ಪರಿಚಯವಾದವರು. ಆದರೆ, ಒಳ್ಳೆಯ ಕಂಟೆಂಟ್ ಆಧಾರಿತ ಸಿನಿಮಾ ಮಾಡಬೇಕೆಂಬ ಅವರ ಪ್ರಾಮಾಣಿಕ ಪ್ರಯತ್ನ ಇಷ್ಟವಾಗಿದ್ದರಿಂದ, ನಾನು 'ವಿಕಲ್ಪ' ಚಿತ್ರದ ಟ್ರೇಲರ್ ಬಿಡುಗಡೆ ಮಾಡಲು ಒಪ್ಪಿಕೊಂಡು ಬಂದಿದ್ದೇನೆ. ಸಿನಿಮಾದ ಕಥಾಹಂದರ, ಮೇಕಿಂಗ್, ಟೀಸರ್, ಹಾಡುಗಳು ಎಲ್ಲವೂ ಚಿತ್ರದ ಬಗ್ಗೆ ಒಂದಷ್ಟು ಭರವಸೆ ಮೂಡಿಸುವಂತಿದೆ.



ಮರಳಿ ಮನಸಾಗಿದೆ ಚಿತ್ರದಲ್ಲಿ ಮಾನಸಿ ಸುಧೀರ್

## ಯುವ ಪ್ರತಿಭೆಗಳ "ಅಮೃತ ಅಂಜನ್" ಚಿತ್ರದ ಭಾವನಾತ್ಮಕ ಹಾಡು ಬಿಡುಗಡೆ



ಜೀವನದಲ್ಲಿ ಆಸಕ್ತಿ , ಗುರಿ , ಛಲ ಇದ್ದರೆ ಖಂಡಿತ ದಡ ಸೇರಬಹುದು ಎಂಬ ನಂಬಿಕೆಯೊಂದಿಗೆ ಯುವ ಪ್ರತಿಭೆಗಳ ಸೇರಿಕೊಂಡು ಅಮೃತಾಂಜನ್ ಎಂಬ ಶಾರ್ಟ್ ಫಿಲಂ ಮಾಡಿ ಎಲ್ಲರ ಗಮನ ಸೆಳೆದಿದ್ದರು , ಈಗ ಇದೇ ತಂಡ ಅಮೃತ ಅಂಜನ್ ಎನ್ನುವ ಸಿನಿಮಾ ಮೂಲಕ ಬೆಳ್ಳಿ ಪರದೆಗೆ ಬರಲು ಸಜ್ಜಾಗಿದ್ದಾರೆ. ಈ ಚಿತ್ರದ ಒಂದು ಮನಮುಟ್ಟುವ ಭಾವನಾತ್ಮಕ ಹಾಡೊಂದು ಬಿಡುಗಡೆ ಮಾಡಲು ಜಿಟಿ ಮಾಲ್ ನಲ್ಲಿರುವ ಉತ್ಸವ್ ಲಗೇಸಿಯಲ್ಲಿ ಆಯೋಜನೆ ಮಾಡುವುದರ ಜೊತೆಗೆ ಮಾಧ್ಯಮದೊಂದಿಗೆ ಚಿತ್ರದ ಕುರಿತು ಮಾಹಿತಿಯನ್ನು ಹಂಚಿಕೊಳ್ಳಲು ತಂಡ ಸಿದ್ಧತೆಯನ್ನು ನಡೆಸಿತು. ಅದೇ ರೀತಿ ಹಾಡು ಬಿಡುಗಡೆ ನಂತರ ಚಿತ್ರತಂಡ ಪತ್ರಿಕಾಗೋಷ್ಠಿಗೆ ಹಾಜರಾದ್ದರು.

ಇನ್ನು ಮೊದಲಿಗೆ ಈ ಚಿತ್ರದ ನಿರ್ದೇಶಕ ಜ್ಯೋತಿ ರಾವ್ ಮೋಹಿತ್ ಮಾತನಾಡುತ್ತಾ ನಾನು ಈ ಹಿಂದೆ ಸೋಡಾ ಬುಡ್ಡಿ ಎಂಬ ಚಿತ್ರವನ್ನ ಮಾಡಿದ್ದೆ , ಇದು ನನ್ನ ಎರಡನೇ ಚಿತ್ರ. ಈ ಸಿನಿಮಾ ಆರಂಭಿಸುವುದಕ್ಕೆ ನನ್ನ ಅಮೃತಾಂಜನ್ ಕಿರುಚಿತ್ರವೇ ಕಾರಣ. ಈ ಚಿತ್ರದ ಟೈಟಲ್ ವಿಚಾರವಾಗಿ ಬಹಳಷ್ಟು ಸಮಸ್ಯೆಗಳನ್ನು ಎದುರಿಸಿದ್ವಿ , ಹಾಗಾಗಿ ಅಮೃತ ಅಂಜನ್ ಎಂಬ ಹೆಸರಿನೊಂದಿಗೆ ಚಿತ್ರ ನಿರ್ಮಾಣ ಮಾಡಿದ್ದು, ಇದೊಂದು ಕಂಪ್ಲೀಟ್ ಕಾಮಿಡಿ ಎಂಟರ್ಟೈನ್ಮೆಂಟ್ ಚಿತ್ರವಾಗಿದ್ದು 80 ಪರ್ಸೆಂಟ್ ಹಾಸ್ಯ , 20 ಪರ್ಸೆಂಟ್ ಸೆಂಟಿಮೆಂಟ್ ಅಂಶಗಳ ಒಳಗೊಂಡಿದ್ದು , ಸಂಪೂರ್ಣ ಮನೋರಂಜನೆ ಈ ಚಿತ್ರ ನೀಡಲಿದೆ. ನಮ್ಮ ಚಿತ್ರದಲ್ಲಿ ಒಟ್ಟು ಎರಡುವರೆ ಹಾಡು ಇದೆ ಎನ್ನುತ್ತಾ , ಇಂದು ಬಿಡುಗಡೆ ಮಾಡಿರುವ ಭಾವನಾತ್ಮಕ ಹಾಡಿಗೆ ಮುಖ್ಯ ಕಾರಣವೇ ನಮ್ಮ ತಾಯಿ ತಂದೆ. ನಾನು ಬಾಲ್ಯದಲ್ಲಿ ಕಂಡಂತಹ ಒಂದು ಸತ್ಯದ ಅಂಶ. ನಮ್ಮ ತಾಯಿಗೆ ತಂದೆ ತುಂಬಾ ಟಾರ್ಚರ್ ಕೊಡ್ತಾ ಇದ್ರು , ಆ ಪ್ರೇರಣೆಯಿಂದ ಈ ಹಾಡು ಮಾಡಿದ್ದೇನೆ. ನೈಜಕ್ಕೆ ಪೂರಕವಾಗಿ ಬರಬೇಕೆಂದು ಬಹಳಷ್ಟು ಶ್ರಮಪಟ್ಟು ಕೆಲಸ ಮಾಡಿದ್ದೇವೆ. ಈ ಹಾಡಿನಲ್ಲಿ ನಟಿಸಿರುವ ಹಿರಿಯ ನಟ ನವೀನ್. ಡಿ. ಪಡೀಲ್ ತಂದೆಯಾಗಿ ಹಾಗೂ ಮಧುಮತಿ ತಾಯಿಯ ಪಾತ್ರವನ್ನು ಬಹಳ ಅದ್ಭುತವಾಗಿ ಅಭಿನಯಿಸಿದ್ದಾರೆ. ಈ ಹಾಡನ್ನು ವೆಂಕಟೇಶ್ ಕುಲಕರ್ಣಿ ಬರೆದಿದ್ದಾರೆ. ನಮ್ಮ ಸಿನಿಮಾದಲ್ಲಿ ಎಲ್ಲಾ ರೀತಿಯ ಅಂಶಗಳ ಜೊತೆ ಹೊಸ ಕಂಟೆಂಟ್ ಒಳಗೊಂಡಿದೆ.



## ತಿಕ್ಲುರಾಮ ಶೀರ್ಷಿಕೆ ಮತ್ತು ಪೋಸ್ಟರ್ ಬಿಡುಗಡೆ

ಹೆಸರಿನಲ್ಲೆ ನಗು ತರಿಸುವ ?ತಿಕ್ಲು ರಾಮ? ಚಿತ್ರದ ಶೀರ್ಷಿಕೆ ಮತ್ತು ಪೋಸ್ಟರ್‌ನ್ನು ಆ ದಿನಗಳು ಚೇತನ್ ಸಂಕ್ರಾಂತಿ ಹಬ್ಬದ ಶುಭದಿನದಂದು ಎಂಎಂಬಿ ಲೆಗಸಿದಲ್ಲಿ ತುಂಬಿದ ಆಹ್ವಾನಿತರ ಮುಂದೆ ಅನಾವರಣಗೊಳಿಸಿದರು. ಕರಿಷ್ಮ-ಶ್ರಾವ್ಯ ಕಂಬೈನ್ಸ್ ಬ್ಯಾನರ್ ಅಡಿಯಲ್ಲಿ ಶೃತಿ.ಜಿ.ಬಿ ಮತ್ತು ಕೋಮಲ ನಟರಾಜು ಜಂಟಿಯಾಗಿ ನಿರ್ಮಾಣ ಮಾಡುತ್ತಿದ್ದಾರೆ. ಮಂಜುಕವಿ ಚಿತ್ರಕಥೆ ಬರೆದು ಆಕ್ಷನ್ ಕಟ್ ಹೇಳುತ್ತಿದ್ದಾರೆ. ?ಇದೇ ಕಾಡಿನಲ್ಲಿ ನಾನು ನಿನ್ನ ಉಸಿರು ನಿಲ್ಲಸದೆ ಹೋದರೆ ನನ್ನ ಹೆಸರು ಅಂತ ಗರ್ಜಿಸುತ್ತಾ ನಗುವ ಸುಚೇಂದ್ರ ಪ್ರಸಾದ್ ಹಿನ್ನಲೆ ಧ್ವನಿಯ ಒಂದು ನಿಮಿಷದ ಟೈಟಲ್ ಟೀಸರ್ ಗಮನ ಸೆಳೆಯಿತು. ಇದೇ ಸಂದರ್ಭದಲ್ಲಿ ಡಾ.ರಾಜ್‌ಕುಮಾರ್ ಮೊಮ್ಮಗ ಷಣ್ಮುಗ ಗೋವಿಂದರಾಜ್ ಮತ್ತು ?ಬಡವರ ಮಕ್ಕಳು ಬೆಳೀಬೇಕು ಕಂಡ್ರಯ್ಯ? ಚಿತ್ರದ ನಿರ್ಮಾಪಕ ಸಿ.ಎಸ್.ವೆಂಕಟೇಶ್ ಉಪಸ್ತಿತರಿದ್ದರು.

ತಾರಾಗಣದಲ್ಲಿ ಡಾ.ರಾಜ್‌ವೀರ್, ಸಂಗೀತ, ಮಿತ್ರ, ಭಾಗ್ಯಶ್ರೀ, ಶೃತಿ.ಬಿ, ಗೋವಿಂದೇಗೌಡ, ವಿನೋದ್ ಗೊಬ್ಬರಗಾಲ, ಸುಚೇಂದ್ರ ಪ್ರಸಾದ್, ಮಂಡ್ಯ ಸಿದ್ದು, ಪವಿತ್ರ ಇನ್ನು ಅನೇಕ ಕಲಾವಿದರು ನಟಿಸುತ್ತಿದ್ದಾರೆ. ಹಿನ್ನಲೆ ಸಂಗೀತ ವಿನು ಮನಸು, ಛಾಯಾಗ್ರಹಣ ರಾಜ್ ಕಡೂರು-ನಾಗರಾಜಮೂರ್ತಿ, ಸಂಕಲನ ವೆಂಕಿ.ಯುಡಿವಿ, ಸಾಹಸ ಅಲ್ಟಿಮೇಟ್ ಶಿವು, ನೃತ್ಯ ಜಗ್ಗು ಅವರದಾಗಿದೆ. ಅಂದಹಾಗೆ ಮೋಷನ್ ಪೋಸ್ಟರ್ ಎಂ.ಕೆ.ಆಡಿಯೋದಲ್ಲಿ ರಿಲೀಸ್ ಆಗಿದೆ. ನಂತರ ಮಾತನಾಡಿದ ಚೇತನ್, ಸಂಪೂರ್ಣ ಕಲಾವಿದರು, ಸಾಹಿತ್ಯ ಒಲವು ಇರುವ ಮಂಜುಕವಿ ಅವರಿಂದ ಮಾತ್ರ, ಇಂತಹ ಚಿತ್ರ ಮಾಡಲು ಸಾಧ್ಯ. ಚಿತ್ರರಂಗ ಅಭಿವೃದ್ದಿಗೊಳ್ಳಬೇಕಾದರೆ ಕ್ರಿಯಾಶೀಲತೆ ಇರುವ ತಂಡದಿಂದ ಆಗುತ್ತದೆ. ಅಂತಹುದೆ ಟೀಂನ್ನು ಅವರು ಕಟ್ಟಿಕೊಂಡಿದ್ದಾರೆ ತಿಕ್ಲು ರಾಮ ಹಾಸ್ಯಾಸ್ಪದ ಸಿನಿಮಾ ಅನಿಸಿದರೂ, ಸಮಾಜಕ್ಕೆ ಸಂದೇಶ, ಕುಟುಂಬ ಹಾಗೂ ಭಾವನಾತ್ಮಕ ವಿಷಯಗಳನ್ನು ಹೇಳ ಹೊರಟಿದ್ದಾರೆ. ಇವುಗಳು ಜನರ ಮನಸ್ಸಿಗೆ ನಾಟಲಿ ಎಂದರು.

ನಿರ್ದೇಶಕರು ಹೇಳುವಂತೆ, ಸಮಾಜಕ್ಕೆ ಬೆನ್ನಲುಬಾಗಿ ಇರ?ತಾರೆ ಎನ್ನುವುದಕ್ಕೆ ಸಾಕ್ಷಿ ಚೇತನ್ ಸರ್. ನಾಯಕ ಡಾ.ರಾಜ್ ವೀರ್ ಕಥೆಗೆ ಪೋಷಣೆ ಮಾಡುತ್ತಿದ್ದೇನೆ. ಮೊದಲರ್ಧ ಹಳ್ಳಿ ಸೊಗಡು ಇರಲಿದ್ದು, ದ್ವಿತೀಯಾರ್ಧ ನೋಡುಗರನ್ನು ಬೇರೆ ಲೋಕಕ್ಕೆ ಕರೆದುಕೊಂಡು ಹೋಗುತ್ತದೆ. ಎಲ್ಲೆಲ್ಲಿ ಪ್ರಾಣಿಗಳ ಅವಶ್ಯಕತೆ ಇದೆಯೋ, ಅದನ್ನು ಉತ್ತಮವಾದ ತಂತ್ರಜ್ಞಾನ ಬಳಸಿಕೊಂಡು, ನಿಜವಾದ ಪ್ರಾಣಿಗಳನ್ನೇ ನೋಡ್ತಿದಂತೆ ಭಾಸವಾಗುವ ದೃಶ್ಯಗಳು ಇರಲಿದೆ. ಸತ್ಯ ಘಟನೆಯಲ್ಲಿ ಆತ ಶ್ರೀರಾಮ. ಮುಂದೆ ತಿಕ್ಲು ರಾಮ ಆಗುವುದಕ್ಕೆ ಕಾರಣ ಏನು ಎಂಬುದಕ್ಕೆ ಉತ್ತರ ಚಿತ್ರಮಂದಿರಕ್ಕೆ ಬರಬೇಕು. ಹಾಸನ, ಫಲವತ್ತಾದ ಹಸಿರು ಇರುವ ಸ್ಥಳಗಳಲ್ಲಿ ಚಿತ್ರೀಕರಣ ನಡೆಸಲು ಯೋಜನೆ ಹಾಕಲಾಗಿದೆ. ಇತಿಹಾಸದಲ್ಲೇ ಮೊಟ್ಟ ಮೊದಲಬಾರಿಗೆ ತಿಕ್ಲು ರಾಮ ಪ್ರಾಣಿಗಳ ಜತೆ ಇರುವ ಒಡನಾಟವನ್ನು ಪ್ರೇಕ್ಷಕರ ಗಮನ ಸೆಳಯುವಂತ ಬಿಂಬಿಸಲಾಗುತ್ತಿದೆ. ಮಕ್ಕಳಿಂದ ವೃದ್ದರವರೆಗೂ ನೋಡುವ ಕೌಟಂಬಿಕ ಚಿತ್ರ ಎಂದು ಮಂಜುಕವಿ ಮಾಹಿತಿ ನೀಡಿದರು.

## 'ಸೀಟ್ ಎಡ್ಜ್' ಚಿತ್ರದ ಟ್ರೇಲರ್ ಬಿಡುಗಡೆ



'ಲವ್ ಯು ಮುದ್ದು' ಚಿತ್ರದ ನಂತರ ಯುವನಟ ಸಿದ್ದು ಮೂಲಿಮನಿ ನಾಯಕ ನಟನಾಗಿ ಅಭಿನಯಿಸುತ್ತಿರುವ ಹೊಸಚಿತ್ರ 'ಸೀಟ್ ಎಡ್ಜ್' ತೆರೆಗೆ ಬರಲು ತಯಾರಾಗಿದೆ. ಇದೇ 30ಕ್ಕೆ 'ಸೀಟ್ ಎಡ್ಜ್' ಚಿತ್ರ ತೆರೆಗೆ ಬರಲಿದೆ.

ಇದೀಗ ಚಿತ್ರದ ಟ್ರೇಲರ್ ಬಿಡುಗಡೆ ಮಾಡಿದೆ.

ಇನ್ನು 'ಸೀಟ್ ಎಡ್ಜ್' ಚಿತ್ರ ವ್ಲಾಗರ್ ಹುಡುಗನೊಬ್ಬನ ಘೋಸ್ಟ್ ಹಂಟಿಂಗ್ ಕುರಿತಾದ ಕಥಾಹಂದರವನ್ನು ಹೊಂದಿರುವ ಚಿತ್ರವಾಗಿದೆ. ಹೀಗಾಗಿ 'ಸೀಟ್ ಎಡ್ಜ್' ಚಿತ್ರದ ಟ್ರೇಲರ್ ಅನ್ನು ಕನ್ನಡದ ಪ್ರಮುಖ ವ್ಲಾಗರ್ ಗಳ ಕೈಯಿಂದಲೇ ಚಿತ್ರ ತಂಡ ಬಿಡುಗಡೆ ಮಾಡಿಸಿದೆ.

ಡಾರ್ಕ್ ಕಾಮಿಡಿಯ ಜೊತೆಗೆ ಹಾರರ್-ಥ್ರಿಲ್ಲರ್ ಶೈಲಿಯಲ್ಲಿ ಮೂಡಿಬರುತ್ತಿರುವ 'ಸೀಟ್ ಎಡ್ಜ್' ಸಿನಿಮಾದಲ್ಲಿ ನಾಯಕ ಸಿದ್ದು ಮೂಲಿಮನಿ ಅವರಿಗೆ ರವೀಕ್ಷಾ ಶೆಟ್ಟಿ ನಾಯಕಿಯಾಗಿ ಕಾಣಿಸಿಕೊಂಡಿದ್ದಾರೆ. ಉಳಿದಂತೆ, ?ರಘು ರಾಮನಕೊಪ್ಪ, ಗಿರೀಶ್ ಶಿವಣ್ಣ, ಮಿಮಿಕ್ರಿ ಗೋಪಿ, ಲಕ್ಷ್ಮಿ ಸಿದ್ದಯ್ಯ, ಕಿರಣ್, ಪುನೀತ್ ಬಾಬು, ತೇಜು ಪೊನ್ನಪ್ಪ, ಮನಮೋಹನ್ ರೈ ಮೊದಲಾದವರು ಚಿತ್ರದ ಇತರ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ. ಕನ್ನಡದಲ್ಲಿ ಈ ಹಿಂದೆ ತೆರೆಗೆ ಬಂದಿದ್ದ 'ಕೆಮಿಸ್ಟ್ರೀ ಆಫ್ ಕರಿಯಪ್ಪ' ಹಾಗೂ 'ಕ್ರಿಟಿಕಲ್ ಕೀರ್ತನೆಗಳು' ಮೊದಲಾದ ಚಿತ್ರಗಳಲ್ಲಿ ಸಹ ನಿರ್ದೇಶಕರಾಗಿ ಕೆಲಸ ಮಾಡಿದ ಅನುಭವವಿರುವ ಚೇತನ್ ಶೆಟ್ಟಿ 'ಸೀಟ್ ಎಡ್ಜ್' ಸಿನಿಮಾಕ್ಕೆ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. 'ಎನ್. ಆರ್. ಸಿನಿಮಾ ಪ್ರೊಡಕ್ಷನ್ಸ್' ಬ್ಯಾನರಿನಲ್ಲಿ ಗಿರಿಧರ ಟಿ. ವಸಂತಪುರ ಈ ಚಿತ್ರಕ್ಕೆ ಬಂಡವಾಳ ಹೂಡಿ ನಿರ್ಮಾಣ ಮಾಡುತ್ತಿದ್ದಾರೆ.

'ಸೀಡ್ ಎಡ್ಜ್' ಸಿನಿಮಾದ 'ವ್ಲಾಗ್-2' ಹೆಸರಿನ ಟ್ರೇಲರ್ ಬಿಡುಗಡೆ ಮಾಡಿ ಮಾತನಾಡಿದ ಚಿತ್ರತಂಡ, 'ಸೀಟ್ ಎಡ್ಜ್'ನಲ್ಲಿರುವ ವಿಶೇಷತೆಗಳ ಬಗ್ಗೆ ಒಂದಷ್ಟು ಮಾಹಿತಿಯನ್ನು ಹಂಚಿಕೊಂಡಿತು.

ಮೊದಲಿಗೆ ಮಾತನಾಡಿದ 'ಸೀಟ್ ಎಡ್ಜ್' ಚಿತ್ರದ ನಾಯಕ ನಟ ಸಿದ್ದು ಮೂಲಿಮನಿ, 'ಇದೊಂದು ಔಟ್ ಅಂಡ್ ಔಟ್ ಸಸ್ಪೆನ್ಸ್-ಥ್ರಿಲ್ಲರ್ ಶೈಲಿಯಲ್ಲಿ ಮೂಡಿಬಂದಿರುವ ಸಿನಿಮಾ. ಈ ಸಿನಿಮಾದಲ್ಲಿ ಮೊದಲ ಬಾರಿಗೆ ನಾನೊಬ್ಬ ಯು-ಟ್ಯೂಬ್ ವ್ಲಾಗರ್ ಆಗಿ ಕಾಣಿಸಿಕೊಂಡಿದ್ದೇನೆ. ಯಾರೂ ಹೋಗದ ಭಯಾನಕ್ಕ ಜಾಗವನ್ನು ಪ್ರೇಕ್ಷಕರಿಗೆ ಪರಿಚಯಿಸಬೇಕು ಎಂದು ಹಠಕ್ಕೆ ಬಿದ್ದ ನಾನು, ಘೋಸ್ಟ್ ಟೌನ್ ಗೆ ಹೋಗಿ ಘೋಸ್ಟ್ ಹಂಟಿಂಗ್ ವೀಡಿಯೋ ಮಾಡಲು ನಿರ್ಧರಿಸುತ್ತೇನೆ. ಕೊನೆಗೆ ನಾನು ಅಂದುಕೊಂಡಂತೆ ಘೋಸ್ಟ್ ಹಂಟಿಂಗ್ ವಿಡಿಯೋ ಮಾಡಿ ಆಡಿಯನ್ಸ್‌ಗೆ ತೋರಿಸುತ್ತೇನಾ..? ಇಲ್ಲಿವಾ..? ಈ ಘೋಸ್ಟ್ ಹಂಟಿಂಗ್ ಅನ್ನೋದು ಹೇಗಿರುತ್ತದೆ ಎಂಬುದೇ ನನ್ನ ಪಾತ್ರ' ಎಂದು ತಮ್ಮ ಪಾತ್ರ ಪರಿಚಯ ಮಾಡಿಕೊಟ್ಟರು.

ನಾಯಕಿ ರವೀಕ್ಷಾ ಶೆಟ್ಟಿ ಮಾತನಾಡಿ, 'ನಾನು ಈ ಸಿನಿಮಾದಲ್ಲಿ ಮಧ್ಯಮ ವರ್ಗದ ಕಾಲೇಜ್ ಹುಡುಗಿಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದೇನೆ. ಘೋಸ್ಟ್ ಹಂಟಿಂಗ್‌ಗೆ ಹೋಗುವ ಯು-ಟ್ಯೂಬರ್ ಜೊತೆಗೆ ನಾನು ಕೂಡ ತೊಂದರೆಗೆ ಸಿಲುಕಿಕೊಳ್ಳುತ್ತೇನೆ. ಎರಡು ಶೇಡ್‌ಗಳಿರುವಂಥ ಪಾತ್ರ ಈ ಸಿನಿಮಾದಲ್ಲಿ ಸಿಕ್ಕಿದೆ. ಇಡೀ ಸಿನಿಮಾದ ನನಗೆ ಸಾಕಷ್ಟು ವಿಷಯಗಳನ್ನು ಕಲಿಸಿದೆ. ಒಳ್ಳೆಯ ಅನುಭವಗಳನ್ನು ಕೊಟ್ಟಿದೆ. ಒಳ್ಳೆಯ ಕಥೆ, ಹಾಡು, ಡ್ಯಾನ್ಸ್, ಕಾಮಿಡಿ, ಸೆಂಟಿಮೆಂಟ್, ಸಸ್ಪೆನ್ಸ್-ಥ್ರಿಲ್ಲರ್ ಹೀಗೆ ಎಲ್ಲಾ ಥರದ ಅಂಶಗಳೂ ಈ ಸಿನಿಮಾದಲ್ಲಿದೆ. ಖಂಡಿತವಾಗಿಯೂ 'ಸೀಟ್ ಎಡ್ಜ್' ಆಡಿಯನ್ಸ್‌ನ 'ಸೀಟ್ ಎಡ್ಜ್' ನಲ್ಲಿ ಕೂರಿಸುವಂಥ ಸಿನಿಮಾವಾಗಲಿದೆ' ಎಂಬ ಭರವಸೆ ವ್ಯಕ್ತಪಡಿಸಿದರು.

ನಿರ್ದೇಶಕ ಚೇತನ್ ಶೆಟ್ಟಿ ಮಾತನಾಡಿ, 'ಇತ್ತೀಚಿನ ದಿನಗಳಲ್ಲಿ ಯು-ಟ್ಯೂಬ್ ಮತ್ತು ಸೋಶಿಯಲ್ ಮೀಡಿಯಾಗಳಲ್ಲಿ ಅತಿಹೆಚ್ಚು ವೀವ್ಸ್ ಪಡೆಯಲು, ಜನಪ್ರಿಯರಾಗಲು ಯು-ಟ್ಯೂಬರ್ಸ್ ಮತ್ತು ವ್ಲಾಗರ್ಸ್ ಏನೇನು ಸಾಹಸಗಳನ್ನು ಮಾಡುತ್ತಾರೆ ಎಂಬ ಎಳೆಯನ್ನು ಇಟ್ಟುಕೊಂಡೆ ಈ ಸಿನಿಮಾ ಮಾಡಿದ್ದೇವೆ. ಇದು ಎಲ್ಲಾ ಥರದ ಆಡಿಯನ್ಸ್‌ಗೂ ಕನೆಕ್ಟ್ ಆಗುವಂಥ ಸಿನಿಮಾ. ನಮಗೆ ಗೊತ್ತಿಲ್ಲದ ವಿಷಯದಲ್ಲಿ ದುಸ್ಸಾಹಸಕ್ಕೆ ಕೈಹಾಕಿದರೆ, ಏನೇನು ಆಗಬಹುದು ಎಂಬುದನ್ನು ಈ ಸಿನಿಮಾದಲ್ಲಿ ಹೇಳಿದ್ದೇವೆ. ಡಾರ್ಕ್ ಕಾಮಿಡಿಯ ಜೊತೆಗೆ ಸಸ್ಪೆನ್ಸ್-ಥ್ರಿಲ್ಲರ್ ಶೈಲಿಯಲ್ಲಿ ಸಿನಿಮಾ ಮೂಡಿಬಂದಿದೆ. 'ಸೀಟ್ ಎಡ್ಜ್' ನಲ್ಲಿ ಕಂಪ್ಲೀಟ್ ಎಂಟರ್‌ಟೈನ್ಮೆಂಟ್ ಸಿಗೋದು ಗ್ಯಾರೆಂಟಿ' ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ನಿರ್ಮಾಪಕ ಗಿರಿಧರ ಟಿ. ವಸಂತಪುರ ಮಾತನಾಡಿ, 'ಎಲ್ಲಾ ಕಲಾವಿದರು ಮತ್ತು ತಂತ್ರಜ್ಞರ ಸಹಕಾರದಿಂದ, ನಾವು ಅಂದುಕೊಂಡ ರೀತಿಯಲ್ಲಿ ಸಿನಿಮಾ ತುಂಬ ಚೆನ್ನಾಗಿ ಮೂಡಿಬರುತ್ತಿದೆ. ಚಿತ್ರದಲ್ಲಿ ಸಿ. ಜಿ, ಗ್ರಾಫಿಕ್ಸ್ ಮತ್ತಿತರ ತಾಂತ್ರಿಕ ಕೆಲಸಗಳಿಗೆ ಹೆಚ್ಚು ಮಹತ್ವ ನೀಡಲಾಗಿದೆ. ಇದೇ ಜನವರಿ 30ಕ್ಕೆ ಸಿನಿಮಾ ಬಿಡುಗಡೆ ಆಗುತ್ತಿದೆ. ಎಲ್ಲಾ ಥರದ ಪ್ರೇಕ್ಷಕರಿಗೂ ಇಷ್ಟವಾಗುವಂಥ, ಮನೆಮಂದಿ ಒಟ್ಟಾಗಿ ಕೂತು ನೋಡುವಂಥ ಸಿನಿಮಾ ಮಾಡಿದ್ದೇವೆ' ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಹಾಜರಿದ್ದ ನಟರಾದ ರಘು ರಾಮನಕೊಪ್ಪ, ಗಿರೀಶ್ ಶಿವಣ್ಣ, ಸಂಗೀತ ನಿರ್ದೇಶಕ ಆಕಾಶ್ ಪರ್ವ, ಛಾಯಾಗ್ರಹಕ ದೀಪಕ್ ಕುಮಾರ್ ಜೆ. ಕೆ ಮೊದಲಾದವರು 'ಸೀಟ್ ಎಡ್ಜ್' ಚಿತ್ರದ ಬಗ್ಗೆ ತಮ್ಮ ಅನುಭವಗಳನ್ನು ಹಂಚಿಕೊಂಡರು. ಬೆಂಗಳೂರು, ಮೈಸೂರು, ಶಿವಮೊಗ್ಗ, ಚಿಕ್ಕಮಗಳೂರು ಸುತ್ತಮುತ್ತ ಸುಮಾರು 45 ದಿನಗಳ ಕಾಲ 45 'ಸೀಟ್ ಎಡ್ಜ್' ಚಿತ್ರದ ಚಿತ್ರೀಕರಣ ನಡೆಸಲಾಗಿದೆ. ಅರ್ಮನ್ ಮಲ್ಲಿಕ್, ಟಿಪ್ಪು ಮೊದಲಾದ ಗಾಯಕರು 'ಸೀಟ್ ಎಡ್ಜ್' ಚಿತ್ರದ ಹಾಡುಗಳಿಗೆ ಧ್ವನಿಯಾಗಿದ್ದಾರೆ.

**- 'ಸೀಟ್ ಎಡ್ಜ್' ಚಿತ್ರದ ಕಥಾಹಂದರ -**

ಚಿತ್ರದ ನಾಯಕ ಯೂ-ಟ್ಯೂಬ್ ಬ್ಲಾಗರ್ ಆಗಿದ್ದು ಏನಾದರೂ ಸಾಧನೆ ಮಾಡಬೇಕೆಂಬ ಪ್ರಯತ್ನದಲ್ಲಿರುತ್ತಾನೆ ಆದರೆ ತಾನು ಮಾಡುತ್ತಿರುವ ವಿಡಿಯೋಗಳು ಟ್ರೋಲ್ ಪೇಜ್ಗಳಿಗೆ ಆಹಾರವಾಗಿ ನಗೆಪಾಟಲಿಗೆ ಗುರಿ ಆಗುತ್ತಾನೆ. ಈ ಮಧ್ಯೆ ಒಂದು ಹುಡುಗಿಯ ಜೊತೆ ಲವ್ ಆಗುತ್ತೆ. ನಾಯಕ ಮಾಡಿದ ಒಂದು ತಪ್ಪಿನಿಂದ ಲವ್ ಬ್ರೇಕಪ್ ಆಗುತ್ತೆ.ಒಂದು ಕಡೆ ತಾನು ಪ್ರೀತ್ಸಿದ ಹುಡುಗಿಯನ್ನು ಮರಳಿ ಪಡೆಯಬೇಕು, ಮತ್ತೊಂದು ಕಡೆ ಯೂ-ಟ್ಯೂಬ್ ಅಲ್ಲಿ ತನ್ನ ವೀವರ್ಸ್ಗಳಿಗೆ ವಿಭಿನ್ನವಾಗಿ ಏನಾದರೂ ಮಾಡಬೇಕೆಂದು ಯೋಚಿಸುತ್ತಿರುವಾಗ ಒಂದು ಭಯಂಕರವಾದ ಘೋಸ್ಟ್ ಟೌನ್ ಗೆ ಹೋಗಿ ಘೋಸ್ಟ್ ಹಂಟಿಂಗ್ ವೀಡಿಯೋ ಮಾಡಲು ನಿರ್ಧರಿಸುತ್ತಾನೆ. ಇದಕ್ಕೆ ಸ್ನೇಹಿತರಿಂದ ವಿರೋಧ ವ್ಯಕ್ತವಾಗುತ್ತದೆ. ನಂತರ ನಾಯಕ ಘೋಸ್ಟ್ ಟೌನ್ ಗೆ ಹೋಗುವನೆ, ತಾನು ಪ್ರೀತ್ಸಿದ ಹುಡುಗಿಯನ್ನು ಮರಳಿ ಪಡೆಯುವನೆ? ಯೂ-ಟ್ಯೂಬ್ ಬ್ಲಾಗರ್ ಆಗಿ ಸಾಧನೆ ಮಾಡುವನೆ? ಎನ್ನುವುದು ಚಿತ್ರದ ಕಥಾಹಂದರ

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,